ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಉದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
ಪ್ರತಿ ಸುದ್ದಿಯ ಧ್ವನಿ
suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue:194 ಸಂಚಿಕೆ: 194 | Date:25-08-2026 Tuesday | RNI NO : KARKAN/2021/80805 | L2/RNP-1285/TMR/2025-27 | Page :4 ಪುಟ : 4 | Price: 1.00 ಬೆಲೆ: 1.00 ರೂ

# ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ

# ಆಕ್ಷೇಪಣೆ ಸಲ್ಲಿಕೆಗೆ ಸೆಪ್ಟೆಂಬರ್ 23 ಕೊನೆಯ ದಿನ

**ತುಮಕೂರು:** ಚುನಾವಣಾ ಆಯೋಗದ ನಿರ್ದೇಶನದಂತೆ ಜಿಲ್ಲೆಯಲ್ಲಿ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಕರಡು ಮತದಾರರ ಪಟ್ಟಿಯನ್ನು ಸೋಮವಾರ ಅಧಿಕೃತವಾಗಿ ಪ್ರಕಟಿಸಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಶುಭ ಕಲ್ಯಾಣ್ ತಿಳಿಸಿದರು.

ಸೋಮವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, ಜಿಲ್ಲೆಯ ಎಲ್ಲಾ ಉಪವಿಭಾಗಾಧಿಕಾರಿ, ತಹಶೀಲ್ದಾರ್, ತಾಲೂಕು ಪಂಚಾಯಿತಿ, ಗ್ರಾಮ ಪಂಚಾಯಿತಿ ಕಚೇರಿ ಹಾಗೂ ಮತಗಟ್ಟೆಗಳಲ್ಲಿ ಕರಡು ಮತದಾರರ ಪಟ್ಟಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಪ್ರಕಟಿಸಲಾಗಿದೆ ತಿಳಿಸಿದರು.

ಸೆ.23 ಆಕ್ಷೇಪಣೆಗೆ ಕೊನೆ ದಿನ: ಮತದಾರರು ಹಾಗೂ ರಾಜಕೀಯ ಪಕ್ಷಗಳ ಪ್ರತಿನಿಧಿಗಳು ಕರಡು ಪಟ್ಟಿಯನ್ನು ಪರಿಶೀಲಿಸಿ, ಯಾವುದೇ ಹಕ್ಕು ಮತ್ತು ಆಕ್ಷೇಪಣೆಗಳಿದ್ದಲ್ಲಿ ಆಗಸ್ಟ್ 24 ರಿಂದ ಸೆಪ್ಟೆಂಬರ್ 23ರವರೆಗೆ ಆಕ್ಷೇಪಣೆ ಸಲ್ಲಿಕೆಗೆ ಅವಕಾಶ ಕಲ್ಪಿಸಲಾಗಿದೆ ಎಂದರು.

ಹೊಸ ಮತದಾರರ ನೋಂದಣಿ: ಕರಡು ಪಟ್ಟಿಯಲ್ಲಿ ಹೆಸರಿಲ್ಲದ ಅರ್ಹ ಮತದಾರರು ನಮೂನೆ-6ರ ಮೂಲಕ ಮತದಾರರ ನೋಂದಣಾಧಿಕಾರಿಗಳು, ಬಿಎಲ್‌ಒ ಅಥವಾ ವೋಟರ್ ಸರ್ವಿಸ್ ಪೋರ್ಟಲ್ ಮೂಲಕ ಹೆಸರು ಸೇರ್ಪಡೆಗೆ ಅರ್ಜಿ ಸಲ್ಲಿಸಬಹುದು. 2026ರ ಅಕ್ಟೋಬರ್ 1ಕ್ಕೆ 18 ವರ್ಷ ತುಂಬುವ ಯುವ ಮತದಾರರೂ ಕೂಡ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

20,61,786 ಮತದಾರರು: ಮತದಾರರ ಪಟ್ಟಿ ಪರಿಷ್ಕರಣೆಯ ನಂತರ ಕರಡು ಮತದಾರರ ಪಟ್ಟಿಯಂತೆ ಜಿಲ್ಲೆಯಲ್ಲಿ ಒಟ್ಟು 20,61,786 ಮತದಾರರಿದ್ದಾರೆ. ಈ ಪೈಕಿ 10,22,023 ಪುರುಷರು, 10,39,709 ಮಹಿಳೆಯರು ಹಾಗೂ 54 ಇತರರಿದ್ದಾರೆ ಎಂದು ತಿಳಿಸಿದರು.

ಮತಗಟ್ಟೆಗಳ ಸಂಖ್ಯೆ ಏರಿಕೆ: ಮತಗಟ್ಟೆಗಳ ದೃಢೀಕರಣ ಕಾರ್ಯದ ನಂತರ ಜಿಲ್ಲೆಯಲ್ಲಿ 118 ಹೊಸ ಮತಗಟ್ಟೆಗಳನ್ನು ಗುರುತಿಸಲಾಗಿದ್ದು, ಈ ಹಿಂದೆಯಿದ್ದ ಒಟ್ಟು ಮತಗಟ್ಟೆಗಳ ಸಂಖ್ಯೆ 2627 ರಿಂದ 2745ಕ್ಕೆ ಏರಿಕೆಯಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ವಿಧಾನಸಭಾ ಕ್ಷೇತ್ರವಾರು ಮತದಾರರ ಪಟ್ಟಿ ಪರಿಷ್ಕರಣೆಯ ಅಂಗವಾಗಿ ಮತಗಟ್ಟೆಗಳ ಪುನರ್‌ರಚನೆ ಪ್ರಕ್ರಿಯೆ ಪೂರ್ಣಗೊಂಡಿದೆ. 1,200ಕ್ಕಿಂತ ಹೆಚ್ಚು



ಮತದಾರರನ್ನು ಹೊಂದಿರುವ ಮತಗಟ್ಟೆಗಳನ್ನು ವಿಭಜಿಸಿ ಹೊಸ ಮತಗಟ್ಟೆಗಳನ್ನು ಸ್ಥಾಪಿಸಿದೆ. ಕಟ್ಟಡಗಳ ಸ್ಥಳ ಬದಲಾವಣೆ ಹಾಗೂ ಹೆಸರು ಬದಲಾವಣೆ ಕೈಗೊಳ್ಳಲಾಗಿದೆ.

ಮತದಾರರ ಪಟ್ಟಿ ಪರಿಷ್ಕರಣೆ : ಕರಡು ಮತದಾರರ ಪಟ್ಟಿ : ಜಿಲ್ಲೆಯಾದ್ಯಂತ ಒಟ್ಟು 2745 ಮತಗಟ್ಟೆಗಳಿದ್ದು, ಚಿಕ್ಕನಾಯಕನಹಳ್ಳಿ ಕ್ಷೇತ್ರದಲ್ಲಿ 270 ಮತಗಟ್ಟೆಗಳಿದ್ದು, 101573 ಪುರುಷ, 103582 ಮಹಿಳೆ ಮತ್ತು 1 ಇತರ ಸೇರಿದಂತೆ ಒಟ್ಟು 205156 ಮತದಾರರಿದ್ದಾರೆ.

ತಿಪಟೂರು ಕ್ಷೇತ್ರದಲ್ಲಿ 232 ಮತಗಟ್ಟೆಗಳಿದ್ದು, 82729 ಪುರುಷ, 87990 ಮಹಿಳೆ ಮತ್ತು 2 ಇತರೆ ಸೇರಿದಂತೆ ಒಟ್ಟು 170721 ಮತದಾರರಿದ್ದಾರೆ.

ತುರುವೇಕೆರೆ ಕ್ಷೇತ್ರದಲ್ಲಿ 229 ಮತಗಟ್ಟೆಗಳಿದ್ದು, 84548 ಪುರುಷ, 86142 ಮಹಿಳೆ ಸೇರಿದಂತೆ ಒಟ್ಟು 170690 ಮತದಾರರಿದ್ದಾರೆ.

ಕುಣಿಗಲ್ ಕ್ಷೇತ್ರದಲ್ಲಿ 270 ಮತಗಟ್ಟೆಗಳಿದ್ದು, 93599 ಪುರುಷ, 93631 ಮಹಿಳೆ ಸೇರಿದಂತೆ ಒಟ್ಟು 187230 ಮತದಾರರಿದ್ದಾರೆ.

ತುಮಕೂರು ನಗರ ಕ್ಷೇತ್ರದಲ್ಲಿ 247 ಮತಗಟ್ಟೆಗಳಿದ್ದು, 95980 ಪುರುಷ, 103193 ಮಹಿಳೆ ಮತ್ತು 14 ಇತರೆ ಸೇರಿದಂತೆ ಒಟ್ಟು 199187 ಮತದಾರರಿದ್ದಾರೆ.

ತುಮಕೂರು ಗ್ರಾಮಾಂತರ ಕ್ಷೇತ್ರದಲ್ಲಿ 238 ಮತಗಟ್ಟೆಗಳಿದ್ದು, 94919 ಪುರುಷ, 97588 ಮಹಿಳೆ ಮತ್ತು 5 ಇತರೆ ಸೇರಿದಂತೆ ಒಟ್ಟು 192512 ಮತದಾರರಿದ್ದಾರೆ.

ಕೊರಟಗೆರೆ ಕ್ಷೇತ್ರದಲ್ಲಿ 256 ಮತಗಟ್ಟೆಗಳಿದ್ದು, 103303 ಪುರುಷ, 106185 ಮಹಿಳೆ ಮತ್ತು 7 ಇತರೆ ಸೇರಿದಂತೆ ಒಟ್ಟು 209495 ಮತದಾರರಿದ್ದಾರೆ.

ಗುಬ್ಬಿ ಕ್ಷೇತ್ರದಲ್ಲಿ 222 ಮತಗಟ್ಟೆಗಳಿದ್ದು, 85022 ಪುರುಷ, 86690 ಮಹಿಳೆ ಮತ್ತು 6 ಇತರೆ ಸೇರಿದಂತೆ ಒಟ್ಟು 171718 ಮತದಾರರಿದ್ದಾರೆ.

ಶಿರಾ ಕ್ಷೇತ್ರದಲ್ಲಿ 282 ಮತಗಟ್ಟೆಗಳಿದ್ದು, 105931 ಪುರುಷ, 105436 ಮಹಿಳೆ ಮತ್ತು 7 ಇತರೆ ಸೇರಿದಂತೆ ಒಟ್ಟು 211374 ಮತದಾರರಿದ್ದಾರೆ.

ಪಾವಗಡ ಕ್ಷೇತ್ರದಲ್ಲಿ 251 ಮತಗಟ್ಟೆಗಳಿದ್ದು, 93335 ಪುರುಷ, 89969 ಮಹಿಳೆ ಮತ್ತು 8 ಇತರೆ ಸೇರಿದಂತೆ ಒಟ್ಟು 183312 ಮತದಾರರಿದ್ದಾರೆ.

ಮಧುಗಿರಿ ಕ್ಷೇತ್ರದಲ್ಲಿ 248 ಮತಗಟ್ಟೆಗಳಿದ್ದು, 88807 ಪುರುಷ, 88326 ಮಹಿಳೆ ಮತ್ತು 5 ಇತರೆ ಸೇರಿದಂತೆ ಒಟ್ಟು 177138 ಮತದಾರರಿದ್ದಾರೆ.

ತಿದ್ದುಪಡಿ ದೋಷವಿರುವ 69236 ಮತದಾರರು ಹಾಗೂ ಮ್ಯಾಪಿಂಗ್ ಆಗದ 42642 ಸೇರಿದಂತೆ ಒಟ್ಟು 111878 ಮತದಾರರಿಗೆ ನೋಟಿಸ್ ನೀಡಲಾಗುತ್ತಿದ್ದು, ನಿಗದಿತ ದಿನಾಂಕದಂದು ಸೂಕ್ತ ದಾಖಲೆಗಳೊಂದಿಗೆ ಹಾಜರಾಗಲು ಸೂಚಿಸಲಾಗಿದೆ ಎಂದು ತಿಳಿಸಿದರು.237093 ಎಎಸ್‌ಡಿಡಿಒ ಮತದಾರರು:

ಮತದಾರರ ವಿಶೇಷ ಸಮಗ್ರ ಪರಿಷ್ಕರಣೆಗೆ (ಎಸ್‌ಐಆರ್) ಸಂಬಂಧಿಸಿದಂತೆ ಜಿಲ್ಲೆಯ 11 ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಮನೆ-ಮನೆ ಸಮೀಕ್ಷೆ ಹಾಗೂ ಪರಿಶೀಲನೆ ಕಾರ್ಯದಲ್ಲಿ ಗೈರು ಹಾಜರಿರುವವರು, ಶಾಶ್ವತವಾಗಿ ಸ್ಥಳಾಂತರಗೊಂಡವರು, ಮೃತಪಟ್ಟವರು, ಈಗಾಗಲೇ ನೋಂದಾಯಿಸಿಕೊಂಡಿರುವ(ಡುಪ್ಲಿಕೇಟ್) ಹಾಗೂ ಇತರೆ ವರ್ಗಗಳಿಗೆ ಸೇರಿದ ಒಟ್ಟು 237093 ಎಎಸ್‌ಡಿಡಿಒ ಮತದಾರರನ್ನು ಗುರುತಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು.

ಜಿಲ್ಲೆಯಲ್ಲಿ ಒಟ್ಟು 237093 ಎಎಸ್‌ಡಿಡಿಒ ಮತದಾರರು :ಜಿಲ್ಲೆಯಾದ್ಯಂತ ಒಟ್ಟು 33021 ಮತದಾರರು ಗೈರು ಹಾಜರಿದ್ದು, 134264 ಮಂದಿ ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ. 49084 ಮಂದಿ ಮೃತಪಟ್ಟಿದ್ದು, 18829 ಡುಪ್ಲಿಕೇಟ್ ಹಾಗೂ 1895 ಇತರೆ ಪ್ರಕರಣಗಳು ಕಂಡು ಬಂದಿದ್ದು, ಒಟ್ಟು 237093 ಎಎಸ್‌ಡಿಡಿಒ ಮತದಾರರನ್ನು ಗುರುತಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

## ವಿವಿಧ ಪ್ರಶಸ್ತಿಗಾಗಿ ಅರ್ಜಿ ಆಹ್ವಾನ

**ತುಮಕೂರು:** ಪಾವಗಡ ತಾಲ್ಲೂಕು ಕೃಷಿ ಇಲಾಖೆ ವತಿಯಿಂದ ಕೃಷಿ ಪಂಡಿತ, ಕೃಷಿ ಪ್ರಶಸ್ತಿ(ಬೆಳೆ ಸ್ಪರ್ಧೆ) ಹಾಗೂ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಆಸಕ್ತ ರೈತ ಮತ್ತು ರೈತ ಮಹಿಳೆಯರು ಕೃಷಿ ಪಂಡಿತ ಮತ್ತು ಕೃಷಿ ಪ್ರಶಸ್ತಿ(ಬೆಳೆ ಸ್ಪರ್ಧೆ)ಗೆ k-kisan portal£ÀÄr RSK login ಅಥವಾ ಛಿಣುದಜಿಟಿ ಟಂರುಟಿ ಮೂಲಕ ಹತ್ತಿರದ ರೈತ ಸಂಪರ್ಕ ಕೇಂದ್ರ/ನಾಗರಿಕ ಸೇವಾ ಕೇಂದ್ರದಲ್ಲಿ ಅಗತ್ಯ ದಾಖಲಾತಿಗಳೊಂದಿಗೆ ರೈತರ FID(FRUITS ID) ಸಂಖ್ಯೆಯನ್ನು ಬಳಸಿಕೊಂಡು ಆನ್‌ಲೈನ್ ಮೂಲಕ ಆಗಸ್ಟ್ 31ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ತಾಲೂಕು ಮಟ್ಟದ ಆತ್ಮ ಶ್ರೇಷ್ಠ ಕೃಷಿಕ ಪ್ರಶಸ್ತಿಗೆ ಕೃಷಿಯಲ್ಲಿ ಸಮಗ್ರ ಬೆಳೆ ಪದ್ಧತಿ, ಸಮಗ್ರ ನೀರು ನಿರ್ವಹಣೆ, ಸಾವಯವ ಕೃಷಿ, ವೈಜ್ಞಾನಿಕ ಯಂತ್ರೋಪಕರಣಗಳ ಬಳಕೆ, ತೋಟಗಾರಿಕೆ, ಹೈನುಗಾರಿಕೆ, ಕೋಳಿ ಸಾಕಾಣಿಕೆ, ಮೀನುಗಾರಿಕೆ, ರೇಷ್ಮೆ ಬೇಸಾಯ, ಹೈಟೆಕ್ ಹಸಿರು ಮನೆ ಅಳವಡಿಕೆ, ಕೃಷಿ ಸಂಸ್ಕರಣೆ, ಅರಣ್ಯ ಕೃಷಿ ಮಾಡುತ್ತಿರುವ ಆಸಕ್ತ ರೈತರು ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿಯನ್ನು ಸಂಬಂಧಪಟ್ಟ ಹೋಬಳಿಯ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಚೇರಿಯಲ್ಲಿ ಪಡೆದು ಸಲ್ಲಿಸಬಹುದಾಗಿದೆ ಎಂದು ಪಾವಗಡ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕರಡು ಮತದಾರರ ಪಟ್ಟಿ ಪ್ರಕಟ

**ತುಮಕೂರು:** ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ 132-ತುಮಕೂರು ನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಆಗಸ್ಟ್ 24ರಂದು ಮತಗಟ್ಟೆವಾರು ಕರಡು ಮತದಾರರ ಪಟ್ಟಿಯನ್ನು ಎಲ್ಲಾ ಮತಗಟ್ಟೆ ಕೇಂದ್ರದಲ್ಲಿ ಮತ್ತು ತುಮಕೂರು ಮಹಾನಗರಪಾಲಿಕೆಯ ಸೂಚನಾ ಫಲಕದಲ್ಲಿ ಪ್ರಚುರಪಡಿಸಲಾಗಿದೆ ಎಂದು ಪಾಲಿಕೆಯ ಆಯುಕ್ತರು ಹಾಗೂ ಮತದಾರರ ನೋಂದಣಾಧಿಕಾರಿ ತಿಳಿಸಿದ್ದಾರೆ. ಸಾರ್ವಜನಿಕರು ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ನೋಂದಣಿ ಮಾಹಿತಿಯನ್ನು ಮತಗಟ್ಟೆ ಕೇಂದ್ರ, ತುಮಕೂರು ಮಹಾನಗರಪಾಲಿಕೆಯ ಸೂಚನಾ ಫಲಕ ಮತ್ತು ವೆಬ್‌ಸೈಟ್ ಃಣಣಠಿ:// ಛಿಜಂ.ಇಚಿಡಿಟಿಚಿಣಚಿಞಚಿ.ರಿಠತಿ.ಟಿ ನಲ್ಲಿ ಪರಿಶೀಲಿಸಿಕೊಳ್ಳಬಹುದಾಗಿದೆ. ನಿಗದಿತ ಅವಧಿಯೊಳಗೆ ಭರ್ತಿ ಮಾಡಿದ ಮತದಾರರ ಗಣತಿ ನಮೂನೆಗಳನ್ನು ಸಲ್ಲಿಸಲು ಸಾಧ್ಯವಾಗದ ಮತದಾರರು ಸೆಪ್ಟೆಂಬರ್ 23ರವರೆಗೆ ಹಕ್ಕು/ ಆಕ್ಷೇಪಣೆಗಳ ಅವಧಿಯಲ್ಲಿ ನಿಗದಿತ ಘೋಷಣಾ ಪತ್ರದೊಂದಿಗೆ ನಮೂನೆ-6ನ್ನು ಸಲ್ಲಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಬಹುದಾಗಿದೆ ಮತ್ತು ಕರಡು ಮತದಾರರ ಪಟ್ಟಿಯಲ್ಲಿ ತಮ್ಮ ಹೆಸರು ಹಾಗೂ ಇತರೆ ಮಾಹಿತಿಯನ್ನು ತಿದ್ದುಪಡಿ ಮಾಡಲು ನಮೂನೆ-8ನ್ನು ಭರ್ತಿ ಮಾಡಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಲು ಸಾರ್ವಜನಿಕರಲ್ಲಿ ಅವರು ಮನವಿ ಮಾಡಿದ್ದಾರೆ.

## ನೊಳಂಬ ಲಿಂಗಾಯಿತ ಸಂಘಕ್ಕೆ ಸಾಗರನಹಳ್ಳಿ ನಟರಾಜು ಹಾಗೂ ಬೆಟ್ಟದಹಳ್ಳಿ ರೇಣುಕಾರಾಧ್ಯ ಆಯ್ಕೆ





**ಗುಬ್ಬಿ:** ನೊಳಂಬ ಲಿಂಗಾಯಿತ ಸಂಘದ ಕೇಂದ್ರಕ್ಕೆ ಜಿಲ್ಲೆಯಿಂದ ಆಯ್ಕೆಯಾದ ಎಂಟು ನಿರ್ದೇಶಕರ ಪೈಕಿ ಗುಬ್ಬಿ ತಾಲ್ಲೂಕಿನ ಸಾಗರನಹಳ್ಳಿ ನಟರಾಜು ಹಾಗೂ ಬೆಟ್ಟದಹಳ್ಳಿ ರೇಣುಕಾರಾಧ್ಯ ಆಯ್ಕೆಯಾಗಿದ್ದಾರೆ. ಕೇಂದ್ರ ಸಂಘಕ್ಕೆ ತುಮಕೂರು ಜಿಲ್ಲೆಯಿಂದ ಎಂಟು ನಿರ್ದೇಶಕರ ಆಯ್ಕೆಗೆ ಅವಕಾಶವಿತ್ತು. ಒಟ್ಟು 31 ಮಂದಿ ಅಭ್ಯರ್ಥಿಗಳ ಪೈಕಿ ಎಂಟು ಮಂದಿ ಭಾನುವಾರ ನಡೆದ ಚುನಾವಣೆಯಲ್ಲಿ ಚುನಾಯಿತರಾಗಿದ್ದಾರೆ. ಸಿಂಡಿಕೇಟ್ ಮೂಲಕ ನಾಲ್ಕು ತಂಡಗಳು ಜಿಲ್ಲೆಯ ಎಲ್ಲಾ ತಾಲ್ಲೂಕಿನಲ್ಲಿ ಪ್ರವಾಸ ಕೈಗೊಂಡು ಮತಯಾಚನೆ ನಡೆಸಿದ್ದರು. ಏಳು ಸಾವಿರಕ್ಕೂ ಅಧಿಕ ಮತಗಳ ಬೇಟೆಗೆ ಓಡಾಡಿದ್ದ ಎಲ್ಲಾ ಅಭ್ಯರ್ಥಿಗಳ ಪೈಕಿ ಅಂತಿಮವಾಗಿ ಎಂಟು ಮಂದಿ ಚುನಾಯಿತರಾಗಿ ಈ ಪೈಕಿ ಗುಬ್ಬಿ ತಾಲ್ಲೂಕಿನ ಸಾಗರನಹಳ್ಳಿ ನಟರಾಜು ಅವರಿಗೆ 2070 ಮತಗಳು ಹಾಗೂ ಬೆಟ್ಟದಹಳ್ಳಿ ರೇಣುಕಾರಾಧ್ಯ ಅವರಿಗೆ 1962 ಮತಗಳು ಬಂದಿವೆ.

ಸಾಗರನಹಳ್ಳಿ ನಟರಾಜು ಹಾಗೂ ಬೆಟ್ಟದಹಳ್ಳಿ ರೇಣುಕಾರಾಧ್ಯ ಮಾತನಾಡಿ ನೊಳಂಬ ಲಿಂಗಾಯಿತ ಸಮಾಜದ ಶ್ರೇಯೋಭಿವೃದ್ಧಿಗೆ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ. ಜಿಲ್ಲೆಯ ಸಂಘದ ಮತದಾರರು ಹೆಚ್ಚು ಮತ ನೀಡಿ ಆಯ್ಕೆ ಮಾಡಿದ್ದಾರೆ. ಅವರ ಒತ್ತಾಸೆಯಂತೆ ಸಂಘದ ಮೂಲಕ ಸಮಾಜದ ಏಳಿಗೆಗೆ ಶ್ರಮಿಸುತ್ತೇವೆ ಎಂದು ಭರವಸೆ ನೀಡಿದರು. ಇದೇ ಸಂದರ್ಭದಲ್ಲಿ ಗೆಲುವು ಸಾಧಿಸಿದ

## ಹಬ್ಬಗಳ ಆಚರಣೆ ವೇಳೆ ನಿಯಮ ಉಲ್ಲಂಘಿಸಿದರೆ ಕ್ರಮ: ಸಿಪಿಐ ಪ್ರವೀಣ್ ಕುಮಾರ್




**ಶಿರಾ:** ಈದ್ ಮಿಲಾದ್, ಗೌರಿ-ಗಣೇಶ ಹಾಗೂ ದಸರಾ ಹಬ್ಬಗಳ ಹಿನ್ನೆಲೆಯಲ್ಲಿ ಶಾಂತಿ, ಸುವ್ಯವಸ್ಥೆ ಮತ್ತು ಸಾರ್ವಜನಿಕ ಸುರಕ್ಷತೆ ಕಾಪಾಡುವ ಉದ್ದೇಶದಿಂದ ಶಿರಾ ನಗರ ಪೊಲೀಸ್ ಠಾಣೆ ವತಿಯಿಂದ ಶಾಮಿಯಾನ, ಲೈಟಿಂಗ್, ಧ್ವನಿವರ್ಧಕ, ಬ್ಯಾನರ್ ಹಾಗೂ ಫ್ಲೆಕ್ಸ್ ಮಾಲೀಕರಿಗೆ ಪೂರ್ವಭಾವಿ ಸಭೆ ನಡೆಸಲಾಯಿತು.

ಶಿರಾ ನಗರ ಠಾಣೆಯ ಸಿಪಿಐ ಪ್ರವೀಣ್ ಕುಮಾರ್ ಅವರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಹಬ್ಬಗಳ ಸಂದರ್ಭದಲ್ಲಿ ಅನುಸರಿಸಬೇಕಾದ ನಿಯಮಗಳು ಹಾಗೂ ಕಾನೂನು ಕ್ರಮಗಳ ಕುರಿತು ಮಾಲೀಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ಸಭೆಯಲ್ಲಿ ಮಾತನಾಡಿದ ಸಿಪಿಐ ಪ್ರವೀಣ್ ಕುಮಾರ್, ಕರ್ನಾಟಕ ಸರ್ಕಾರ ಹಾಗೂ ಸುಪ್ರೀಂ ಕೋರ್ಟ್ ಆದೇಶಗಳಂತೆ ಹಬ್ಬಗಳ ಸಂದರ್ಭದಲ್ಲಿ ಲೈಟಿಂಗ್, ಶಾಮಿಯಾನ, ಧ್ವನಿವರ್ಧಕ ಮತ್ತು ಫ್ಲೆಕ್ಸ್ ಅಳವಡಿಸುವ ಮುನ್ನ ಸಂಬಂಧಪಟ್ಟ ಇಲಾಖೆಗಳ ಅನುಮತಿ ಪಡೆಯುವುದು ಕಡ್ಡಾಯವಾಗಿದೆ ಎಂದು ತಿಳಿಸಿದರು.

ರಸ್ತೆಗಳಲ್ಲಿ ಶಾಮಿಯಾನ ಹಾಗೂ ಲೈಟಿಂಗ್ ಅಳವಡಿಸುವುದರಿಂದ ಆಂಬುಲೆನ್ಸ್ ಸೇರಿದಂತೆ ತುರ್ತು ವಾಹನಗಳ ಸಂಚಾರಕ್ಕೆ ತೊಂದರೆಯಾಗುವ ಸಾಧ್ಯತೆ ಇರುವುದರಿಂದ ರಸ್ತೆಗಳಲ್ಲಿ ಯಾವುದೇ ಕಾರಣಕ್ಕೂ ಶಾಮಿಯಾನ, ಲೈಟಿಂಗ್ ಅಥವಾ ಫ್ಲೆಕ್ಸ್ ಅಳವಡಿಸಬಾರದು. ನಿಯಮ ಉಲ್ಲಂಘಿಸಿದಲ್ಲಿ ಭಾರತೀಯ ನ್ಯಾಯ ಸಂಹಿತೆಯ ಸಂಬಂಧಿತ ನಿಯಮಗಳಡಿ, ಸಾರ್ವಜನಿಕ ದಾರಿಯಲ್ಲಿ ಅಡ್ಡಿಪಡಿಸುವ ಪ್ರಕರಣ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಶಾಮಿಯಾನ ಹಾಗೂ ಲೈಟಿಂಗ್ ಅಳವಡಿಸಲು ಆಯಾ ಜಾಗದ ಮಾಲೀಕರಿಂದ ಎನ್‌ಒಸಿ ಪಡೆಯಬೇಕು. ಅಗತ್ಯವಿರುವಲ್ಲಿ ನಗರಸಭೆ, ತಹಶೀಲ್ದಾರ್ ಕಚೇರಿ, ಪೊಲೀಸ್ ಇಲಾಖೆ, ಕೆಇಬಿ ಹಾಗೂ ಅಗ್ನಿಶಾಮಕ ದಳದಿಂದಲೂ ಅನುಮತಿ ಪಡೆಯಬೇಕು ಎಂದು ಸೂಚಿಸಿದರು. ಲೈಟಿಂಗ್‌ನಲ್ಲಿ ಶಾರ್ಟ್ ಸರ್ಕ್ಯೂಟ್ ಅಥವಾ ಇತರ ವಿದ್ಯುತ್ ಅವಘಡ ಸಂಭವಿಸಿದ ಸಂದರ್ಭದಲ್ಲಿ ತಕ್ಷಣ ಬೆಂಕಿ ನಂದಿಸಲು ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಶಾಮಿಯಾನದ ಒಳಭಾಗದಲ್ಲಿ ಕುರ್ಚಿ, ಟೇಬಲ್ ಸೇರಿದಂತೆ ಅಗತ್ಯ ವ್ಯವಸ್ಥೆಗಳನ್ನು ಸುರಕ್ಷಿತವಾಗಿ ಅಳವಡಿಸಬೇಕು ಎಂದರು.

ಫ್ಲೆಕ್ಸ್ ಹಾಗೂ ಬ್ಯಾನರ್‌ಗಳಲ್ಲಿನ ಬರಹಗಳನ್ನು ಮುದ್ರಿಸುವ ಮುನ್ನ ಪರಿಶೀಲಿಸಬೇಕು. ಯಾವುದೇ ಧರ್ಮ, ಜಾತಿ, ವ್ಯಕ್ತಿ ಅಥವಾ ರಾಜಕೀಯ ಮುಖಂಡರಿಗೆ ನೋವುಂಟು ಮಾಡುವ, ಅವಹೇಳನಕಾರಿ ಅಥವಾ ಗೊಂದಲ ಸೃಷ್ಟಿಸುವಂತಹ ಪದಗಳನ್ನು ಬಳಸಬಾರದು. ಅಂತಹ ಫ್ಲೆಕ್ಸ್‌ಗಳು ಕಂಡುಬಂದಲ್ಲಿ ಕೂಡಲೇ ಪೊಲೀಸ್ ಇಲಾಖೆಯ ಗಮನಕ್ಕೆ ತರಬೇಕು ಎಂದು ತಿಳಿಸಿದರು.

10 ಅಡಿಗಿಂತ ಹೆಚ್ಚಿನ ಎತ್ತರದ ಫ್ಲೆಕ್ಸ್ ಹಾಗೂ ಬ್ಯಾನರ್‌ಗಳಿಗೆ ಅನುಮತಿ ಇಲ್ಲ. 20ರಿಂದ 30 ಅಡಿ ಎತ್ತರದ ಫ್ಲೆಕ್ಸ್ ಅಳವಡಿಸಬೇಕಾದ ಸಂದರ್ಭದಲ್ಲಿ ಸಂಬಂಧಪಟ್ಟ ನಗರಸಭೆ, ಪೊಲೀಸ್ ಇಲಾಖೆ ಹಾಗೂ ತಹಶೀಲ್ದಾರ್ ಅವರ ಅನುಮತಿ ಪಡೆಯಬೇಕು. ಅನುಮತಿ ಇಲ್ಲದೆ ಫ್ಲೆಕ್ಸ್ ಅಳವಡಿಸಿದರೆ ಯಾವುದೇ ಮುಲಾಜಿಲ್ಲದೆ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಸಿಪಿಐ ಪ್ರವೀಣ್ ಕುಮಾರ್ ಖಡಕ್ ಎಚ್ಚರಿಕೆ ನೀಡಿದರು. ಅದೇ ರೀತಿ, ಸುಪ್ರೀಂ ಕೋರ್ಟ್ ಆದೇಶದಂತೆ ರಾತ್ರಿ 10 ಗಂಟೆಯ ನಂತರ ಧ್ವನಿವರ್ಧಕ ಹಾಗೂ ಸೌಂಡ್ ಸಿಸ್ಟಂ ಬಳಸುವಂತಿಲ್ಲ. ಹಬ್ಬಗಳ ಸಂದರ್ಭದಲ್ಲಿ ಸಾರ್ವಜನಿಕರಿಗೆ ತೊಂದರೆಯಾಗದಂತೆ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಅವರು ಹೇಳಿದರು.

## ಎಸ್‌ಎಸ್‌ಐಟಿಯಲ್ಲಿ ಕಟ್ಟಡಗಳ ವಿನ್ಯಾಸ ಕುರಿತು ಐದು ದಿನಗಳ ಕಾರ್ಯಾಗಾರ; ಬಹುಮಹಡಿ ಕಟ್ಟಡಗಳ ಸುರಕ್ಷತೆ ಕುರಿತು ಚರ್ಚೆ



**ತುಮಕೂರು:** ನಗರದ ಶ್ರೀ ಸಿದ್ದಾರ್ಥ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎಸ್‌ಎಸ್‌ಐಟಿ)ಯ ಸಿವಿಲ್ ಎಂಜಿನಿಯರಿಂಗ್ ವಿಭಾಗದ ವತಿಯಿಂದ ಆಧುನಿಕ ತಂತ್ರಜ್ಞಾನ ಬಳಸಿಕೊಂಡು ಬಹುಮಹಡಿ ಕಟ್ಟಡಗಳ ?ರಚನಾತ್ಮಕ ವಿಶ್ಲೇಷಣೆ ಮತ್ತು ವಿನ್ಯಾಸ? ಕುರಿತು ಐದು ದಿನಗಳ ಕಾರ್ಯಾಗಾರ ಇಂದಿನಿಂದ(ಸೋಮವಾರದಿಂದ) ಆರಂಭಗೊಂಡಿತು.

ಎಸ್‌ಎಸ್‌ಐಟಿ ಕ್ಯಾಂಪಸ್‌ನ ಸರ್. ಎಂ.ವಿ.ಬ್ಲಾಕ್‌ನ ಜಿ.ಪಿ. ನೆಕ್ಸಸ್ ಸೆಮಿನಾರ್ ಹಾಲ್‌ನಲ್ಲಿ ಆಗಸ್ಟ್ 24ರಿಂದ 28ರವರೆಗೆ ಏರ್ಪಟ್ಟಿರುವ ಪ್ರಾಧ್ಯಾಪಕರ ಪ್ರಗತಿ ಕಾರ್ಯಾಗಾರದ ಉದ್ಘಾಟನೆಯನ್ನು ಬೆಂಗಳೂರಿನ ಬಿಎಂಎಸ್ ಇಂಜಿನಿಯರಿಂಗ್ ಕಾಲೇಜಿನ ಸಿವಿಲ್ ಎಂಜಿನಿಯರಿಂಗ್ ಪ್ರಾಧ್ಯಾಪಕರಾದ ಡಾ.ಶ್ರೀನಿವಾಸ್ ಮೂರ್ತಿ ಚಾಲನೆ ನೀಡಿ ಮಾತನಾಡಿದರು.

ಇಂದಿನ ಸಿವಿಲ್ ಎಂಜಿನಿಯರಿಂಗ್ ಕ್ಷೇತ್ರದ ವಿಶಾಲವಾದ ವ್ಯಾಪ್ತಿಯನ್ನು ಅರ್ಥಮಾಡಿಕೊಳ್ಳುವುದು ಉದಯೋನ್ಮುಖ ಎಂಜಿನಿಯರ್‌ಗಳಿಗೆ ಅತ್ಯಂತ ಮುಖ್ಯವಾಗಿದೆ. ಸಿವಿಲ್ ಎಂಜಿನಿಯರಿಂಗ್ ಈಗ ಪ್ರತ್ಯೇಕವಾದ ಅಥವಾ ಸೀಮಿತವಾದ ವಿಭಾಗವಾಗಿ ಉಳಿದಿಲ್ಲ. ಇತರ ಎಲ್ಲಾ ಎಂಜಿನಿಯರಿಂಗ್ ವಿಭಾಗಗಳಿಗೂ ಅತ್ಯಗತ್ಯವಾಗಿದೆ. ಇಂದು ಎಐ, ಕಂಪ್ಯೂಟರ್ ಸೈನ್ಸ್ ಮತ್ತು ಅದಕ್ಕೆ ಸಂಬಂಧಿಸಿದ ತಂತ್ರಜ್ಞಾನಗಳ ಪ್ರಭಾವ ಪ್ರತಿಯೊಂದು ಕಡೆಯೂ ಹೆಚ್ಚುತ್ತಿದೆ. ಅವುಗಳಿಗೆ ಸಿವಿಲ್ ಎಂಜಿನಿಯರಿಂಗ್ ಅಥವಾ ಮೂಲ ಎಂಜಿನಿಯರಿಂಗ್ ವಿಭಾಗಗಳ ತಂತ್ರಜ್ಞಾನದ ಬೆಂಬಲ ಬೇಕೇ ಬೇಕು. ಎಲ್ಲರೂ ಒಟ್ಟಾಗಿ ಕೆಲಸ ಮಾಡಬೇಕಾದ ಅಗತ್ಯವಿದೆ ಎಂದು ಅವರು ಹೇಳಿದರು.

ಇಂದಿನ ಪ್ರಪಂಚದಲ್ಲಿ ಕೃತಕ ಬುದ್ಧಿಮತ್ತೆ (ಎಐ) ಯಂತಹ ಹೊಸ ತಂತ್ರಜ್ಞಾನಗಳು ಕಾರ್ಯಾರಂಭಗೊಂಡಿವೆ. ಅವುಗಳಿಂದ ಪ್ರಯೋಜನವಿಲ್ಲ ಎಂದು ಹೇಳುತ್ತಾ ಕಾಲಹರಣ ಮಾಡದೇ, ಆಧುನಿಕ ತಂತ್ರಜ್ಞಾನ ಅಳವಡಿಸಿಕೊಂಡು ನಮ್ಮ ಕೌಶಲ್ಯಗಳನ್ನು ಹೆಚ್ಚಿಸಿಕೊಳ್ಳಲು ಮತ್ತು ಹೊಸ ವಾತಾವರಣಕ್ಕೆ ಹೊಂದಿಕೊಳ್ಳಲು ಕೌಶಲ್ಯಾಧಾರಿತ ಕಾರ್ಯಕ್ರಮಗಳ ಲಾಭ ಪಡೆದುಕೊಳ್ಳಬೇಕು ಎಂದು ಡಾ.ಶ್ರೀನಿವಾಸ್ ಮೂರ್ತಿ ಅಭಿಪ್ರಾಯಪಟ್ಟರು.

ವೈದ್ಯರು ಮಾಡುವ ತಪ್ಪುಗಳು ಮಣ್ಣಿನಡಿಯಲ್ಲಿ ಹೂತುಹೋಗುತ್ತವೆ. ಆದರೆ ಎಂಜಿನಿಯರ್‌ಗಳು ಮಾಡುವ ತಪ್ಪುಗಳು ಎದ್ದು ಕಾಣಿಸುತ್ತವೆ ಮತ್ತು ಪ್ರದರ್ಶನಗೊಳ್ಳುತ್ತವೆ. ಆದ್ದರಿಂದ ಯಾವಾಗಲೂ ಅತ್ಯಂತ ಪ್ರಾಮಾಣಿಕತೆಯಿಂದ ನಿಮ್ಮ ಕೆಲಸವನ್ನು ನಿರ್ವಹಿಸಿ. ಇಲ್ಲದಿದ್ದರೆ ದಿನಪತ್ರಿಕೆಗಳನ್ನು ಓದುವಾಗ ಅಥವಾ ಜನರ ಮಾತುಗಳನ್ನು ಕೇಳುವಾಗ, ನಮ್ಮ ತಪ್ಪಿಲ್ಲದಿದ್ದರೂ ಜನರು ನಮ್ಮನ್ನು ದೂಷಿಸುವುದನ್ನು ಕೇಳಬೇಕಾಗುತ್ತದೆ. ಆದ್ದರಿಂದ ಉತ್ತಮ ಮೂಲಸೌಕರ್ಯ ಹಾಗೂ ಬಲವಾದ ರಚನೆಗಳನ್ನು ನಿರ್ಮಿಸಿ ಸಮಾಜಕ್ಕೆ ಕೊಡುಗೆ ನೀಡಲು ನಾವು ಶ್ರಮಿಸಬೇಕು ಎಂದು ಡಾ.ಶ್ರೀನಿವಾಸ್ ಮೂರ್ತಿ ಹೇಳಿದರು.

ಶೈಕ್ಷಣಿಕ ವಿಭಾಗದ ಡೀನ್ ಹಾಗೂ ಸೈಬರ್ ಸೆಕ್ಯುರಿಟಿ ವಿಭಾಗದ ಮುಖ್ಯಸ್ಥರಾದ ಡಾ. ರೇಣುಕಾಲತಾ ಅವರು ಮಾತನಾಡಿ ಸಿವಿಲ್ ಎಂಜಿನಿಯರಿಂಗ್ ಅಥವಾ ರಚನಾತ್ಮಕ ವಿಶ್ಲೇಷಣೆಯಲ್ಲಿ ಬಳಸಲಾಗುವ ಇತ್ತೀಚಿನ ತಂತ್ರಜ್ಞಾನಗಳು ಹಾಗೂ ಉಪಕರಣಗಳ ಬಗ್ಗೆ ತರಬೇತಿ ಅತ್ಯಂತ ಅಗತ್ಯ. ಕ್ಯಾಂಪಸ್ ನಲ್ಲಿಯೇ ಐಟಿ ಸ್ಕೂಲ್ ಆಫ್ ಎಂಜಿನಿಯರಿಂಗ್‌ನ ಹೊಸ ಕಟ್ಟಡ ನಿರ್ಮಾಣವಾಗುತ್ತಿದೆ. ಕಟ್ಟಡ ನಿರ್ಮಾಣಕ್ಕಾಗಿ ಯಂತ್ರಗಳು ಹೇಗೆ 24/7 ನಿರಂತರವಾಗಿ ಕೆಲಸ ಮಾಡುತ್ತಿವೆ ಎಂಬುದನ್ನು ಸಿವಿಲ್ ವಿಭಾಗದ ವಿದ್ಯಾರ್ಥಿಗಳು ಲೈವ್ ಉದಾಹರಣೆಯಾಗಿ ನೋಡಬಹುದು. ಇಲ್ಲಿ ಕಟ್ಟಡ ನಿರ್ಮಿಸಲು ಬಳಸಲಾಗುತ್ತಿರುವ ಯಂತ್ರಗಳು ಮತ್ತು ಕ್ರೇನ್‌ಗಳನ್ನು ಕಟ್ಟಡ ನಿರ್ಮಾಣ ಕ್ಷೇತ್ರದಲ್ಲೂ ಹೇಗೆ ಬಳಕೆಯಾಗುತ್ತವೆ ಎಂಬುದನ್ನು ತಿಳಿದುಕೊಳ್ಳಬಹುದು ಎಂದರು.

ಕಾಲೇಜಿನ ಪ್ರಾಂಶುಪಾಲರಾದ ಎಂ ಎಂ ನಡಕಟ್ಟಿ ಮಾತನಾಡಿ, ರಚನಾತ್ಮಕ ವಿಶ್ಲೇಷಣೆ ಮತ್ತು ಆಧುನಿಕ ನಿರ್ಮಾಣ ತಂತ್ರಜ್ಞಾನ ಇಂದಿನ ಅಗತ್ಯವಾಗಿದೆ. ರಚನಾತ್ಮಕ ವಿಶ್ಲೇಷಣೆ ಎಂದರೆ 1980ರ ದಶಕದಲ್ಲಿ ಸಂಭವಿಸಿದ 'ಗಂಗಾರಾಮ್' ಕಟ್ಟಡ ಕುಸಿತದ ದುರಂತ ಅಥವಾ ದೆಹಲಿಯ 'ಅಲಂಕಾರ್ ಪ್ಲಾಜಾ' ಅಗ್ನಿ ಅವಘಡದಂತಹ ಘಟನೆಗಳು ನೆನಪಿಗೆ ಬರುತ್ತವೆ. ಇಂತಹ ಅನಾಹುತಗಳನ್ನು ತಡೆಯಲು ಕಟ್ಟಡಗಳ ವಿನ್ಯಾಸ ಅತ್ಯಂತ ಸುರಕ್ಷಿತವಾಗಿರಬೇಕು. ಬೆಂಕಿ, ನೀರು ಸೋರಿಕೆ ಹಾಗೂ ಭೂಕಂಪಗಳಿಂದ ಸುರಕ್ಷಿತವಾಗಿರುವಂತೆ ಕಟ್ಟಡಗಳನ್ನು ವಿನ್ಯಾಸಗೊಳಿಸುವುದು ಎಂಜಿನಿಯರ್‌ಗಳ ಜವಾಬ್ದಾರಿಯಾಗಿದೆ ಎಂದರು.

ಸಿವಿಲ್ ಎಂಜಿನಿಯರಿಂಗ್ ವಿಭಾಗದ ಮುಖ್ಯಸ್ಥರಾದ ಡಾ.ಟಿ.ಎಸ್.ಸಹನಾ, ಬೋಧಕರು ಮತ್ತು ಸಂಯೋಜಕರಾದ ಸಹ ಪ್ರಾಧ್ಯಾಪಕಿ ಡಾ. ಉಷಾ, ಎಸ್ಟೇಟ್ ಅಧಿಕಾರಿ ಸಹ ಪ್ರಾಧ್ಯಾಪಕ ಡಾ. ಶಿವರಾಜು ಸೇರಿದಂತೆ ವಿವಿಧ ಕಾಲೇಜುಗಳಿಂದ ಆಗಮಿಸಿದ್ದ ಪ್ರತಿನಿಧಿಗಳು ಕಾರ್ಯಾಗಾರದಲ್ಲಿ ಪಾಲ್ಗೊಂಡರು.

ಕಾರ್ಯಾಗಾರದಲ್ಲಿ ಕಟ್ಟಡಗಳ ರಚನಾತ್ಮಕ ವಿಶ್ಲೇಷಣೆ, ವಿನ್ಯಾಸ ಹಾಗೂ ಆಧುನಿಕ ಸಾಫ್ಟ್‌ವೇರ್‌ಗಳ ಬಳಕೆಯ ಕುರಿತು ತಾಂತ್ರಿಕ ಮಾಹಿತಿ ಹಾಗೂ ಪ್ರಾಯೋಗಿಕ ತರಬೇತಿ ನೀಡಲಾಗುತ್ತಿದೆ. ಸಿವಿಲ್ ಎಂಜಿನಿಯರಿಂಗ್ ಕ್ಷೇತ್ರದ ಬೋಧಕ ವರ್ಗದವರ ತಾಂತ್ರಿಕ ಜ್ಞಾನ ಮತ್ತು ಕೌಶಲ್ಯವನ್ನು ಹೆಚ್ಚಿಸುವುದು ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ. ಶ್ರೀ ಸಿದ್ಧಾರ್ಥ ಅಕಾಡೆಮಿ ಆಫ್ ಹೈಯರ್

## ಎಸ್‌ಐಆರ್ ಕರಡು ಮತದಾರರ ಪಟ್ಟಿ ಪ್ರಕಟ: ತಹಶೀಲ್ದಾರ್ ಆರತಿ.ಬಿ.



**ಗುಬ್ಬಿ:** ಮತದಾರರ ತೀವ್ರ ಪರಿಷ್ಕರಣೆ ನಡೆದು ಅಂತಿಮವಾಗಿ ಕರಡು ಮತದಾರರ ಪಟ್ಟಿ ಪ್ರಕಟವಾಗಿ ಒಟ್ಟು 1,71,718 ಮತದಾರರ ಪಟ್ಟಿ ಅಂತಿಮವಾಗಿ ಸಿದ್ಧವಾಗಿದೆ. ಶೇ.99 ಪರಿಷ್ಕರಣೆಯಲ್ಲಿ ಸಿದ್ಧಗೊಂಡ ಮತದಾರರ ಪಟ್ಟಿ ತಾಲ್ಲೂಕಿನಾದ್ಯಂತ ಪ್ರಚುರ ಪಡಿಸಲಾಗುವುದು. ಪಟ್ಟಿಯಲ್ಲಿ ಇಲ್ಲದ ಮತದಾರರು ತಮ್ಮ ಸೂಕ್ತ ದಾಖಲೆಯೊಂದಿಗೆ ಅರ್ಜಿ ಸಲ್ಲಿಸಲು ಸೆಪ್ಟೆಂಬರ್ 23 ಅಂತಿಮ ದಿನವಾಗಿದೆ ಎಂದು ತಹಶೀಲ್ದಾರ್ ಆರತಿ.ಬಿ ತಿಳಿಸಿದರು.

ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ನಡೆದ ಸಭೆಯಲ್ಲಿ ಮಾತನಾಡಿದ ಅವರು ಕರಡು ಮತದಾರರ ಪಟ್ಟಿಯಲ್ಲಿ 85022 ಪುರುಷರು, 86690 ಮಹಿಳೆಯರು ಹಾಗೂ 6 ಇತರ ಮತದಾರರು ಇದ್ದಾರೆ. ಕರಡು ಪ್ರತಿ ಪ್ರಕಟಣೆಗೆ ಮುನ್ನ 199 ಮತಗಟ್ಟೆಗಳಿದ್ದವು. 1200 ಮತದಾರರು ಇರುವ ಮತಗಟ್ಟೆಯಿಂದ ಹೆಚ್ಚುವರಿ 23 ಮತಗಟ್ಟೆ ಸೇರಿಸಿ 222 ಮತಗಟ್ಟೆ ರಚಿಸಲಾಗಿದೆ ಎಂದರು.

ಎಸ್‌ಐಆರ್ ಸಮಯದಲ್ಲಿ ಮತದಾರರ ಪಟ್ಟಿಯಿಂದ ತೆಗೆದು ಹಾಕಿದವರ ಪೈಕಿ 12,202 ಮತದಾರರಿಂದ ಅರ್ಜಿಗಳ ಸಂಗ್ರಹವಾಗಿಲ್ಲ. ಈ ಪೈಕಿ 3,555 ಮಂದಿ ಮೃತಪಟ್ಟ ಮಾಹಿತಿ ಇದೆ. 432 ಮಂದಿ ಗೈರು ಮತದಾರರು. 6,868 ಮಂದಿ ಸ್ಥಳಾಂತರ ಗೊಂಡವರು. 1,307 ಮಂದಿ ಬೇರೆ ಮತಗಟ್ಟೆಯಲ್ಲಿ ಸೇರ್ಪಡೆಯಾದವರು. ಇತರರು 40 ಮಂದಿ, ಹೀಗೆ ಪರಿಷ್ಕರಣೆ ನಡೆಸಲಾಗಿದೆ ಎಂದು ಮಾಹಿತಿ ತಿಳಿಸಿದರು.

ಮ್ಯಾಪಿಂಗ್ ಆಗದಿರುವ 980 ಹಾಗೂ ಗಣತಿಗೆ ಸಿಗದ 3419 ಮಂದಿಯ ಪರಿಶೀಲನೆಯ ಕಾರ್ಯಕ್ಕೆ ಇಂದಿನಿಂದಲೇ ಚಾಲನೆ ನೀಡಲಾಗಿದೆ. ಹೋಬಳಿಗೆ ಇಬ್ಬರಂತೆ ಒಟ್ಟು 11 ಮಂದಿ ಹೆಚ್ಚುವರಿ ಸಹಾಯಕ ಮತದಾರರ ನೋಂದಣಾಧಿಕಾರಿಯಾಗಿ ನೇಮಿಸಿಕೊಂಡು ಒಂದು ತಿಂಗಳ ಅವಧಿಯಲ್ಲಿ ಪರಿಶೀಲನೆ ಚುರುಕಿನಿಂದ ನಡೆಸಲಾಗುವುದು. ಪಟ್ಟಿಯಲ್ಲಿ ಇಲ್ಲದ ಅರ್ಹ ಮತದಾರರು ತಮ್ಮ ಸೂಕ್ತ ದಾಖಲಾತಿಯೊಂದಿಗೆ ಆಯಾ ಬಿಎಲ್‌ಓ ಸಂಪರ್ಕಿಸಲು ಮನವಿ ಮಾಡಿದ ಅವರು ಆಯಾ ಮತಗಟ್ಟೆ, ಗ್ರಾಮ ಪಂಚಾಯಿತಿ, ಪಟ್ಟಣ ಪಂಚಾಯಿತಿ, ತಾಲ್ಲೂಕು ಕಚೇರಿ ಮತ್ತು ತಾಲ್ಲೂಕು ಪಂಚಾಯಿತಿ ಕಚೇರಿಯಲ್ಲಿ ಕರಡು ಮತದಾರರ ಪಟ್ಟಿ ಸಿಗಲಿದೆ ಎಂದು ತಿಳಿಸಿದರು.

ಸಭೆಯಲ್ಲಿ ಚುನಾವಣಾ ಸಹಾಯಕ ಅಧಿಕಾರಿ ಗುರುಪ್ರಸಾದ್, ಕಾಂಗ್ರೆಸ್ ಅಧ್ಯಕ್ಷ ವೆಂಕಟೇಶ್, ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಪಂಚಾಕ್ಷರಿ, ಜೆಡಿಎಸ್ ಮುಖಂಡ ಶಿವಾನಂದ, ಬಿಜೆಪಿ ಮುಖಂಡ ಸೋಪನಹಳ್ಳಿ ಉಮೇಶ್ ಇತರರು ಇದ್ದರು.

# ಅಹೋರಾತ್ರಿ ಧರಣಿಗೆ ನಿರ್ಧಾರ

**ಬೆಂಗಳೂರು,:** ರಾಜ್ಯದ ಯೋಜನೆ ಮತ್ತು ಸಾಂಖ್ಯಿಕ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳು ತಮ್ಮ ಹೋರಾಟವನ್ನು ಬಿರುಸುಗೊಳಿಸಿದ್ದು, ವಿಧಾನಸಭೆಯಲ್ಲಿ ಅಹೋರಾತ್ರಿ ಧರಣಿ ನಡೆಸಿದ್ದರೇ, ಸದನದ ಹೊರಗೆ ವಿಧಾನಸೌಧದ ಮುತ್ತಿಗೆ ಚಳವಳಿಯನ್ನು ನಡೆಸಿದವು.



ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನಸಭೆಯ ಒಳಗೂ, ಹೊರಗೂ ಹೋರಾಟ ನಡೆಸಿರುವ ಪ್ರತಿಪಕ್ಷಗಳು ಇಂದಿನಿಂದ ಸದನದಲ್ಲಿ ಅಹೋರಾತ್ರಿ ಧರಣಿ ನಡೆಸುವುದಾಗಿ ಘೋಷಣೆ ಮಾಡಿವೆ. ಅಳಿಥಿ& ಐಂಭಿಚಿಟ

ಇಂದು ಸದನ ಕಲಾಪಗಳು ಆರಂಭಕ್ಕೂ ಮುನ್ನವೇ ಪ್ರತಿಪಕ್ಷಗಳು ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ವಿಧಾನಸಭೆಯ ಮುತ್ತಿಗೆ ಪ್ರಯತ್ನ ನಡೆಸಿದ್ದವು. ಪೊಲೀಸರು ಬಿಜೆಪಿ ನಾಯಕರನ್ನು ವಶಕ್ಕೆ ಪಡೆದು ನಂತರ ಬಿಡುಗಡೆ ಮಾಡಿದ್ದರು.

ಇಂದು ಸದನ ಆರಂಭವಾಗುತ್ತಿದ್ದಂತೆಯೇ ಪ್ರತಿಪಕ್ಷಗಳಾದ ಬಿಜೆಪಿ ಮತ್ತು ಜೆಡಿಎಸ್ ಕಳೆದ ಐದು ದಿನಗಳಿಂದ ಸದನದಲ್ಲಿ ನಡೆಸಿದ್ದ ಹೋರಾಟವನ್ನು ಇಂದೂ ಮುಂದುವರೆಸಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಭ್ರಷ್ಟಾಚಾರ ನಡೆಸಿರುವ ಸಚಿವ ಬಿ. ನಾಗೇಂದ್ರ ಅವರು ರಾಜೀನಾಮೆ ನೀಡಲೇಬೇಕು. ಅಲ್ಲಿಯವರೆಗೂ ನಮ್ಮ ಹೋರಾಟ ನಿಲ್ಲಲ್ಲ ಎಂದು ಹೇಳಿ, ಸರ್ಕಾರದ ವಿರುದ್ಧ ಹಾಗೂ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು. ಇದರಿಂದ ಸದನದಲ್ಲಿ ಗದ್ದಲದ ವಾತಾವರಣ ರೂಪುಗೊಂಡಿತು. ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ಉತ್ತಮ ಕಲಾಪಕ್ಕೆ ಮನವಿ ಮಾಡಿದರೂ ಅದಕ್ಕೆ ಪ್ರತಿ ಪಕ್ಷಗಳು ಒಪ್ಪಲಿಲ್ಲ. ಈ ಹಂತದಲ್ಲಿ ಸಚಿವರಾದ ಕೃಷ್ಣಬೈರೇಗೌಡ, ಪ್ರಿಯಾಂಕ ಖರ್ಗೆ ಅವರು, ವಿಪಕ್ಷಗಳು ಸದನದಲ್ಲಿ ಚರ್ಚೆಗೆ ಸಿದ್ಧರಿಲ್ಲ. ಕಲಾಪ ಹಾಳು ಮಾಡಲು ಹೋರಾಟ ಮಾಡುತ್ತಿದ್ದಾರೆ ಎಂದು ವಾಗ್ದಾಳಿ ನಡೆಸಿದರು. ಈ ಹಂತದಲ್ಲಿ ಆಡಳಿತ ಮತ್ತು ಪ್ರತಿಪಕ್ಷಗಳ ನಡುವೆ ಮಾತಿನ ಕಚಕಮಕಿ ನಡೆದ ಗದ್ದಲ ತಾರಕ್ಕೇರಿ ಈ ಗದ್ದಲದಲ್ಲೇ ಮಾತನಾಡಿದ ಪ್ರತಿ ಪಕ್ಷ ನಾಯಕ ಆರ್. ಅಶೋಕ್, ಸಚಿವ ಬಿ ನಾಗೇಂದ್ರ ರಾಜೀನಾಮೆ ನೀಡುವವರೆಗೂ ನಮ್ಮ ಹೋರಾಟ ನಿಲ್ಲದು. ನಾವು ಚರ್ಚೆಗೆ ಸಿದ್ಧರಿದ್ದೇವೆ. ನಾವು ಬರ ಸೇರಿದಂತೆ ಎಲ್ಲ ವಿಚಾರಗಳ ಬಗ್ಗೆ ಚರ್ಚೆಗೆ ಸಿದ್ಧರಿದ್ದೇವೆ. ಆದರೆ ಕಳಂಕಿತ ಸಚಿವರನ್ನು ಇಟ್ಟುಕೊಂಡು ಚರ್ಚೆ ಮಾಡುವುದಾದರೂ ಹೇಗೆ. ಮೊದಲು ಸಚಿವ ನಾಗೇಂದ್ರ ರಾಜೀನಾಮೆ ಕೊಡಲಿ ನಂತರ ಚರ್ಚೆ ಎಂದು ಏರು ಧ್ವನಿಯಲ್ಲಿ ಹೇಳಿದರು.

ಈ ಹಂತದಲ್ಲಿ ಮತ್ತೆ ಸಚಿವ ಕೃಷ್ಣ ಬೈರೇಗೌಡ ಮತ್ತು ಪ್ರತಿಪಕ್ಷ ನಾಯಕ ಆರ್. ಅಶೋಕ್ ನಡುವೆ ವಾಗ್ವಾದ ನಡೆಯಿತು. ನೀವು ಏನೇ ಹೇಳಿದರೂ ನಮ್ಮ ಹೋರಾಟ ನಿಲ್ಲಲ್ಲ. ಇಂದಿನಿಂದ ನಾವು ಸದನದಿಂದ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಅಹೋರಾತ್ರಿ ಧರಣಿ ನಡೆಸುತ್ತೇವೆ ಎಂದು ಹೇಳಿ, ಅಶೋಕ್ ಅವರ ಬಿಜೆಪಿ ಮತ್ತು ಜೆಡಿಎಸ್ ಸದಸ್ಯರ ಜತೆ ಸಭಾಧ್ಯಕ್ಷರ ಮುಂದಿನ ಬಾವಿಗೆ ಆಗಮಿಸಿ ಧರಣಿ ಆರಂಭಿಸಿದರು.

ಪ್ರತಿಪಕ್ಷಗಳು ಧರಣಿ ನಡೆಸುತ್ತಿದ್ದರೂ ಸಭಾಧ್ಯಕ್ಷರು ಪ್ರಶ್ನೋತ್ತರ ಕಲಾಪ, ವಿಧೇಯಕಗಳ ಮಂಡನೆ ಕಲಾಪ ನಡೆಸಿದರು. ಸದನ ಸುವ್ಯವಸ್ಥೆಯಲಿಲ್ಲ. ಹೀಗೆ ಕಲಾಪ ನಡೆಸುವುದು ಸರಿಯಲ್ಲ ಎದಂ ಅಶೋಕ್ ಹೇಳಿದರೂ ಅದಕ್ಕೆ ಕಿವಿಗೊಡದ ಸಭಾಧ್ಯಕ್ಷರು, ವಿಧೇಯಕಗಳ ಅಂಗೀಕಾರ , ಕಲಾಪ ನಡೆದು ವಿಪಕ್ಷಗಳ ಧರಣಿ, ಘೋಷಣೆಗಳ ನಡುವೆಯೇ ಸದನವನ್ನು ಭೋಜನ ವಿರಾಮಕ್ಕೆ ಮುಂದೂಡಲಾಯಿತು.

ವಿಧಾನಸಭೆಯಲ್ಲಿ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಹೋರಾಟ ನಡೆಸುತ್ತಿದ್ದ ಪ್ರತಿಪಕ್ಷ ಸದಸ್ಯರು ಕಳೆದ ಐದು ದಿನಗಳಿಂದ ತಮ್ಮ ಸ್ಥಾನದಲ್ಲೇ ಎದ್ದು ನಿಂತು, ಘೋಷಣೆಗಳನ್ನು ಕೂಗುತ್ತಿದ್ದರು. ಇಂದು ಮಾತ್ರ ಪ್ರತಿಪಕ್ಷ ನಾಯಕ ಆರ್. ಅಶೋಕ್, ಅಹೋರಾತ್ರಿ ಧರಣಿ ಘೋಷಣೆ ಮಾಡಿದ ಕೂಡಲೇ ಎಲ್ಲ ಸದಸ್ಯರು ತಮ್ಮ ಸ್ಥಾನಗಳಿಂದ ಸಭಾಧ್ಯಕ್ಷರ ಮುಂದಿನ ಬಾವಿಗೆ ತೆರಳಿ ಧರಣಿ ಆರಂಭಿಸಿದರು ಐದು ದಿನಗಳಿಂದ ತಮ್ಮ ಸ್ಥಾನದ ಬಳಿಯೇ ನಿಂತು ಘೋಷಣೆಗಳನ್ನು ಕೂಗಿ ನಾಗೇಂದ್ರ ಅವರ ರಾಜೀನಾಮೆಗೆ ಪಟ್ಟು ಹಿಡಿದಿದ್ದ ವಿಪಕ್ಷಗಳು ಇಂದಿನಿಂದ ಅಹೋರಾತ್ರಿ ಧರಣಿ ಆರಂಭಿಸುವ ಮೂಲಕ ಸದನದಲ್ಲಿ ಹೋರಾಟವನ್ನು ಮತ್ತಷ್ಟು ಬಿರುಸುಗೊಳಿಸಿವೆ. ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಘೋಷಣೆಗಳನ್ನು ಕೂಗಿದರು.

## ಭಾರಿ ಬೆಲೆ ಏರಿಕೆಯಿಂದ ಕಹಿಯಾದ ಸಕ್ಕರೆ–ಬೆಲ್ಲ



**ಬೆಂಗಳೂರು:** ಸಕ್ಕರೆ ಬೆಲೆ ಏರಿಕೆ ಬೆನ್ನಲ್ಲೇ ಇದೀಗ ಬೆಲ್ಲದ ಬೆಲೆಯೂ ದಾಖಲೆಯ ಮಟ್ಟಕ್ಕೆ ಏರಿಕೆಯಾಗಿದೆ. ಮಂಡ್ಯ ಎಪಿಎಂಸಿಯಲ್ಲಿ ಗುಣಮಟ್ಟದ ಅಚ್ಚುಬೆಲ್ಲ ಕ್ವಿಂಟಾಲ್‌ಗೆ ಗರಿಷ್ಠ 6,750 ರೂ.ಗಳಿಂದ 7 ಸಾವಿರ ರೂ.ವರೆಗೆ ಮಾರಾಟವಾಗುತ್ತಿದೆ.ಕಳೆದ ಕೆಲವು ದಿನಗಳಿಂದ ಸಕ್ಕರೆ ಬೆಲೆ ನಿರಂತರವಾಗಿ ಏರುತ್ತಲೇ ಇದ್ದು, ಚಿಲ್ಲರೆಯಾಗಿ ಕೆಜಿ ಸಕ್ಕರೆ 70 ರೂ.ಗೆ ಮಾರಾಟವಾಗುತ್ತಿದೆ. ಸಿಹಿಯಾದ ಸಕ್ಕರೆ ಗ್ರಾಹಕರಿಗೆ ಬೆಲೆ ಕೇಳುತ್ತಿದ್ದಂತೆ ಕಹಿಯಾಗುತ್ತಿದೆ.

ಈ ಹಿನ್ನೆಲೆಯಲ್ಲಿ ಈಗಾಗಲೇ ಕೆಲವೆಡೆ ಟೀ, ಕಾಫಿ ಹಾಗೂ ಸಿಹಿತಿನಿಸುಗಳ ಬೆಲೆಯೂ ಏರಿಕೆಯಾಗಿದೆ. ಕಳೆದ 2–3 ದಿನಗಳಿಂದ ಮಳೆಯಾಗುತ್ತಿದ್ದು, ಮೋಡ ಕವಿದ ವಾತಾವರಣ ಇರುವುದರಿಂದ ಚುಮುಚುಮು ಚಳಿಗೆ ಟೀ, ಕಾಫಿ ಕುಡಿಯಲು ಹೋಟೆಲ್‌ಗೆ ಹೋದರೆ ಬೆಲೆ ನೋಡಿ ಶಾಕ್ ಆಗುವಂತಾಗಿದೆ.

ಇತ್ತ ಬೆಲ್ಲದ ಚಹಾ ಕುಡಿಯೋಣ ಎಂದರೂ ಅದರ ಬೆಲೆಯೂ ಏರಿಕೆಯಾಗಿದೆ. ಮಂಡ್ಯ ಎಪಿಎಂಸಿಯಲ್ಲಿ ಈ ಹಿಂದೆ ಕ್ವಿಂಟಾಲ್ ಬೆಲ್ಲಕ್ಕೆ 4,700 ರೂ.ಗಳಿಂದ 5 ಸಾವಿರ ರೂ.ವರೆಗೆ ದರವಿತ್ತು. ಇದೀಗ ಸುಮಾರು 2 ಸಾವಿರ ರೂ. ಹೆಚ್ಚಾಗಿದ್ದು, ಒಂದೇ ಬಾರಿ ಇಷ್ಟು ಬೆಲೆ ಹೆಚ್ಚಾಗಿರುವುದು ಐತಿಹಾಸಿಕ ದಾಖಲೆ ಎಂದು ಮಾರಾಟಗಾರರು ತಿಳಿಸಿದ್ದಾರೆ. ಆಲೆಮನೆಗಳು ಕಣ್ಮರೆ:ಇತ್ತೀಚಿನ ದಿನಗಳಲ್ಲಿ ಕೂಲಿಕಾರ್ಮಿಕರ ಕೊರತೆಯಿಂದಾಗಿ ಮಂಡ್ಯ, ಮೈಸೂರು, ಮಳವಳ್ಳಿ, ಮದ್ದೂರು ಸೇರಿದಂತೆ ಮತ್ತಿತರ ಕಡೆಗಳಲ್ಲಿ ನಡೆಯುತ್ತಿದ್ದ ಆಲೆಮನೆಗಳು ಮುಚ್ಚಿವೆ. ಇದರಿಂದ ಬೆಲ್ಲದ ಉತ್ಪಾದನೆ ಕುಂಠಿತವಾಗಿದೆ. ಶ್ರಾವಣ ಮಾಸ ಆರಂಭವಾಗಿದ್ದು, ಸಾಲುಸಾಲು ಹಬ್ಬಗಳು ಹಾಗೂ ಶುಭ ಸಮಾರಂಭಗಳು ಹೆಚ್ಚಾಗಿ ನಡೆಯುತ್ತಿದ್ದು, ಬೆಲ್ಲಕ್ಕೆ ಬೇಡಿಕೆ ಹೆಚ್ಚಾಗಿರುವುದೂ ಬೆಲೆ ಏರಿಕೆಗೆ ಕಾರಣವಾಗಿದೆ.ಮಾರುಕಟ್ಟೆಯಲ್ಲಿ ಸಕ್ಕರೆ ದರ ಕೆಜಿಗೆ 70 ರೂ. ಆಗಿರುವುದು ಬೆಲ್ಲದ ಉತ್ಪಾದನೆ ಮೇಲೂ ಪರಿಣಾಮ ಬೀರಿದೆ.

ಮಂಡ್ಯದಿಂದ ಪ್ರತಿನಿತ್ಯ ಟನ್‌ಗಟ್ಟಲೆ ಬೆಲ್ಲ ಹೊರರಾಜ್ಯಗಳಿಗೆ ಸರಬರಾಜಾಗುತ್ತಿತ್ತು. ಕಳೆದ ಮೂರ್ನಾಲ್ಕು ದಿನಗಳಿಂದ ಆ ಪ್ರಮಾಣ ಗಣನೀಯವಾಗಿ ಕಡಿಮೆಯಾಗಿದೆ ಎಂದು ವರ್ತಕರು ತಿಳಿಸಿದ್ದಾರೆ.ಕಳೆದ ಹತ್ತು ವರ್ಷಗಳಿಗೆ ಹೋಲಿಸಿದರೆ ಇದೇ ಮೊದಲ ಬಾರಿಗೆ ಒಂದೇ ಬಾರಿಗೆ ಕೆಜಿಗೆ 20ರಿಂದ 25 ರೂ. ವರೆಗೆ ಏರಿಕೆ ಕಂಡಿದೆ. ಕಳೆದ ವಾರ ಕೆಜಿ ಬೆಲ್ಲ 45ರಿಂದ 50 ರೂ.ಗೆ ಮಾರಾಟವಾಗುತ್ತಿತ್ತು. ಇದೀಗ 68 ರೂ. ಗೆ ಮಾರಾಟವಾಗುತ್ತಿದೆ. ಎಪಿಎಂಸಿ ಮಾರುಕಟ್ಟೆಯಲ್ಲಿ ಉಂಡೆಬೆಲ್ಲಕ್ಕಿಂತ ಅಚ್ಚುಬೆಲ್ಲಕ್ಕೆ ಬೇಡಿಕೆ ಹೆಚ್ಚಾಗಿದೆ. ಕ್ವಿಂಟಾಲ್‌ಗೆ 4,500 ರೂ.ಗಳಿಂದ 6,300 ರೂ.ವರೆಗೆ ಮಾರಾಟವಾಗಿದೆ.ಒಟ್ಟಿನಲ್ಲಿ ಸಿಹಿ ನೀಡುವ ಬೆಲ್ಲ ಮತ್ತು ಸಕ್ಕರೆ ಎರಡರ ಬೆಲೆಯೂ ಏರಿಕೆಯಾಗುವ ಮೂಲಕ ಗ್ರಾಹಕರಿಗೆ ಕಹಿಯಾಗಿದೆ.

## ಸೆಪ್ಟೆಂಬರ್ 11 ರಂದು ದೇಶಾದ್ಯಂತ ಬ್ಯಾಂಕ್ ಮುಷ್ಕರ ಸಾಧ್ಯತೆ

**ನವದೆಹಲಿ:** ಪಿಂಚಣಿ ಸಂಬಂಧಿತ ಸಮಸ್ಯೆಗಳು ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಸೆ.11 ರಂದು ದೇಶಾದ್ಯಂತ ಮುಷ್ಕರ ನಡೆಸಲು ಯುನೈಟೆಡ್ ಫೋರಮ್ ಆಫ್ ಬ್ಯಾಂಕ್ ಯೂನಿಯನ್ಸ್ (UFBU) ನಿರ್ಧರಿಸಿದೆ.




5 ದಿನಗಳ ಬ್ಯಾಂಕಿಂಗ್ ನೀತಿ ಅನುಷ್ಠಾನದಲ್ಲಿನ ವಿಳಂಬ, ಕಾರ್ಯಕ್ಷಮತೆಗೆ ಸಂಬಂಧಿಸಿದ ಪ್ರೋತ್ಸಾಹಕ ಯೋಜನೆಯ ಮೇಲಿನ ಭಿನ್ನಾಭಿಪ್ರಾಯಗಳು ಮತ್ತು ಪಿಂಚಣಿ ಸಂಬಂಧಿತ ಸಮಸ್ಯೆಗಳು ಬೇಡಿಕೆಗಳಲ್ಲಿ ಸೇರಿವೆ. ಮುಷ್ಕರ ನಡೆದರೆ, ದೇಶದ ಹಲವು ಭಾಗಗಳಲ್ಲಿ ನಾಲ್ಕು ದಿನಗಳವರೆಗೆ ಬ್ಯಾಂಕಿಂಗ್ ಸೇವೆಗಳು, ವಿಶೇಷವಾಗಿ ಸಾರ್ವಜನಿಕ ವಲಯದ ಬ್ಯಾಂಕ್‌ಗಳಲ್ಲಿ, ಪರಿಣಾಮ ಬೀರುತ್ತವೆ.

ಸೆಪ್ಟೆಂಬರ್ 11 ಶುಕ್ರವಾರ, ಮತ್ತು ನಂತರದ ಎರಡು ದಿನಗಳು ಬ್ಯಾಂಕ್ ರಜಾದಿನಗಳಾಗಿವೆ. ಸೆಪ್ಟೆಂಬರ್ 14 ಗಣೇಶ ಚತುರ್ಥಿಯಂದು ಕೆಲವು ರಾಜ್ಯಗಳಲ್ಲಿ ಬ್ಯಾಂಕ್‌ಗಳಿಗೆ ರಜೆ ದಿನವಾಗಿದೆ.

9 ಬ್ಯಾಂಕ್ ನೌಕರರ ಮತ್ತು ಅಧಿಕಾರಿಗಳ ಸಂಘಗಳ ಒಕ್ಕೂಟವಾದ ಗಈಃಗ, ಸೆಪ್ಟೆಂಬರ್ 28 ರಿಂದ ಪ್ರಾರಂಭವಾಗುವ ಮೂರು ದಿನಗಳ ರಾಷ್ಟ್ರವ್ಯಾಪಿ ಮುಷ್ಕರ ನಡೆಸುವುದಾಗಿ ಎಚ್ಚರಿಕೆ ನೀಡಿವೆ. ತಮ್ಮ ಬೇಡಿಕೆಗಳು ಸರ್ಕಾರ ಮತ್ತು ಬ್ಯಾಂಕ್ ಆಡಳಿತಕ್ಕೆ ಕೇಳಿಸದೇ ಇದ್ದರೆ ಅಕ್ಟೋಬರ್ 26 ರಿಂದ ಅನಿರ್ದಿಷ್ಟಾವಧಿ ಮುಷ್ಕರ ನಡೆಸಲು ಸಹ ಅವರು ನಿರ್ಧರಿಸಿದ್ದಾರೆ.

ಬ್ಯಾಂಕ್ ಖಾತೆಗೆ ಲಕ್ಷ ಲಕ್ಷ ಹಣ ಹಾಕ್ತಿದ್ದೀರಾ? ಐಟಿ ನೋಟೀಸ್ ಬರಬಹುದು ಎಚ್ಚರ! ಹಾಗಾದ್ರೆ, ನಿಮ್ಮ ಸೇವಿಂಗ್ಸ್ ಅಕೌಂಟ್‌ಗೆ ಎಷ್ಟು ಹಣ ಹಾಕಬಹುದು?

ತಮ್ಮ ಪ್ರಮುಖ ಬೇಡಿಕೆಗಳ ಬಗ್ಗೆ ಸರ್ಕಾರದ 'ನಕಾರಾತ್ಮಕ ವರ್ತನೆ' ತೋರಿದೆ ಎಂದು ಒಕ್ಕೂಟಗಳು ಹೇಳಿದ್ದು, ಭಾನುವಾರ ನಡೆದ ಸಭೆಯಲ್ಲಿ ಮುಷ್ಕರದ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು UFBU ಹೇಳಿಕೆಯಲ್ಲಿ ತಿಳಿಸಿದೆ.

ಐದು ದಿನಗಳ ಬ್ಯಾಂಕಿಂಗ್ ಕುರಿತು, ಭಾರತೀಯ ಬ್ಯಾಂಕುಗಳ ಸಂಘ (IBA) ಮಾರ್ಚ್ 8, 2024 ರಂದು ಸಹಿ ಮಾಡಿದ 12 ನೇ ಒಪ್ಪಂದ/9 ನೇ ಜಂಟಿ ಟಿಪ್ಪಣಿಯ ಭಾಗವಾಗಿ ಪ್ರಸ್ತಾವನೆಗೆ ಒಪ್ಪಿಕೊಂಡಿರುವುದಾಗಿ ಹೇಳಿದೆ. ಇದರ ಅಡಿಯಲ್ಲಿ ಸೋಮವಾರದಿಂದ ಶುಕ್ರವಾರದವರೆಗೆ ಕೆಲಸದ ಸಮಯವನ್ನು 40 ನಿಮಿಷಗಳಷ್ಟು ಹೆಚ್ಚಿಸಲಾಗುತ್ತದೆ.

ನಂತರ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಶಿಫಾರಸು ಮಾಡಲಾಗಿದೆ. ಆದರೆ ಎರಡು ವರ್ಷಗಳಿಗೂ ಹೆಚ್ಚು ಕಾಲ ಬೇಡಿಕೆ ಈಡೇರದೇ ಹಾಗೆಯೇ ಉಳಿದಿದೆ ಎಂದು ಅದು ಹೇಳಿದೆ.

## ಸಚಿವ ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ವಿಪಕ್ಷಗಳ ವಿಫಲ ಯತ್ನ

**ಬೆಂಗಳೂರು:** ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ–ಜೆಡಿಎಸ್ ಮತ್ತೆ ಸರ್ಕಾರದ ವಿರುದ್ಧ ಸಮರ ಸಾರಿದ್ದು, ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ನಡೆಸಿದ ಯತ್ನವನ್ನು ಪೊಲೀಸರು ವಿಫಲಗೊಳಿಸಿದ್ದಾರೆ.ಸರ್ಕಾರದ ವಿರುದ್ಧ ಇದೇ ಮೊದಲ ಬಾರಿಗೆ ಗಟ್ಟಿ ಧ್ವನಿಯಲ್ಲಿ ಪ್ರತಿಭಟನೆ ನಡೆಸಿದ ಎರಡೂ ಪಕ್ಷಗಳ ಶಾಸಕರು ವಿಧಾನಸೌಧದ ನಾಲ್ಕು ಗೇಟ್‌ಗಳನ್ನು ಗುರಿಯಾಗಿಸಿಕೊಂಡು ಮುತ್ತಿಗೆ ಹಾಕಲು ಯತ್ನಿಸಿದರು.



ಫ್ರೀಡಂಪಾರ್ಕ್‌ನಿಂದ ಒಂದು ತಂಡ, ರಾಜಭವನದಿಂದ ಮತ್ತೊಂದು ತಂಡ, ಶಾಸಕರ ಭವನದಿಂದ ಮೂರನೇ ತಂಡ ಹಾಗೂ ಮಾಹಿತಿ ಹಕ್ಕು ಆಯೋಗದಿಂದ ನಾಲ್ಕನೇ ತಂಡ ಹೀಗೆ ಒಟ್ಟು ನಾಲ್ಕು ತಂಡಗಳಲ್ಲಿ ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಲಾಯಿತು. ಆದರೆ, ಪೊಲೀಸರು ಸರ್ಪಗಾವಲು ಹಾಕಿ ಮಾರ್ಗಮಧ್ಯೆಯೇ ಬಿಜೆಪಿ ಮತ್ತು ಜೆಡಿಎಸ್ ಶಾಸಕರನ್ನು ವಶಕ್ಕೆ ಪಡೆದರು.

ವಿಧಾನಸಭೆ ಪ್ರತಿಪಕ್ಷ ನಾಯಕ ಆರ್. ಅಶೋಕ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಸೇರಿದಂತೆ ಬಿಜೆಪಿ ಮುಖಂಡರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.ಮಾಜಿ ಸಚಿವ ರಾಜೂಗೌಡ, ಶಾಸಕ ಮುನಿರತ್ನ ಸೇರಿದಂತೆ ಹಲವು ನಾಯಕರು ಹಾಗೂ ಬಿಜೆಪಿ ಕಾರ್ಯಕರ್ತರು ಫ್ರೀಡಂಪಾರ್ಕ್‌ನಲ್ಲಿ ಜಮಾಯಿಸಿ ನಾಗೇಂದ್ರ ವಿರುದ್ಧ ಘೋಷಣೆಗಳನ್ನು ಕೂಗಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ದುರ್ಬಳಕೆ ಪ್ರಕರಣದಲ್ಲಿ ಆರೋಪ ಎದುರಿಸುತ್ತಿರುವ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಹಾಗೂ ವಾಲ್ಮೀಕಿ ಸಮುದಾಯಕ್ಕೆ ಕಾಂಗ್ರೆಸ್ ದ್ರೋಹ ಮಾಡಿದೆ ಎಂಬ ಬರಹವಿರುವ ಫಲಕಗಳನ್ನು ಹಿಡಿದು ಕಾರ್ಯಕರ್ತರು ಪ್ರತಿಭಟನೆ ನಡೆಸಿದರು.

ವಿಧಾನಸೌಧದ ಸುತ್ತಲೂ ಪೊಲೀಸರು ಭದ್ರತೆ ಹೆಚ್ಚಿಸಿ, ವಿವಿಧ ಗೇಟ್‌ಗಳಿಗೆ ಬ್ಯಾರಿಕೇಡ್‌ಗಳನ್ನು ಅಳವಡಿಸಿದ್ದರು. ಸದನದ ಕಲಾಪ ನಡೆಯುತ್ತಿದ್ದ ಹಿನ್ನೆಲೆಯಲ್ಲಿ ಸಿಬ್ಬಂದಿ ಮತ್ತು ಗುರುತಿನ ಚೀಟಿ ಹೊಂದಿರುವವರಿಗೆ ಮಾತ್ರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿತ್ತು.

ಪ್ರತಿಭಟನಾಕಾರರು ಏಕಾಏಕಿ ಮುನ್ನುಗ್ಗಲು ಯತ್ನಿಸಿದಾಗ ತಳ್ಳಾಟ–ನೂಕಾಟದ ಪರಿಸ್ಥಿತಿ ನಿರ್ಮಾಣವಾಯಿತು. ವಿಧಾನಸೌಧದ ಪ್ರವೇಶದ್ವಾರಗಳ ಬಳಿಯೇ ಪ್ರತಿಭಟನಾಕಾರರನ್ನು ಪೊಲೀಸರು ವಶಕ್ಕೆ ಪಡೆದರು.ಕೆಲ ಕಾರ್ಯಕರ್ತರು ಪೊಲೀಸರ ಕೈಗೆ ಸಿಗದೆ ಮೆಟ್ರೊ ನಿಲ್ದಾಣದತ್ತ ತೆರಳಲು ಯತ್ನಿಸಿದಾಗ, ಅವರನ್ನು ಪೊಲೀಸರು ಬೆನ್ನಟ್ಟಿ ವಶಕ್ಕೆ ಪಡೆದರು.

ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್ ಮತ್ತು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ನೇತೃತ್ವದಲ್ಲಿ ನೂರಾರು ಕಾರ್ಯಕರ್ತರು ಫ್ರೀಡಂಪಾರ್ಕ್‌ನಿಂದ ವಿಧಾನಸೌಧದ ಕಡೆಗೆ ಮೆರವಣಿಗೆ ತೆರಳಿ ಮುತ್ತಿಗೆ ಹಾಕಲು ಯತ್ನಿಸಿದರು.

ಪ್ರತಿಭಟನೆಯ ಹಿನ್ನೆಲೆಯಲ್ಲಿ ವಿಧಾನಸೌಧದ ಸುತ್ತಮುತ್ತ ಬಿಗಿ ಪೊಲೀಸ್ ಬಂದೋಬಸ್ತ್ ಕಲ್ಪಿಸಲಾಗಿತ್ತು. ಎಲ್ಲ ಪ್ರಮುಖ ಗೇಟ್‌ಗಳ ಬಳಿ ನಾಕಾಬಂದಿ ನಡೆಸಲಾಗಿದ್ದು, ಪ್ರತಿಭಟನಾಕಾರರು ಒಳನುಗ್ಗದಂತೆ ಪೊಲೀಸರು ಕಟ್ಟುನಿಟ್ಟಿನ ಕ್ರಮ ಕೈಗೊಂಡರು.

ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆ ವಿಚಾರವಾಗಿ ಬಿಜೆಪಿ ಮತ್ತು ಜೆಡಿಎಸ್ ಕಳೆದ ಹಲವು ದಿನಗಳಿಂದ ವಿಧಾನಸಭೆ ಹಾಗೂ ವಿಧಾನಪರಿಷತ್‌ನಲ್ಲೂ ಪ್ರತಿಭಟನೆ ನಡೆಸುತ್ತಿವೆ. ಕಳೆದ ವಾರ ಹಲವು ದಿನಗಳ ಕಾಲ ಪ್ರತಿಪಕ್ಷದ ಪ್ರತಿಭಟನೆಯಿಂದ ಸದನದ ಕಲಾಪಕ್ಕೂ ಅಡ್ಡಿಯುಂಟಾಗಿತ್ತು.

2024ರಲ್ಲಿ ಬೆಳಕಿಗೆ ಬಂದ ಪ್ರಕರಣ

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣ ಅಕ್ರಮ ವರ್ಗಾವಣೆ ಪ್ರಕರಣ 2024ರಲ್ಲಿ ಬೆಳಕಿಗೆ ಬಂದಿತ್ತು. ನಿಗಮದ ಲೆಕ್ಕಪರಿಶೋಧಕ ಅಧೀಕ್ಷಕ ಪಿ. ಚಂದ್ರಶೇಖರನ್ ಆತ್ಮಹತ್ಯೆ ಮಾಡಿಕೊಂಡು ಬರೆದಿದ್ದ ಪತ್ರದಲ್ಲಿ ಹಣಕಾಸು ಅಕ್ರಮಗಳ ಆರೋಪಗಳು ಕೇಳಿಬಂದ ಬಳಿಕ ಪ್ರಕರಣ ಭಾರಿ ರಾಜಕೀಯ ವಿವಾದಕ್ಕೆ ಕಾರಣವಾಗಿತ್ತು.

ಗೇಂದ್ರ ಅವರನ್ನು ಸಂಪುಟದಿಂದ ಕೈಬಿಡುವವರೆಗೂ ಹೋರಾಟ ಮುಂದುವರಿಸುವುದಾಗಿ ಬಿಜೆಪಿ ನಾಯಕರು ಹೇಳಿದ್ದಾರೆ. ವಾಲ್ಮೀಕಿ ಸಮುದಾಯಕ್ಕೆ ಸೇರಿದ ಕಲ್ಯಾಣ ನಿಧಿಯ ದುರ್ಬಳಕೆಯ ಆರೋಪ ಎದುರಿಸುತ್ತಿರುವ ವ್ಯಕ್ತಿ ಸಚಿವ ಸ್ಥಾನದಲ್ಲಿ ಮುಂದುವರಿಯುವುದು ನೈತಿಕವಾಗಿ ಮತ್ತು ಸಾಂವಿಧಾನಿಕವಾಗಿ ಸರಿಯಲ್ಲ ಎಂಬುದು ಪ್ರತಿಪಕ್ಷದ ವಾದವಾಗಿದೆ.

## ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ವತಿಯಿಂದ 38ನೇ ಐಕೇರ್ ಮೂಲಕ ಪರಿಸರ ಸ್ನೇಹಿ ಗೃಹಾಲಂಕಾರ ಉತ್ಪನ್ನ ರಚನೆ

**ರಾಮನಗರ:** ಬಿಡದಿಯ ಟೊಯೋಟಾ ಕಿರ್ಲೋಸ್ಕರ್ ಮೋಟಾರ್ (ಟಿಕೆಎಂ) ತನ್ನ ಉದ್ಯೋಗಿ ಸ್ವಯಂಸೇವಕ ಕಾರ್ಯಕ್ರಮದ ಅಡಿಯಲ್ಲಿ 38ನೇ ಐಕೇರ್ ಉಪಕ್ರಮವನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದೆ.



ವಿಶ್ವ ಉದ್ಯಮಿಗಳ ದಿನದ ಆಚರಣೆಯಲ್ಲಿ ಆಯೋಜಿಸಲಾದ ಈ ಕಾರ್ಯಕ್ರಮದಲ್ಲಿ ಪರಿಸರ ಸ್ನೇಹಿ ಮನೆ ಅಲಂಕಾರಿಕ ಕರಕುಶಲತೆಯ ಮೂಲಕ ಸ್ವಸಹಾಯ ಗುಂಪುಗಳ (ಎಸ್.ಎಚ್.ಜಿ) ಮಹಿಳೆಯರ ಜೀವನೋಪಾಯದ ಅವಕಾಶಗಳನ್ನು ಬಲಪಡಿಸುವ ಮೂಲಕ ಅವರನ್ನು ಸಕ್ರಿಯಗೊಳಿಸುವತ್ತ ಗಮನಹ–ರಿಸಿತು. ಸಮಾಜಕ್ಕೆ ಕೊಡುಗೆ ನೀಡುವ ಟೊಯೋಟಾದ ತತ್ವಶಾಸ್ತ್ರದಿಂದ ಮಾರ್ಗದರ್ಶಿಸಲ್ಪಟ್ಟ ಈ ಚಟುವಟಿಕೆಯು ಉದ್ಯೋಗಿಗಳು, ಅವರ ಕುಟುಂಬಗಳು ಮತ್ತು ಗ್ರಾಮೀಣ ಮಹಿಳೆಯರನ್ನು ಉದ್ಯಮಶೀಲತೆ ಮತ್ತು ಸಮುದಾಯ ಅಭಿವೃದ್ಧಿಯನ್ನು ಬೆಂಬಲಿಸಲು ಒಟ್ಟುಗೂಡಿಸಿತು.

ಬೆಂಗಳೂರು ಹೊರವಲಯದ ಕೆಂಗೇರಿ ಬಳಿಯ ಮಂಚಗೊಂಡನಹಳ್ಳಿಯ ಬಸವಣ್ಣ ಕನ್ವೆನ್ಷನ್ ಹಾಲ್‌ನಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಕರ್ನಾಟಕದ ಗ್ರಾಮೀಣ ಸ್ವಸಹಾಯ ಗುಂಪು ಕೃಷಿಕ 15 ಮಹಿಳಾ ಕುಶಲಕರ್ಮಿಗಳೊಂದಿಗೆ ಸುಮಾರು 570 ಐಕೇರ್ ಸ್ವಯಂಸೇವಕರು ಉತ್ಸಾಹದಿಂದ ಭಾಗವಹಿಸಿದ್ದರು.

ಮಹಿಳಾ ಕುಶಲಕರ್ಮಿಗಳು ಪರಿಸರ ಸ್ನೇಹಿ ಮನೆ ಅಲಂಕಾರಿಕ ಉತ್ಪನ್ನಗಳನ್ನು ತಯಾ–ರಿಸುವಲ್ಲಿ ಪರಿಣತಿ ಹೊಂದಿದ್ದಾರೆ. ಆದಾಗ್ಯೂ, ಆರಂಭಿಕ ಸಂಪನ್ಮೂಲಗಳು ಮತ್ತು ಕಾರ್ಯನಿರತ ಬಂಡವಾಳಕ್ಕೆ ಸೀಮಿತ ಪ್ರವೇಶದಿಂದಾಗಿ, ಸ್ವಸಹಾಯ ಗುಂಪು ಬೆಳೆಯುತ್ತಿರುವ ಮಾರುಕಟ್ಟೆ ಬೇಡಿಕೆಯನ್ನು ಪೂರೈಸುವಲ್ಲಿ ಸವಾಲುಗಳನ್ನು ಎದುರಿಸಿದೆ. ಹತ್ತಿರದ ಹಳ್ಳಿಗಳ ಅನೇಕ ಮಹಿಳೆಯರು ಉದ್ಯಮಕ್ಕೆ ಸೇರಲು ಆಸಕ್ತಿ ವ್ಯಕ್ತಪಡಿಸಿದ್ದರೂ, ಅಸಮರ್ಪಕ ಆರ್ಥಿಕ ಮತ್ತು ಸಂಪನ್ಮೂಲ ಬೆಂಬಲದಿಂದಾಗಿ ಸ್ವಸಹಾಯ ಸಂಘದ ವಿಸ್ತರಣೆಯು ನಿರ್ಬಂಧಿತವಾಗಿದೆ.

ಗ್ರಾಮೀಣ ಸ್ವಸಹಾಯ ಸಂಘಗಳು ಹೆಚ್ಚಾಗಿ ಎದು–ರಿಸುವ ಈ ಪ್ರಮುಖ ಸವಾಲುಗಳನ್ನು ಪರಿಹರಿಸಲು, ಟೊಯೋಟಾ ಕಿರ್ಲೋಸ್ಕರ್ ಮೋಟಾರ್ ಸ್ವಸಹಾಯ ಸಂಘಕ್ಕೆ ಕೆತ್ತನೆ ಯಂತ್ರಗಳು ಮತ್ತು ಕರಕುಶಲ ಪರಿಕರಗಳನ್ನು ಹಸ್ತಾಂತರಿಸಿತು.

ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನ ಕಾರ್ಪೊರೇಟ್ ವ್ಯವಹಾರಗಳ ದೇಶದ ಮುಖ್ಯಸ್ಥ ಮತ್ತು ಕಾರ್ಯನಿರ್ವಾಹಕ ಉಪಾಧ್ಯಕ್ಷ ವಿಕ್ರಮ್ ಗುಲಾಟಿ ಮಾತನಾಡಿ, ಸಮುದಾಯ ಅಭಿವೃದ್ಧಿಯ ನಿಜವಾದ ಅಳತೆಯೆಂದರೆ ಅದರ ಸದಸ್ಯರು ತಮ್ಮ ಜೀವನದ ಗುರಿಗಳನ್ನು ಸಾಧಿಸಲು ಸ್ವಾವಲಂಬಿಗಳಾಗುವಂತೆ ಮಾಡುವುದು. ಉತ್ಪನ್ನ, ಉತ್ಪಾದನಾ ಪರಿಕರಗಳು ಮತ್ತು ತಮ್ಮ ವ್ಯವಹಾರಗಳನ್ನು ವಿಸ್ತರಿಸಲು ಅವಕಾಶಗಳೊಂದಿಗೆ ಸ್ವಸಹಾಯ ಗುಂಪುಗಳನ್ನು ಬೆಂಬಲಿಸುವ ಮೂಲಕ, 38ನೇ ಐಕೇರ್ ಉಪಕ್ರಮವು ಅವರ ಪ್ರಯತ್ನಗಳನ್ನು ಬಲಪಡಿಸುವ ಮತ್ತು ಕರ್ನಾಟಕದ ಹಳ್ಳಿಗಳಲ್ಲಿ ಉದ್ಯಮಶೀಲ ಬೆಳವಣಿಗೆಯನ್ನು ಮುಂದುವರಿಸಲು ಅನುವು ಮಾಡಿಕೊಡುವ ಗುರಿಯನ್ನು ಹೊಂದಿದೆ ಎಂದು ಹೇಳಿದರು. ಗ್ರಾಮೀಣ ಮಹಿಳೆಯರಿಗೆ ತಮ್ಮದೇ ಆದ ಭವಿಷ್ಯವನ್ನು ರೂಪಿಸಿಕೊಳ್ಳಲು ಆತ್ಮವಿಶ್ವಾಸ, ಸಂಪನ್ಮೂಲಗಳು ಮತ್ತು ಸ್ವಾತಂತ್ರ್ಯದೊಂದಿಗೆ ಸಬಲೀಕರಣಗೊಳಿಸುವುದು ನಮ್ಮ ಉದ್ದೇಶವಾಗಿದೆ. ಟೊಯೋಟಾ ಕಿರ್ಲೋಸ್ಕರ್ ಮೋಟಾರ್‌ನಲ್ಲಿ, ಉದ್ಯಮಶೀಲತೆಯನ್ನು ಬೆಳೆಸುವ ಮೂಲಕ ಮತ್ತು ದೀರ್ಘಕಾಲೀನ ಸಕಾರಾತ್ಮಕ ಪರಿಣಾಮ ಬೀರುವ ಅವಕಾಶಗಳನ್ನು ಸೃಷ್ಟಿಸುವ ಮೂಲಕ ನಾವು ಸ್ಥಿತಿಸ್ಥಾಪಕ ಸಮುದಾಯಗಳನ್ನು ನಿರ್ಮಿಸಲು ಬದ್ಧರಾಗಿದ್ದೇವೆ. ಎಂದು ತಿಳಿಸಿದರು.

## ಗುಂಡಿನ ದಾಳಿ: ಸಿಬಿಐ ತನಿಖೆಗೆ BJP ಆಗ್ರಹ

**ಬೆಂಗಳೂರು:** ಬಿಜೆಪಿಯ ಸತ್ಯಶೋಧನಾ ಸಮಿತಿ ನಡೆಸಿದ ಪರಿಶೀಲನೆಯಲ್ಲಿ ಹಲವು ಅಂಶಗಳು ಅನುಮಾನ ಮೂಡಿಸಿವೆ. ಮೃತಪಟ್ಟ ಮೂವರಿಗೂ ಅತಿ ಸಮೀಪದಿಂದ ಗುಂಡು ಹಾರಿಸಲಾಗಿದೆ ಎಂದು ಬಿಜೆಪಿ ಆರೋಪಿಸಿದೆ.

ಆಗಸ್ಟ್ 15ರಂದು ಚಾಮರಾಜನಗರದಲ್ಲಿ ನಡೆದ ಅರಣ್ಯ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಸರ್ಕಾರ ನೀಡಿರುವ ಅಧಿಕೃತ ವಿವರಣೆಯಲ್ಲಿ ?ಗಂಭೀರ ವ್ಯತ್ಯಾಸಗಳು? ಕಂಡುಬಂದಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ.

ಬಿಜೆಪಿಯ ಸತ್ಯಶೋಧನಾ ಸಮಿತಿ ನಡೆಸಿದ ಪರಿಶೀಲನೆಯಲ್ಲಿ ಹಲವು ಅಂಶಗಳು ಅನುಮಾನ ಮೂಡಿಸಿವೆ. ಮೃತಪಟ್ಟ ಮೂವರಿಗೂ ಅತಿ ಸಮೀಪದಿಂದ ಗುಂಡು ಹಾರಿಸಲಾಗಿದೆ ಎಂದು ಬಿಜೆಪಿ ಆರೋಪಿಸಿದ್ದು, ಸಾರ್ವಜನಿಕವಾಗಿ ಮರಣೋತ್ತರ ಪರೀಕ್ಷೆಯ ವರದಿಗಳನ್ನು ಬಿಡುಗಡೆ ಮಾಡದಿರುವ ಬಗ್ಗೆಯೂ ಪ್ರಶ್ನಿಸಿದೆ.

ಪ್ರಕರಣದ ಪ್ರಮುಖ ಸಾಕ್ಷಿ ಎಂದು ಹೇಳಲಾಗಿರುವ ಮಹಿಮಾ ದಾಸ್ ನಾಪತ್ತೆಯಾಗಿದ್ದಾರೆ. ಅವರನ್ನು ಅರಣ್ಯ ಇಲಾಖೆ ಅಧಿಕಾರಿಗಳು ವಶಕ್ಕೆ ಪಡೆದುಕೊಂಡಿದ್ದಾರೆ ಎಂದು ಬಿಜೆಪಿ ಹೇಳಿಕೊಂಡಿದೆ. ಪ್ರಕರಣದ ಸತ್ಯಾಂಶವನ್ನು ಬಹಿರಂಗಪಡಿಸುವಂತೆ ಒತ್ತಾಯಿಸಿರುವ ವಿಜಯೇಂದ್ರ, ಸಿಬಿಐ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ. ರಾಜ್ಯ ಸರ್ಕಾರ ವಾಸ್ತವಾಂಶಗಳನ್ನು ಮುಚ್ಚಿಡುತ್ತಿದೆ ಎಂದು ಆರೋಪಿಸಿ ಅರಣ್ಯ ಸಚಿವರು ರಾಜೀನಾಮೆ ನೀಡಬೇಕು ಎಂದು

# ಸಚಿವ ಬಿ.ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಅಹೋರಾತ್ರಿ ಧರಣಿಗೆ ಮುಂದಾದ ಪ್ರತಿಪಕ್ಷಗಳು

**ಬೆಂಗಳೂರು:** ಯೋಜನೆ ಮತ್ತು ಸಾಂಖ್ಯಿಕ ಖಾತೆ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿ ಪ್ರತಿಪಕ್ಷಗಳು ನಡೆಸುತ್ತಿರುವ ಪ್ರತಿಭಟನೆ ಇಂದು ಕೂಡ ವಿಧಾನಸಭೆಯಲ್ಲಿ ಮುಂದುವರಿಯಿತು. ಸಚಿವರು ರಾಜೀನಾಮೆ ನೀಡುವವರೆಗೆ ಅಹೋರಾತ್ರಿ ಧರಣಿ ನಡೆಸುವುದಾಗಿ ಬಿಜೆಪಿ–ಜೆಡಿಎಸ್ ಶಾಸಕರು ಪ್ರಕಟಿಸಿದರು.ಇಂದು ಬೆಳಗ್ಗೆ ಸದನ ಸಮಾವೇಶಗೊಂಡಾಗ ಬಿಜೆಪಿ–ಜೆಡಿಎಸ್ ಶಾಸಕರು ತಮ್ಮ ತಮ್ಮ ಸ್ಥಾನಗಳಲ್ಲಿ ಎದ್ದು ನಿಂತು ಘೋಷಣೆಗಳನ್ನು ಕೂಗುತ್ತಾ ಸಚಿವ ನಾಗೇಂದ್ರ ಅವರ ರಾಜೀನಾಮೆಗೆ ಆಗ್ರಹಿಸಿದರು.



ಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ಸದನಕ್ಕೆ ಸಕಾಲಕ್ಕೆ ಆಗಮಿಸಿದ್ದ ಶಾಸಕರ ಹೆಸರನ್ನು ವಾಚಿಸುತ್ತಿದ್ದ ವೇಳೆ ಬಿಜೆಪಿ–ಜೆಡಿಎಸ್ ಶಾಸಕರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಗದ್ದಲ ಉಂಟುಮಾಡಿದರು. ಬಿಜೆಪಿ ಶಾಸಕ ಸುನೀಲ್‌ಕುಮಾರ್ ಮಾತನಾಡಿ, ಇಂಥ ಭಂಡ ಸರ್ಕಾರವನ್ನು ನೋಡಿರಲಿಲ್ಲ ಎಂದು ಕಿಡಿಕಾರಿದರು. ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಮಾತನಾಡಿ, ಒಬ್ಬ ವ್ಯಕ್ತಿಗಾಗಿ ಈ ರೀತಿ ಸದನದ ಸಮಯವನ್ನು ಹಾಳು ಮಾಡಬಾರದು.

ಸಂವಿಧಾನಕ್ಕೂ ಗೌರವ ಇಲ್ಲದಂತಾಗಿದೆ. ನಾಗೇಂದ್ರ ಅವರನ್ನು ಸಂಪುಟದಿಂದ ವಜಾಗೊಳಿಸಬೇಕು. ಅವರು ರಾಜೀನಾಮೆ ನೀಡುವವರೆಗೆ ನಾವು ಹಗಲು–ರಾತ್ರಿ ಸದನದಲ್ಲೇ ಧರಣಿ ನಡೆಸುತ್ತೇವೆ. ಯಾವುದೇ ಕಾರಣಕ್ಕೂ ಪ್ರತಿಭಟನೆ ಹಿಂಪಡೆಯುವುದಿಲ್ಲ. ದಲಿತರ ಹಣ ಅಕ್ರಮ ವರ್ಗಾವಣೆ ಆರೋಪದ ಬಗ್ಗೆ ಚರ್ಚಿಸಲು ನಾವು ಸಿದ್ಧರಿದ್ದೇವೆ ಎಂದು ಹೇಳಿದರು. ನಾವು ಮಾತನಾಡುವಾಗ ವಾರ್ತಾ ಇಲಾಖೆ ಲೈವ್‌ನಲ್ಲಿ ನಮ್ಮನ್ನು ತೋರಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದ ಅಶೋಕ್, ವಾರ್ತಾ ಇಲಾಖೆ ಆಯುಕ್ತರ ವಿರುದ್ಧವೂ ಹರಿಹಾಯ್ದರು.ವಾಲ್ಮೀಕಿ ಅಭಿವೃದ್ಧಿ ನಿಗಮದ 187 ಕೋಟಿ ರೂ.ಗಳನ್ನು ಹಂಚಿಕೆ ಮಾಡಿಕೊಂಡಿದ್ದಾರೆ. ಅದಕ್ಕಾಗಿ ಸಚಿವರಿಂದ ರಾಜೀನಾಮೆ ಕೊಡಿಸುತ್ತಿಲ್ಲ. ಒಂದು ಕೋಟಿ ದಲಿತರು ಹೊರಗಡೆ ಇದ್ದಾರೆ ಎಂದು ಅವರು ವಾಗ್ದಾಳಿ ನಡೆಸಿದರು. ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಮಾತನಾಡಿ, ವಿರೋಧ ಪಕ್ಷಗಳಿಗೆ ಸದನದಲ್ಲಿ ಜ್ವಲಂತ ಸಮಸ್ಯೆಗಳ ಚರ್ಚೆ ಮಾಡಲು ಆಸಕ್ತಿ ಇಲ್ಲ. ರೈತರ ಸಮಸ್ಯೆ, ಬಿಡದಿ ಸಮಸ್ಯೆ ಸೇರಿದಂತೆ ಅನೇಕ ಜ್ವಲಂತ ಸಮಸ್ಯೆಗಳಿದ್ದರೂ ಇವರು ಪ್ರತಿಭಟನೆ ನಡೆಸುತ್ತಿದ್ದಾರೆ ಎಂದು ಆಕ್ಷೇಪಿಸಿದರು. ಬೆಂಗಳೂರು ನಗರಾಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಮಾತನಾಡಿ,

ರಾಜ್ಯದಲ್ಲಿ ಮಳೆ ಕೊರತೆಯಿಂದ ಬರ ಪರಿಸ್ಥಿತಿ ಇದೆ. ರೈತರು ಸಂಕಷ್ಟದಲ್ಲಿದ್ದಾರೆ. ಆದರೂ ಈ ಬಗ್ಗೆ ಚರ್ಚೆ ನಡೆಸದೆ ಸದನದ ಸಮಯವನ್ನು ವ್ಯರ್ಥ ಮಾಡುತ್ತಿದ್ದಾರೆ ಎಂದು ಆಕ್ಷೇಪಿಸಿದರು. ಕೆಪಿಎಸ್‌ಸಿ ಕುರಿತು ಚರ್ಚೆ ಮಾಡಲು ನಮಗೆ ಆಸಕ್ತಿ ಇಲ್ಲ ಎಂಬ ಆರೋಪ ಸರಿಯಲ್ಲ. ನಾವು ಅದರ ಬಗ್ಗೆ ಚರ್ಚೆಗೆ ಸಿದ್ಧರಿದ್ದೇವೆ ಎಂದು ಆಡಳಿತ ಪಕ್ಷದ ಸದಸ್ಯರು ಹೇಳಿದಾಗ, ಬಿಜೆಪಿ ಶಾಸಕ ಸುನೀಲ್‌ಕುಮಾರ್ ಮಾತನಾಡಿ, ಬರ ಸೇರಿದಂತೆ ಎಲ್ಲ ವಿಚಾರಗಳ ಬಗ್ಗೆಯೂ ಚರ್ಚೆಗೆ ನಾವು ಸಿದ್ಧರಿದ್ದೇವೆ. ಮೊದಲು ಸಚಿವರಿಂದ ರಾಜೀನಾಮೆ ಕೊಡಿಸಿ ಎಂದು ಒತ್ತಾಯಿಸಿದರು. ಈ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಮಾತನಾಡಿ, ಕಾಗದಪತ್ರ, ದಾಖಲೆಗಳನ್ನು ಇಟ್ಟುಕೊಂಡು ಆರೋಪಿಸುವ ವಿಚಾರದ ಬಗ್ಗೆ ಮಾತನಾಡಲು ಬಿಜೆಪಿ ಸಿದ್ಧವಿಲ್ಲ ಎಂದು ಟೀಕಿಸಿದರು. ಅಷ್ಟರಲ್ಲಿ ಬಿಜೆಪಿ–ಜೆಡಿಎಸ್ ಶಾಸಕರು ಸಭಾಧ್ಯಕ್ಷರ ಪೀಠದ ಮುಂದಿನ ಬಾವಿಗಿಳಿದು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಲು ಆರಂಭಿಸಿದರು. ಈ ಹಂತದಲ್ಲಿ ಮಾತನಾಡಿದ ಅಬಕಾರಿ ಸಚಿವ ಶಿವಲಿಂಗೇಗೌಡ, ಸಾವಿರಾರು ಜನರು ಆರೋಪಗಳನ್ನು ಎದುರಿಸುತ್ತಿದ್ದಾರೆ.

ಆರೋಪಮಾಡಿದತಕ್ಷಣಯಾರೂಅಪರಾಧಿಯಾಗುವುದಿಲ್ಲ.

## ಆಗಸ್ಟ್ 31ಕ್ಕೆ ವಿಚಾರಣೆ ಮುಂದೂಡಿದ ಸುಪ್ರೀಂಕೋರ್ಟ್

ಕಾವೇರಿ ನೀರಿಗಾಗಿ ತಮಿಳುನಾಡು ಕ್ಯಾತೆ

**ನವದೆಹಲಿ:** ತಮಿಳುನಾಡಿಗೆ ಕಾವೇರಿ ನೀರು ಹರಿಸುವಂತೆ ಕರ್ನಾಟಕಕ್ಕೆ ನಿರ್ದೇಶನ ನೀಡಬೇಕು ಎಂದು ಕೋರಿ ಸಲ್ಲಿಸಲಾಗಿರುವ ಅರ್ಜಿಯ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಆಗಸ್ಟ್ 31ಕ್ಕೆ ಮುಂದೂಡಿದೆ.

ನ್ಯಾಯಮೂರ್ತಿ ವಿಕ್ರಮ್ ನಾಥ್ ನೇತೃತ್ವದ ದ್ವಿಸದಸ್ಯ ಪೀಠವು ಸೋಮವಾರ ಅರ್ಜಿಯ ವಿಚಾರಣೆ ನಡೆಸಿತು. ಈ ವೇಳೆ ತಮಿಳುನಾಡು ಪರ ಹಿರಿಯ ವಕೀಲ ಸಿ.ಎಸ್. ವೈದ್ಯನಾಥನ್ ವಾದ ಮಂಡಿಸಿದರು.ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ (CWMA) ಹಾಗೂ ಕಾವೇರಿ ನೀರು ನಿಯಂತ್ರಣ ಸಮಿತಿ (CWRC) ನೀಡಿರುವ ನಿರ್ದೇಶನಗಳನ್ನು ಕರ್ನಾಟಕ ಪಾಲಿಸುತ್ತಿಲ್ಲ ಎಂದು ಅವರು ಆರೋಪಿಸಿದರು. ದುರದೃಷ್ಟವಶಾತ್, ಕರ್ನಾಟಕವು ತಮಿಳುನಾಡಿಗೆ ಪ್ರಮಾಣಾನುಗುಣವಾಗಿ ನೀರು ಹರಿಸುತ್ತಿಲ್ಲ. ಅಲ್ಪ ಪ್ರಮಾಣದ ನೀರು ಮಾತ್ರ ಬಿಡುಗಡೆಯಾಗುತ್ತಿದ್ದು, ತಮಿಳುನಾಡಿಗೆ ಬರಬೇಕಾದಷ್ಟು ನೀರು ಸಿಗುತ್ತಿಲ್ಲ ಎಂದು ತಿಳಿಸಿದರು. ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ರಚನೆ, ಅದರ ಅಧಿಕಾರ, ಕಾರ್ಯಗಳು ಮತ್ತು ಕರ್ತವ್ಯಗಳನ್ನು ಪರಿಗಣಿಸಬೇಕು ಎಂದು ಅವರು ಹೇಳಿದರು. ಪ್ರಾಧಿಕಾರ ನೀಡಿರುವ ನಿರ್ದೇಶನಗಳನ್ನು ಕರ್ನಾಟಕ ಪಾಲಿಸಬೇಕಾಗಿದೆ ಎಂದು ವಾದಿಸಿದರು. ಕರ್ನಾಟಕ ತನ್ನ ರೈತರಿಗೆ ನೀರು ಹರಿಸುತ್ತಿದೆ. ಆದರೆ, ತಮಿಳುನಾಡಿಗೆ ಮಾತ್ರ ನೀರಿನ ಕೊರತೆಯಿದೆ ಎಂದು ಹೇಳುತ್ತಿದೆ ಎಂದು ವೈದ್ಯನಾಥನ್ ಅವರು ನ್ಯಾಯಪೀಠದ ಗಮನಕ್ಕೆ ತಂದರು. ಇದಕ್ಕೆ ಪ್ರತಿಯಾಗಿ ಕರ್ನಾಟಕ ಪರ ವಕೀಲರು, ರಾಜ್ಯವು ಈಗಾಗಲೇ ತಮಿಳುನಾಡಿಗೆ ನೀರು ಹರಿಸುತ್ತಿದೆ ಎಂದು ತಿಳಿಸಿದರು. ಜಲಾಶಯಗಳಲ್ಲಿನ ನೀರಿನ ಮಟ್ಟ, ನೀರು ಬಿಡುಗಡೆ ಹಾಗೂ ಪ್ರಸ್ತುತ ಪರಿಸ್ಥಿತಿಯ ಕುರಿತು ನ್ಯಾಯಾಲಯಕ್ಕೆ ವಿವರಿಸಿದರು. ಎರಡೂ ರಾಜ್ಯಗಳ ವಾದ ಆಲಿಸಿದ ನ್ಯಾಯಪೀಠ, ?ಈಗ ಸಮಸ್ಯೆ ಏನಿದೆ? ಸಮಸ್ಯೆ ಇದ್ದರೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಮುಂದೆ ಹೋಗಿ? ಎಂದು ಸೂಚಿಸಿತು. ನಂತರ ಅರ್ಜಿಯ ವಿಚಾರಣೆಯನ್ನು ಮುಂದಿನ ಸೋಮವಾರಕ್ಕೆ ಮುಂದೂಡಿತು.

# H1N1 ಸೋಂಕು: ಶಾಲಾ–ಕಾಲೇಜುಗಳಲ್ಲಿ ಮುಂಜಾಗ್ರತಾ ಕ್ರಮಕ್ಕೆ ಮಾರ್ಗಸೂಚಿ ಪ್ರಕಟ



**ಬೆಂಗಳೂರು:** ರಾಜ್ಯದಲ್ಲಿ ಎಚ್1ಎನ್1 ಸೋಂಕು ಹರಡುತ್ತಿರುವ ಹಿನ್ನೆಲೆಯಲ್ಲಿ ಶಾಲಾ–ಕಾಲೇಜುಗಳಲ್ಲಿ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಮಾರ್ಗಸೂಚಿ ರವಾನಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಯು.ಟಿ. ಖಾದರ್ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಳೆದ ಜನವರಿಯಿಂದ ರಾಜ್ಯದಲ್ಲಿ 4,212 ಎಚ್1ಎನ್1 ಪ್ರಕರಣಗಳು ಪತ್ತೆಯಾಗಿವೆ. ಅದರಲ್ಲೂ ಬೆಂಗಳೂರು ನಗರ ಮತ್ತು ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಕರಣಗಳು ವರದಿಯಾಗಿವೆ ಎಂದು ತಿಳಿಸಿದರು.

ಸಾಂಕ್ರಾಮಿಕ ರೋಗಗಳ ಕುರಿತು ಜನರಲ್ಲಿ ಹೆಚ್ಚಿನ ಜಾಗೃತಿ ಅಗತ್ಯವಿದೆ. ಸಾರ್ವಜನಿಕರು ಮುಂಜಾಗ್ರತಾ ಕ್ರಮಗಳನ್ನು ಪಾಲಿಸಬೇಕು. ಬಿಸಿ ನೀರನ್ನೇ ಕುಡಿಯಬೇಕು ಹಾಗೂ ಹೋಟೆಲ್‌ಗಳಲ್ಲಿಯೂ ಬಿಸಿನೀರನ್ನು ಒದಗಿಸಬೇಕು. ಜ್ವರ ಇರುವವರು ಜನರ ನಡುವೆ ಓಡಾಡುವುದನ್ನು ನಿಯಂತ್ರಿಸಬೇಕು. ಎರಡು–ಮೂರು ದಿನಗಳ ಬಳಿಕವೂ ಜ್ವರ ಕಡಿಮೆಯಾಗದಿದ್ದರೆ ವೈದ್ಯಕೀಯ ಪರೀಕ್ಷೆಗೆ ಒಳಗಾಗಬೇಕು ಎಂದು ಸಲಹೆ ನೀಡಿದರು. ಮಾಧ್ಯಮಗಳಲ್ಲಿ ವರದಿಯಾದಂತೆ ಯಾವುದೇ ಶಾಲೆಯಲ್ಲಿ ಎಚ್1ಎನ್1 ಸೋಂಕು ವ್ಯಾಪಕವಾಗಿ ಹರಡಿರುವ ಬಗ್ಗೆ ವರದಿಯಾಗಿಲ್ಲ. ಒಂದು ಶಾಲೆಯ ಇಬ್ಬರು ಶಿಕ್ಷಕರಿಗೆ ಜ್ವರ ಕಾಣಿಸಿಕೊಂಡ ಹಿನ್ನೆಲೆಯಲ್ಲಿ ಅವರು ಶಾಲೆಗೆ ಬಂದಿರಲಿಲ್ಲ. ಬಳಿಕ ಯಾವುದೇ ವಿದ್ಯಾರ್ಥಿಗಳಿಗೂ ಸೋಂಕು ಹರಡಿರುವುದು ಕಂಡುಬಂದಿಲ್ಲ. ಇದನ್ನೇ ಸೋಂಕು ವ್ಯಾಪಕವಾಗಿ ಹರಡಿದೆ ಎಂದು ಪ್ರಚಾರ ಮಾಡಲಾಗಿದೆ. ಇದು ಸತ್ಯವಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಗೊಂದಲ ನಿವಾರಿಸುವ ಉದ್ದೇಶದಿಂದ ರಾಜ್ಯದ ಎಲ್ಲ ಶಾಲಾ–ಕಾಲೇಜುಗಳಿಗೆ ಸಾಂಕ್ರಾಮಿಕ ರೋಗಗಳ ಸಂದರ್ಭದಲ್ಲಿ ಅನುಸರಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತು ಮಾರ್ಗಸೂಚಿ ರವಾನಿಸಲಾಗುವುದು ಎಂದರು.

ಎಚ್1ಎನ್1 ಸೋಂಕು ಪತ್ತೆಯಾದರೂ ಚಿಕಿತ್ಸೆ ನೀಡಲು ರಾಜ್ಯ ಆರೋಗ್ಯ ಇಲಾಖೆ ಸಿದ್ಧವಾಗಿದೆ. ಅಗತ್ಯವಿರುವ ಕಡೆ ಪ್ರತ್ಯೇಕ ಬೆಡ್‌ಗಳ ವ್ಯವಸ್ಥೆ ಮಾಡಲಾಗಿದೆ. ಔಷಧಿಗಳ ದಾಸ್ತಾನು ಲಭ್ಯವಿದ್ದು, ಅಗತ್ಯ ಔಷಧಿಗಳ ಖರೀದಿಗೆ ಸಂಬಂಧಿಸಿದ ಟೆಂಡರ್ ಪ್ರಕ್ರಿಯೆಗಳಿಗೆ ಅನುಮೋದನೆ ನೀಡಲಾಗಿದೆ. 15 ದಿನಗಳಲ್ಲಿ ಅಗತ್ಯ ಔಷಧಿಗಳನ್ನು ಖರೀದಿಸಿ ಜಿಲ್ಲಾ ಕೇಂದ್ರಗಳಿಗೆ ಸರಬರಾಜು ಮಾಡಲಾಗುವುದು. ತುರ್ತು ಅಗತ್ಯವಿದ್ದಲ್ಲಿ ಜಿಲ್ಲಾ ಮಟ್ಟದಲ್ಲಿಯೂ ಔಷಧಿ ಖರೀದಿಸಲು ಅನುಮತಿ ನೀಡಲಾಗಿದೆ ಎಂದು ಹೇಳಿದರು.

ನಕಲಿ ಔಷಧಿ ಪ್ರಕರಣ ತನಿಖೆ ಮುಂದುವರಿಕೆ

ನಕಲಿ ಔಷಧಿಗಳ ಕುರಿತ ತನಿಖೆ ಪ್ರಗತಿಯಲ್ಲಿದೆ. ಅಧಿಕೃತ ಮಾಹಿತಿ ದೊರೆತ ಬಳಿಕ ಅದನ್ನು ಸಾರ್ವಜನಿಕರೊಂದಿಗೆ ಹಂಚಿಕೊಳ್ಳಲಾಗುವುದು. ಸದ್ಯದ ಮಾಹಿತಿಯ ಪ್ರಕಾರ ಯಾವುದೇ ಸರ್ಕಾರಿ ಆಸ್ಪತ್ರೆಗಳಿಗೆ ನಕಲಿ ಔಷಧಿಗಳು ಸರಬರಾಜಾಗಿಲ್ಲ. ಎಲ್ಲೆಲ್ಲಿ ಇಂತಹ ಔಷಧಿಗಳು ಸರಬರಾಜಾಗಿವೆ ಎಂಬುದರ ಕುರಿತು ಪರಿಶೀಲನೆ ನಡೆಯುತ್ತಿದೆ. ಮಾಹಿತಿ ದೊರೆತ ತಕ್ಷಣ ಕ್ರಮ ಕೈಗೊಳ್ಳಲಾಗುವುದು ಎಂದರು. ಕೆಲವು ಸಂದರ್ಭಗಳಲ್ಲಿ ನಕಲಿ ಮತ್ತು ಅಸಲಿ ಔಷಧಿಗಳನ್ನು ಗುರುತಿಸುವುದು ಕಷ್ಟವಾಗುತ್ತಿದೆ. ಗುಪ್ತಚರ ವಿಭಾಗದ ಅಧಿಕಾರಿಗಳು ನಕಲಿ ಔಷಧಿಗಳು ಎಲ್ಲೆಲ್ಲಿ ತಯಾರಾಗುತ್ತಿವೆ ಹಾಗೂ ಯಾವ ಪ್ರದೇಶಗಳಿಗೆ ಸರಬರಾಜಾಗುತ್ತಿವೆ ಎಂಬ ಬಗ್ಗೆ ಮಾಹಿತಿ ಕಲೆಹಾಕುತ್ತಿದ್ದಾರೆ ಎಂದು ಹೇಳಿದರು.

ಕೃತಕ ಆಹಾರ ಪದಾರ್ಥಗಳ ವಿರುದ್ಧ ಕ್ರಮ

ಕೃತಕವಾಗಿ ಉತ್ಪಾದಿಸುವ ಆಹಾರ ಪದಾರ್ಥಗಳು ಅಪಾಯಕಾರಿಯಾಗಿರುವ ಹಿನ್ನೆಲೆಯಲ್ಲಿ ಅವುಗಳನ್ನು ನಿಷೇಧಿಸಲಾಗಿದೆ. ಆರೋಗ್ಯ ಇಲಾಖೆಯ ಅಧಿಕಾರಿಗಳಿಗೆ ಒಂದು ವರ್ಷದವರೆಗೆ ಮಾತ್ರ ನಿಷೇಧ ವಿಧಿಸುವ ಅವಕಾಶವಿದೆ. ಈ ಕುರಿತು ಕೇಂದ್ರ ಕಾಯ್ದೆಯಲ್ಲಿಯೂ ತಿದ್ದುಪಡಿ ಅಗತ್ಯವಿದ್ದು, ಕೇಂದ್ರ ಆರೋಗ್ಯ ಸಚಿವರೊಂದಿಗೆ ಪತ್ರ ವ್ಯವಹಾರ ನಡೆಸಲಾಗಿದೆ ಎಂದು ಸಚಿವರು ತಿಳಿಸಿದರು.

# ಲಾಭ ಪಡೆಯಲು ಕೆನಡಾ ಯತ್ನ: ಟ್ರಂಪ್



**ವಾಷಿಂಗ್ಟನ್:** ಕೆನಡಾ ಅಮೆರಿಕದ ರಾಜ್ಯವಾಗದೇ ಅದರ ರಾಜ್ಯವಾಗಿರುವ ಲಾಭಗಳನ್ನು" ಪಡೆಯಲು ಬಯಸುತ್ತಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಅಮೆರಿಕ ಮತ್ತು ಕೆನಡಾ ನಡುವಿನ ವ್ಯಾಪಾರ ಮಾತುಕತೆಗಳು ವಿಫಲವಾದ ಬಳಿಕ ಅವರ ಈ ಹೇಳಿಕೆ ಹೊರಬಿದ್ದಿದೆ.

ಮಾತುಕತೆಗಳು ಕುಸಿದ ಹಿನ್ನೆಲೆಯಲ್ಲಿ, ಕೆನಡಾದ ವಿವಿಧ ಸರಕುಗಳ ಮೇಲೆ ಅಮೆರಿಕ ಹೊಸದಾಗಿ ಶೇ.50 ಸುಂಕ ವಿಧಿಸಿದೆ. ಅಮೆರಿಕದ ರೈತರು ಹಲವು ವರ್ಷಗಳಿಂದ ಭಾರೀ ಪ್ರಮಾಣದ ಸುಂಕಗಳನ್ನು ಪಾವತಿಸುತ್ತಿದ್ದಾರೆ ಎಂದು ಟ್ರಂಪ್ ಆರೋಪಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿದ ಕೆನಡಾ ಪ್ರಧಾನಿ ಮಾರ್ಕ್ ಕಾರ್ನಿ, ಅಮೆರಿಕದ ಹೊಸ ಸುಂಕಗಳು ಕೆನಡಾವನ್ನು ಹಾನಿಗೊಳಿಸಲು ಮತ್ತು ವಿಭಜಿಸಲು ಮಾಡಿದ ತಪ್ಪು ಲೆಕ್ಕಾಚಾರ? ಎಂದು ಹೇಳಿದ್ದಾರೆ.

ಅಮೆರಿಕ ವಿಧಿಸಿರುವ ಸುಂಕಗಳಿಗೆ ಪ್ರತಿಯಾಗಿ ಕೆನಡಾ ಕೂಡ ಡಾಲರ್ಗೆ ಡಾಲರ್" ಎಂಬ ರೀತಿಯಲ್ಲಿ ಪ್ರತೀಕಾರಾತ್ಮಕ ಸುಂಕಗಳನ್ನು ವಿಧಿಸುವುದಾಗಿ ಕಾರ್ನಿ ಘೋಷಿಸಿದ್ದಾರೆ. ಸೆಪ್ಟೆಂಬರ್ 8ರಿಂದ ಉಕ್ಕು, ಹಾಲು ಉತ್ಪನ್ನಗಳು, ಗೃಹೋಪಯೋಗಿ ವಸ್ತುಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳ ಮೇಲೆ ಈ ಕ್ರಮ ಜಾರಿಗೆ ಬರಲಿದೆ ಎಂದು ಅವರು ತಿಳಿಸಿದ್ದಾರೆ. ಟ್ರಂಪ್ ಅಧಿಕಾರಕ್ಕೆ ಮರಳಿದ ನಂತರ ಕೆನಡಾವನ್ನು ಅಮೆರಿಕದ 51ನೇ ರಾಜ್ಯ? ವನ್ನಾಗಿ ಮಾಡುವ ಕುರಿತು ಹಲವು ಬಾರಿ ಉಲ್ಲೇಖಿಸಿದ್ದರು. ಈ ಹೇಳಿಕೆಗಳು ಕೆನಡಾದ ರಾಜಕೀಯ ನಾಯಕರು ಮತ್ತು ಸಾರ್ವಜನಿಕರಲ್ಲಿ ಅಸಮಾಧಾನಕ್ಕೆ ಕಾರಣವಾಗಿವೆ. ಎರಡು ದೇಶಗಳ ನಡುವಿನ ವ್ಯಾಪಾರ ಮಾತುಕತೆಗಳ ಕುಸಿತವು ಪರಸ್ಪರವಾಗಿ ಆಳವಾಗಿ ಸಂಪರ್ಕ ಹೊಂದಿರುವ ವ್ಯಾಪಾರ ಸಂಬಂಧಕ್ಕೆ ದೊಡ್ಡ ಹೊಡೆತ ನೀಡಿದ್ದು, ಸಮಸ್ಯೆ ಪರಿಹಾರಕ್ಕೆ ಸದ್ಯ ಸ್ಪಷ್ಟವಾದ ಮಾರ್ಗ ಕಾಣಿಸುತ್ತಿಲ್ಲ. ಭಾನುವಾರ ಫಾಕ್ಸ್ ನ್ಯೂಸ್‌ಗೆ ನೀಡಿದ ಸಂದರ್ಶನದಲ್ಲಿ ಟ್ರಂಪ್, ಅಮೆರಿಕದೊಂದಿಗೆ ವ್ಯಾಪಾರ ಯುದ್ಧಕ್ಕೆ ಇಳಿದು ಅದರಲ್ಲಿ ಗೆಲ್ಲಬಹುದು ಎಂದು ಭಾವಿಸುವ ಕೆನಡಿಯನ್ನರು ?ಮೂರ್ಖರು? ಎಂದು ಹೇಳಿದ್ದಾರೆ. ವಾರದ ಆರಂಭದಲ್ಲಿ ಎರಡೂ ದೇಶಗಳು ಒಪ್ಪಂದದ ಕುರಿತು ಆಶಾವಾದಿಯಾಗಿದ್ದವು. ಆದರೆ ಕೊನೆಯ ಕ್ಷಣದಲ್ಲಿ ಪರಸ್ಪರ ಬದಲಾವಣೆಗಳನ್ನು ಮಾಡಲಾಗಿದೆ ಎಂದು ಎರಡೂ ಕಡೆಯವರು ಆರೋಪಿಸಿದ ನಂತರ

# ರಾಜ್ಯ ಒಕ್ಕಲಿಗರ ಸಂಘದಿಂದ ನಿರ್ಮಾಣವಾಗಲಿರುವ ವಿದ್ಯಾರ್ಥಿ ನಿಲಯಕ್ಕೆ ಶಂಕುಸ್ಥಾಪನೆ



**ಸುಳ್ಯ:** ರಾಜ್ಯ ಒಕ್ಕಲಿಗರ ಸಂಘದ ವತಿಯಿಂದ ಸುಳ್ಯದ ಕೇರ್ಪಳದಲ್ಲಿ ನಿರ್ಮಾಣವಗಲಿರುವ ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ಶಂಕುಸ್ಥಾಪನೆ ನಡೆಯತು.

ಕೇರ್ಪಳದಲ್ಲಿರುವ ಸಂಘದ ನಿವೇಶನದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯ ಒಕ್ಕಲಿಗರ ಸಂಘದ ಅಧ್ಯಕ್ಷ ಎಲ್.ಶ್ರೀನಿವಾಸ್ ಗುದ್ದಲಿಪೂಜೆ ನೆರವೇರಿಸಿದರು. ಸಂಘದ ಗೌರವಾಧ್ಯಕ್ಷ ಡಿ.ಕೆಂಚಪ್ಪ ಗೌಡ, ಕಾರ್ಯಾಧ್ಯಕ್ಷ ಡಾ.ಟಿ.ಎಚ್.ಆಂಜನಪ್ಪ, ಸಂಘದ ಉಪಾಧ್ಯಕ್ಷ ಡಾ.ರೇಣುಕಾಪ್ರಸಾದ್ ಕೆ.ವಿ. ಮತ್ತು ಪುಟ್ಟಸ್ವಾಮಿ, ಪ್ರಧಾನ ಕಾರ್ಯದರ್ಶಿ ಸಿ.ಜಿ.ಗಂಗಾಧರ್, ಆಂತರಿಕ ಲೆಕ್ಕಪರಿಶೋಧಕ ರಾಘವೇಂದ್ರ, ಸಹಾಯಕ ಕಾರ್ಯದರ್ಶಿ ಡಿ.ಕೆ.ರಮೇಶ್, ಖಜಾಂಜಿ ಕೆ.ವಿ.ಶ್ರೀಧರ್, ವಸತಿ ನಿಲಯ ಸಮಿತಿ ಅಧ್ಯಕ್ಷ ವೆಂಕಟ ರಾಮೇ ಗೌಡ, ಸಂಘಟನಾ ಕಾರ್ಯದರ್ಶಿ ಎನ್.ಬಾಲಕೃಷ್ಣ, ಜಿಲ್ಲಾವಾರು ಕಾಮಗಾರಿ ಸಮಿತಿ ಅಧ್ಯಕ್ಷ ಚಂದ್ರಶೇಖರ, ನಗರ ಕಾಮಗಾರಿ ಸಮಿತಿ ಅಧ್ಯಕ್ಷ ಎಸ್.ಕೆ.ಧರ್ಮೇಶ್ ಸಿರಿಬೈಲು, ಸಹಾಯಕ ಕಾರ್ಯದರ್ಶಿ ಡಾ. ಡಿ.ಕೆ.ರಮೇಶ್, ನಿರ್ದೇಶಕರುಗಳಾದ ಡಾ.ಎಂ.ವಿ.ಮಂಜೇಗೌಡ, ಬಿ.ಪಿ.ಮಂಜೇ ಗೌಡ, ಹೆಚ್. ಎನ್.ಅಶೋಕ್, ಸಿ. ದೇವರಾಜು, ಲೋಕೇಶ್ ಬಿ. ನಾಗರಾಜಯ್ಯ ಮತ್ತಿತರರು ಆಗಮಿಸಿದ್ದರು.

ಸಂಘದ ರಾಜ್ಯ ಉಪಾಧ್ಯಕ್ಷ ಡಾ.ರೇಣುಕಾಪ್ರಸಾದ್ ಕೆ.ವಿ.ಯವರ ನೇತೃತ್ವದಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಒಕ್ಕಲಿಗರ ಯಾನೆ ಗೌಡರ ಜಿಲ್ಲಾ ಮಾತೃ ಸಂಘದ ಅಧ್ಯಕ್ಷ ಲೋಕಯ್ಯ ಗೌಡ ಕೆ., ಪ್ರಧಾನ ಕಾರ್ಯದರ್ಶಿ ದಿನೇಶ್ ಮಡಪ್ಪಾಡಿ, ಕಾರ್ಯದರ್ಶಿ ರಾಮಣ್ಣ ಗೌಡ ಕೊಂಡೆಬಾಯಿ, ಉಪಾಧ್ಯಕ್ಷ ಪದ್ಮ ಗೌಡ ಬೆಳಾಲು, ಸುಳ್ಯ ತಾಲೂಕು ಗೌಡರ ಯುವ ಸೇವಾ ಸಂಘದ ಅಧ್ಯಕ್ಷ ಪಿ.ಎಸ್.ಗಂಗಾಧರ್, ಪ್ರಧಾನ ಕಾರ್ಯದರ್ಶಿ ತೀರ್ಥರಾಮ ಅಡ್ಕಬಳೆ, ಮೋಹನ್‌ರಾಮ್ ಸುಳ್ಳಿ, ರಾಕೇಶ್ ಕುಂಠಿಕಾನ, ಜಾಕೆ ಮಾಧವ ಗೌಡ, ಬಾಲಗೋಪಾಲ ಸೇರ್ಕಜೆ, ವೆಂಕಟ್ ದಂಬೆಕೋಡಿ ಮೊದಲಾದವರು ಉಪಸ್ಥಿತರಿದ್ದರು.

# 'ಅದಾನಿಗೆ ರೆಡ್ ಕಾರ್ಪೆಟ್, ಜನರಿಗೆ ಬಿಸ್ಕೆಟ್': ವಿಧಾನಸಭೆಯಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ



**ಬೆಂಗಳೂರು:** ಪ್ರತಿಪಕ್ಷ ನಾಯಕ ಆರ್. ಅಶೋಕ್ ನೇತೃತ್ವದಲ್ಲಿ ಬಿಜೆಪಿ–ಜೆಡಿಎಸ್ ಮೈತ್ರಿಕೂಟದ ಪ್ರತಿಪಕ್ಷ ಸದಸ್ಯರು ಇಂದು ವಿಧಾನಸಭೆಯಲ್ಲಿ ಪ್ರತಿಭಟನೆ ನಡೆಸಿದರು. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಾಂಗ್ರೆಸ್ ಸರ್ಕಾರ ಹಾಗೂ ಅದಾನಿ ವಿರುದ್ಧ ಘೋಷಣೆಗಳನ್ನು ಕೂಗಿದರು.

?ಅದಾನಿಗೆ ರೆಡ್ ಕಾರ್ಪೆಟ್, ಜನರಿಗೆ ಬಿಸ್ಕತ್?, ?ಡಿಕೆ ಸರ್ಕಾರ, ಭ್ರಷ್ಟರಿಗೆ ಅಧಿಕಾರ? ಎಂಬ ಘೋಷಣೆಗಳನ್ನು ಕೂಗಿದ ಪ್ರತಿಪಕ್ಷ ಸದಸ್ಯರು, ರಾಜ್ಯ ಸರ್ಕಾರ ಕಾರ್ಪೊರೇಟ್ ಹಿತಾಸಕ್ತಿಗಳಿಗೆ ಮಣೆ ಹಾಕುತ್ತಿದ್ದು, ಸಾರ್ವಜನಿಕ ಹಿತಾಸಕ್ತಿಗಳನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು.

ದಲಿತರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ದುರ್ಬಳಕೆ ಮಾಡಲಾಗಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ. ನಾಗೇಂದ್ರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹವನ್ನೂ ಬಿಜೆಪಿ ಮತ್ತಷ್ಟು ತೀವ್ರಗೊಳಿಸಿತು. ದಲಿತರ ಕಲ್ಯಾಣದ ಅನುದಾನದ ಹಣ ಎಲ್ಲಿಗೆ ಹೋಯಿತು ಎಂದು ಪ್ರಶ್ನಿಸಿದ ಸದಸ್ಯರು,

ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ವಜಾಗೊಳಿಸುವಂತೆ ಒತ್ತಾಯಿಸಿದರು. ಕಾಂಗ್ರೆಸ್ ನಾಯಕರಾದ ರಾಹುಲ್ ಗಾಂಧಿ ಮತ್ತು ಪ್ರಿಯಾಂಕಾ ಗಾಂಧಿ ಅವರನ್ನೂ ಪ್ರತಿಭಟನೆಯಲ್ಲಿ ಗುರಿಯಾಗಿಸಿದ ಬಿಜೆಪಿ ಸದಸ್ಯರು, ದಲಿತರ ಕಲ್ಯಾಣದ ಹಣ ಅವರ ನಿವಾಸಗಳಿಗೆ ತಲುಪಿದೆ ಎಂದು ಆರೋಪಿಸುವ ಘೋಷಣೆಗಳನ್ನು ಕೂಗಿದರು.

'ಅದಾನಿಗೆ ರೆಡ್ ಕಾರ್ಪೆಟ್, ಜನರಿಗೆ ಬಿಸ್ಕೆಟ್': ವಿಧಾನಸಭೆಯಲ್ಲಿ ಸರ್ಕಾರದ ವಿರುದ್ಧ ಬಿಜೆಪಿ ವಾಗ್ದಾಳಿ ಚಾಮರಾಜನಗರ ಅರಣ್ಯದಲ್ಲಿ ಗುಂಡಿನ ದಾಳಿ: ಸಿಬಿಐ ತನಿಖೆಗೆ ೩ಎಕ ಆಗ್ರಹ

ಪ್ರತಿಪಕ್ಷದ ಪ್ರತಿಭಟನೆ ನಾಗೇಂದ್ರ ವಿಚಾರಕ್ಕೆ ಮಾತ್ರ ಸೀಮಿತವಾಗಿರಲಿಲ್ಲ. ಸುರಂಗ ಯೋಜನೆ ಹಾಗೂ ಬೆಂಗಳೂರಿನ ಉದ್ಯಾನವನ ಮತ್ತು ಉದ್ಯಾನಗಳ ಸಂರಕ್ಷಣೆಗೆ ಸಂಬಂಧಿಸಿದ 1975ರ ಸರ್ಕಾರಿ ಉದ್ಯಾನವನಗಳ (ಸಂರಕ್ಷಣೆ) ಕಾಯ್ದೆಗೆ ತಿದ್ದುಪಡಿ ತರಲು ರಾಜ್ಯ ಸಚಿವ ಸಂಪುಟ ಕೈಗೊಂಡಿರುವ ನಿರ್ಧಾರಕ್ಕೂ ಬಿಜೆಪಿ ಸದಸ್ಯರು ವಿರೋಧ ವ್ಯಕ್ತಪಡಿಸಿದರು.

ಈ ತಿದ್ದುಪಡಿಯಿಂದ ಬೆಂಗಳೂರಿನ ಉದ್ಯಾನವನಗಳು ಮತ್ತು ಉದ್ಯಾನಗಳ ಭೂಮಿಯ ಶೇ.5ರಷ್ಟು ಭಾಗವನ್ನು ಸಾರ್ವಜನಿಕ ಮೂಲಸೌಕರ್ಯ ಮತ್ತು ಸಾರ್ವಜನಿಕ ಉಪಯುಕ್ತತಾ ಯೋಜನೆಗಳಿಗೆ ಬಳಸಲು ಅವಕಾಶ ದೊರೆಯಲಿದೆ. ಇದನ್ನು ವಿರೋಧಿಸಿದ ಬಿಜೆಪಿ ಸದಸ್ಯರು ?ಕಾಂಗ್ರೆಸ್ ಸರ್ಕಾರಕ್ಕೆ ಧಿಕ್ಕಾರ?, ?ಗಾರ್ಡನ್ ಸಿಟಿ ಗೋವಿಂದಾ ಗೋವಿಂದಾ? ಎಂಬ ಘೋಷಣೆಗಳನ್ನು ಕೂಗಿದರು. ಸರ್ಕಾರ ಬೆಂಗಳೂರಿನ ಹಸಿರು ಪ್ರದೇಶಗಳೊಂದಿಗೆ ರಾಜಿ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದರು.

ಪ್ರತಿಪಕ್ಷ ಸದಸ್ಯರು ಸದನದ ಬಾವಿಗಿಳಿದು ಪ್ರತಿಭಟನೆ ಹಾಗೂ ಘೋಷಣೆಗಳನ್ನು ಮುಂದುವರಿಸಿದರೂ, ವಿಧಾನಸಭಾಧ್ಯಕ್ಷ ಜಿ.ಎಸ್. ಪಾಟೀಲ್ ಅವರು ನಿಗದಿತ ಕಲಾಪವನ್ನು ಮುಂದುವರಿಸಿದರು. ಬಿಜೆಪಿ ಸದಸ್ಯರ ಪ್ರತಿಭಟನೆ ಮತ್ತು ಘೋಷಣೆಗಳ ನಡುವೆಯೇ ಹಲವು ಮಸೂದೆಗಳನ್ನು ಮಂಡಿಸಿ ಅಂಗೀಕರಿಸಲಾಯಿತು.

# ಇಡಿ ದಾಳಿ ಮುನ್ಸೂಚನೆ ಬೆನ್ನಲ್ಲೇ ದಾಖಲೆಗಳ ಸಮೇತ ನಾಪತ್ತೆಯಾಗಿದ್ದ ಜ್ಞಾನೇಂದ್ರ ಕುಮಾರ್



**ಬೆಂಗಳೂರು:** ತಮ್ಮ ನಿವಾಸದ ಮೇಲೆ ಯಾವುದೇ ಸಂದರ್ಭದಲ್ಲಿ ಜಾರಿ ನಿರ್ದೇಶನಾಲಯದ (ಇಡಿ) ಅಧಿಕಾರಿಗಳು ದಾಳಿ ನಡೆಸಬಹುದೆಂಬ ಮುನ್ಸೂಚನೆ ಅರಿತಿದ್ದ ಐಎಎಸ್ ಅಧಿಕಾರಿ ಜ್ಞಾನೇಂದ್ರ ಕುಮಾರ್ ಅವರು ದಾಖಲೆಗಳು ಹಾಗೂ ಡಿಜಿಟಲ್ ಸಾಧನಗಳ ಸಮೇತ ಬೆಂಗಳೂರಿನಿಂದ ನಾಪತ್ತೆಯಾಗಿದ್ದಾರೆ ಎಂಬ ಅನುಮಾನಗಳು ವ್ಯಕ್ತವಾಗಿವೆ.

ಭಾನುವಾರ ಜಯನಗರದಲ್ಲಿರುವ ಅವರ ನಿವಾಸದ ಮೇಲೆ ಇಡಿ ಅಧಿಕಾರಿಗಳು ದಾಳಿ ನಡೆಸಿದ ವೇಳೆ ಮನೆಯಲ್ಲಿ ಪ್ರಮುಖ ದಾಖಲೆಗಳು ಲಭ್ಯವಾಗಿರಲಿಲ್ಲ ಎನ್ನಲಾಗಿದೆ. ಸುಮಾರು ಒಂಬತ್ತು ಗಂಟೆಗಳ ಕಾಲ ಶೋಧ ನಡೆಸಿದ ಅಧಿಕಾರಿಗಳು ಅಗತ್ಯ ದಾಖಲೆಗಳು ಸಿಗದೆ ವಾಪಸ್ಸಾದರು ಎಂದು ತಿಳಿದುಬಂದಿದೆ.

ಇಡಿ ಅಧಿಕಾರಿಗಳು ತಮ್ಮ ಮೇಲೆ ದಾಳಿ ನಡೆಸುವ ಸಾಧ್ಯತೆ ಬಗ್ಗೆ ಮಾಹಿತಿ ಪಡೆದಿದ್ದ ಜ್ಞಾನೇಂದ್ರ ಕುಮಾರ್ ಅವರು ಮನೆಯಿಂದ ತೆರಳುವ ಮುನ್ನ ಲ್ಯಾಪ್‌ಟಾಪ್, ಹಾರ್ಡ್ ಡಿಸ್ಕ್, ಪೆನ್‌ಡ್ರೈವ್‌ಗಳು, ಬ್ಯಾಂಕ್ ಖಾತೆಗಳಿಗೆ ಸಂಬಂಧಿಸಿದ ದಾಖಲೆಗಳು ಸೇರಿದಂತೆ ಪ್ರಮುಖ ದಾಖಲೆಗಳನ್ನು ಬೇರೆಡೆಗೆ ಸ್ಥಳಾಂತರಿಸಿರಬಹುದು ಎಂಬ ಮಾತುಗಳು ಕೇಳಿಬಂದಿವೆ. ಆದರೆ, ಈ ಬಗ್ಗೆ ಅಧಿಕೃತವಾಗಿ ಯಾವುದೇ ದೃಢೀಕರಣ ಲಭ್ಯವಾಗಿಲ್ಲ.

ಕೆಪಿಎಸ್‌ಸಿ ನೇಮಕಾತಿ ಅಕ್ರಮದ ತನಿಖೆ ತೀವ್ರಗೊಳ್ಳುತ್ತಿದ್ದಂತೆ ಜ್ಞಾನೇಂದ್ರ ಕುಮಾರ್ ಅವರು ಮೊಬೈಲ್ ಫೋನ್ ಸ್ವಿಚ್ ಆಫ್ ಮಾಡಿಕೊಂಡು ಸಂಪರ್ಕಕ್ಕೆ ಸಿಗದೆ ಹೋಗಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಮೂರು ದಿನಗಳ ಹಿಂದೆ ಅವರು ಬೆಂಗಳೂರಿನಿಂದ ನಾಪತ್ತೆಯಾಗಿದ್ದಾರೆ ಎಂಬ ವರದಿಗಳು ಹರಿದಾಡಿದ್ದವು. ತಂದೆಯ ಅನಾರೋಗ್ಯದ ಹಿನ್ನೆಲೆಯಲ್ಲಿ ತುರ್ತಾಗಿ ಉತ್ತರ ಪ್ರದೇಶಕ್ಕೆ ತೆರಳಿದ್ದಾರೆ ಎಂದು ಅವರ ಪರವಾಗಿ ಸ್ಪಷ್ಟನೆ ನೀಡಲಾಗಿತ್ತು. ಜಯಮಹಲ್ ನಿವಾಸದ ಮೇಲೆ ಇಡಿ ದಾಳಿ ಬೆಂಗಳೂರಿನ ಜಯಮಹಲ್/ಜಯನಗರ ಪ್ರದೇಶದಲ್ಲಿರುವ ಜ್ಞಾನೇಂದ್ರ ಕುಮಾರ್ ಅವರ ನಿವಾಸದ ಮೇಲೆ ಸಿಆರ್‌ಪಿಎಫ್ ಸಿಬ್ಬಂದಿಯೊಂದಿಗೆ ಆಗಮಿಸಿದ ಇಡಿ ಅಧಿಕಾರಿಗಳು ಶೋಧ ನಡೆಸಿದರು. ಆರಂಭದಲ್ಲಿ ಮನೆಯ ಬಾಗಿಲು ಲಾಕ್ ಆಗಿದ್ದರಿಂದ ಕೀ ಮೇಕರ್ ಮೂಲಕ ಬೀಗ ತೆರೆದು ಅಧಿಕಾರಿಗಳು ತಪಾಸಣೆ ನಡೆಸಿದರು ಎಂದು ತಿಳಿದುಬಂದಿದೆ. ಪಶು ವೈದ್ಯಾಧಿಕಾರಿಗಳ ನೇಮಕಾತಿ ಅಕ್ರಮ ಸೇರಿದಂತೆ ಕೆಪಿಎಸ್‌ಸಿ ನೇಮಕಾತಿಗೆ ಸಂಬಂಧಿಸಿದ ಭ್ರಷ್ಟಾಚಾರ, ಮಧ್ಯವರ್ತಿಗಳ ಮೂಲಕ ಹಣ ವಸೂಲಿ, ಪ್ರಶ್ನೆಪತ್ರಿಕೆ ಸೋರಿಕೆ ಹಾಗೂ ಒಎಂಆರ್ ಶೀಟ್ ತಿರುಚಿದ ಆರೋಪಗಳ ಕುರಿತು ತನಿಖೆ ನಡೆಯುತ್ತಿದೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಈ ಹಿಂದೆ ಕೆಪಿಎಸ್‌ಸಿ ಅಧ್ಯಕ್ಷ ಶಿವಶಂಕರಪ್ಪ ಎಸ್. ಸಾಹುಕಾರ್ ಸೇರಿದಂತೆ ಹಲವು ವ್ಯಕ್ತಿಗಳ ನಿವಾಸಗಳ ಮೇಲೂ ಇಡಿ ಶೋಧ ನಡೆಸಿತ್ತು.

ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ಸಾಧ್ಯತೆ ತನಿಖೆಗೆ ಸಹಕರಿಸದಿರುವುದು ಹಾಗೂ ಸಂಪರ್ಕಕ್ಕೆ ಸಿಗದಿರುವ ಹಿನ್ನೆಲೆಯಲ್ಲಿ ಜ್ಞಾನೇಂದ್ರ ಕುಮಾರ್ ಅವರ ವಿರುದ್ಧ ಮುಂದಿನ ಕಾನೂನು ಕ್ರಮಕ್ಕೆ ತನಿಖಾ ತಂಡ ಸಿದ್ಧತೆ ನಡೆಸುತ್ತಿದೆ ಎನ್ನಲಾಗಿದೆ. ಅಗತ್ಯ ದಾಖಲೆಗಳೊಂದಿಗೆ ಬೆಂಗಳೂರಿನ ಶಾಂತಿನಗರದಲ್ಲಿರುವ ಇಡಿ ಕಚೇರಿಯಲ್ಲಿ ವಿಚಾರಣೆಗೆ ಹಾಜರಾಗುವಂತೆ ಸಮನ್ಸ್ ಜಾರಿಗೊಳಿಸುವ ಸಾಧ್ಯತೆಯೂ ಇದೆ ಎಂದು ಮೂಲಗಳು ತಿಳಿಸಿವೆ.

ಆದರೆ, ಜ್ಞಾನೇಂದ್ರ ಕುಮಾರ್ ಅವರು ದಾಖಲೆಗಳನ್ನು ತೆಗೆದುಕೊಂಡು ಉದ್ದೇಶಪೂರ್ವಕವಾಗಿ ನಾಪತ್ತೆಯಾಗಿದ್ದಾರೆ ಎಂಬ ಆರೋಪಗಳಿಗೆ ಅಧಿಕೃತ ದೃಢೀಕರಣ ದೊರೆತಿಲ್ಲ. ಕೆಪಿಎಸ್‌ಸಿ ನೇಮಕಾತಿ ಅಕ್ರಮ ಪ್ರಕರಣದ ತನಿಖೆ ಮುಂದುವರಿದಿದ್ದು, ಮುಂದಿನ ದಿನಗಳಲ್ಲಿ ಈ ಕುರಿತು ಹೆಚ್ಚಿನ ಮಾಹಿತಿ ಹೊರಬರುವ ನಿರೀಕ್ಷೆಯಿದೆ.

# ಇಂದಿನಿಂದ ಟೌನ್‌ಶಿಪ್ ವಿರೋಧಿಸಿ ಫ್ರೀಡಂ ಪಾರ್ಕ್‌ನಲ್ಲಿ ಅನಿರ್ದಿಷ್ಟಾವಧಿ ಧರಣಿ

ರಾಮನಗರ: ಬಿಡದಿ ಟೌನ್‌ಶಿಪ್ ಯೋಜನೆ ರದ್ದುಪಡಿಸುವಂತೆ ಒತ್ತಾಯಿಸಿ ಆ.25ರ ಮಂಗಳವಾರ ಬೆಂಗಳೂರಿನ ಫ್ರೀಡಂ ಪಾರ್ಕ್‌ನಿಂದ ವಿಧಾನಸೌಧ ಚಲೋ ಹಮ್ಮಿಕೊಂಡಿದ್ದೇವೆ. ಇದಕ್ಕೆ ಅವಕಾಶ ನೀಡದಿದ್ದರೆ ಆಮರಣಾಂತ ಉಪವಾಸ ಸತ್ಯಾಗ್ರಹ ನಡೆಸುವುದಾಗಿ ಬೈರಮಂಗಲ–ಕಂಚುಗಾರನಹಳ್ಳಿ ರೈತ ಭೂ ಹಿತರಕ್ಷಣಾ ಸಂಘದ ಮುಖಂಡ ಪ್ರಕಾಶ್ ಎಚ್ಚರಿಕೆ ನೀಡಿದರು.

ನಗರದ ಖಾಸಗಿ ಹೋಟೆಲ್‌ನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕಳೆದ 18 ತಿಂಗಳಿಂದ ಬಿಡದಿ ಟೌನ್‌ಶಿಪ್ ಯೋಜನೆ ವಿರೋಧಿಸಿ ರೈತರು ನಡೆಸುತ್ತಿರುವ ಹೋರಾಟ ಆಗಸ್ಟ್ 25ರಂದು ಬೈರಮಂಗಲ ವೃತ್ತದಿಂದ ಫ್ರೀಡಂ ಪಾರ್ಕಿಗೆ ಸ್ಥಳಾಂತರಗೊಳ್ಳಲಿದೆ. ರಾಜ್ಯ ಸರ್ಕಾರ ಟೌನ್‌ಶಿಪ್ ಯೋಜನೆ ರದ್ದು ಮಾಡಬೇಕು. ಇದು ಕೇವಲ ಮನವಿ ಕೊಟ್ಟು ಬರುವ ಹೋರಾಟವಲ್ಲ, ಮಾಡು ಇಲ್ಲವೇ ಮಡಿ ಹೋರಾಟವಾಗಲಿದೆ ಎಂದು ತಿಳಿಸಿದರು.

ಮೊದಲ ಎರಡು ದಿನ ಸಾಂಕೇತಿಕವಾಗಿ ಹೋರಾಟ ನಡೆಸುತ್ತೇವೆ. ಅದಕ್ಕೆ ರಾಜ್ಯ ಸರ್ಕಾರ ಸ್ಪಂದಿಸಿ ಟೌನ್‌ಶಿಪ್ ರದ್ದು ಮಾಡದಿದ್ದರೆ ಉಪವಾಸ ಸತ್ಯಾಗ್ರಹ ನಡೆಸುತ್ತೇವೆ. ಇದರಲ್ಲಿ ರೈತರ ಸಾವು–ನೋವು ಸಂಭವಿಸಿದರೆ ಸರ್ಕಾರ ಮತ್ತು ಜಿಬಿಡಿಎ ಹೊಣೆಯಾಗಬೇಕಾಗುತ್ತದೆ. ಆನಂತರ ಬೇಕಾದರೆ ರೈತರ ಸಮಾಧಿ ಮೇಲೆ ಟೌನ್‌ಶಿಪ್ ನಿರ್ಮಾಣ ಮಾಡಲಿ ಎಂದರು.

ರೈತರ ಹೋರಾಟಕ್ಕೆ ಬೆಲೆಯಿಲ್ಲ: ಇಲ್ಲಿವರೆಗೆ ಆಹೋರಾತ್ರಿ ಧರಣಿ, ರಸ್ತೆತಡೆ, ಜಿಲ್ಲಾಧಿಕಾರಿಗಳ ಕಚೇರಿ ಮುತ್ತಿಗೆಯಂತಹ ಹಲವಾರು ಪ್ರತಿಭಟನೆ ನಡೆಸಿದ್ದೇವೆ. ರಾಜ್ಯಪಾಲರು, ಮುಖ್ಯಮಂತ್ರಿಗಳು, ಜಿಲ್ಲಾ ಉಸ್ತುವಾರಿ ಸಚಿವರು, ಶಾಸಕರು, ಜಿಲ್ಲಾಧಿಕಾರಿಗಳು, ಜಿಬಿಡಿಎ ಅಧ್ಯಕ್ಷರು, ಆಯುಕ್ತರಿಗೆ ಸಾಕಷ್ಟು ಬಾರಿ ಮನವಿ ಸಲ್ಲಿಸಿದ್ದೇವೆ. ಇದನ್ನು ಗಂಭೀರವಾಗಿ ಪರಿಗಣಿಸದ ಸರ್ಕಾರ ರೈತರ ವಿಚಾರದಲ್ಲಿ ಆಗೌರವದಿಂದ. ನಡೆದುಕೊಂಡಿದೆ. ಈ ಹೋರಾಟ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿಗಳ 5 ಸಾವಿರ ಕುಟುಂಬಗಳಿಗೆ ಸೀಮಿತವಲ್ಲ. ಸಮಸ್ತ ರೈತರ ಬದುಕಿನ ಪ್ರಶ್ನೆಯಾಗಿರುವ ಕಾರಣ ಎಲ್ಲರೂ ಬೆಂಬಲ ನೀಡಬೇಕು ಎಂದರು.

ಅಧಿಸೂಚನೆ ಹೊರಡಿಸಲಿ: ಮುಖ್ಯಮಂತ್ರಿಗಳು ಬಲವಂತವಾಗಿ ಭೂಸ್ವಾಧೀನ ಮಾಡುವುದಿಲ್ಲ, ಒಪ್ಪಿಗೆ ನೀಡುವ ರೈತರ ಭೂಮಿ ಮಾತ್ರ ಸ್ವಾಧೀನ ಪಡಿಸಿಕೊಳ್ಳುವುದಾಗಿ ಹೇಳುತ್ತಿದ್ದಾರೆ. ಹಾಗಾದರೆ ಎಲ್ಲ ಭೂಮಿಗೆ ಅನ್ವಯವಾಗುವಂತೆ ಭೂ ಸ್ವಾಧೀನ ಅಂತಿಮ ಅಧಿಸೂಚನೆ ಏಕೆ ಹೊರಡಿಸಿದರು. ಒಪ್ಪಿಗೆ ನೀಡದ ರೈತರ ಭೂಮಿ ಸ್ವಾಧೀನ ಮಾಡುವುದಿಲ್ಲವೆಂದು ಕ್ಯಾಬಿನೆಟ್‌ನಲ್ಲಿ ತೀರ್ಮಾನಿಸಿ ಅಧಿಸೂಚನೆ ಹೊರಡಿಸಲಿ ಎಂದು ಸವಾಲು ಹಾಕಿದರು.

ಈಗಾಗಲೇ ನೆಲಮಂಗಲ, ದೊಡ್ಡಬಳ್ಳಾಪುರ, ದೇವನಹಳ್ಳಿ, ದಾಬಸ್ ಪೇಟೆ, ನರಸಾಪುರ, ಹಾರೋಹಳ್ಳಿ, ಜಿಗಣಿ, ಬಿಡದಿ, ಕುಂಬಳಗೂಡು ಕೈಗಾರಿಕಾ ಪ್ರದೇಶಗಳು ತಲೆ ಎತ್ತಿವೆ. ಕೃಷಿ ಭೂಮಿಯನ್ನೇ ಸ್ವಾಧೀನ ಪಡಿಸಿಕೊಂಡರೆ ಬೆಂಗಳೂರು ಜನರಿಗೆ ಕೃಷಿ, ತೋಟಗಾರಿಕೆ ಉತ್ಪನ್ನಗಳು ಎಲ್ಲಿಂದ ಸರಬರಾಜು ಆಗುತ್ತದೆ? ಹಾಗಾಗಿ ಇದು ಬೆಂಗಳೂರು ಜನರ ಬದುಕಿನ ಪ್ರಶ್ನೆಯೂ ಆಗಿದೆ. ಫ್ರೀಡಂ ಪಾರ್ಕಿನಲ್ಲಿನ ಹೋರಾಟಕ್ಕೆ ಯಾವುದೇ ರಾಜಕೀಯ ಪಕ್ಷಗಳನ್ನು ಆಹ್ವಾನಿಸಿಲ್ಲ. ರೈತ, ದಲಿತ, ಕಾರ್ಮಿಕ, ಕನ್ನಡಪರ ಹಾಗೂ ಮಹಿಳಾ ಸಂಘಟನೆಗಳ ಬೆಂಬಲ ಕೇಳಿದ್ದೇವೆ. ಇಲ್ಲಿವರೆಗೆ ವಿಪಕ್ಷಗಳು ಅಧಿವೇಶನದಲ್ಲಿ ಟೌನ್‌ಶಿಪ್ ವಿಚಾರ ಪ್ರಸ್ತಾಪ ಮಾಡಿಲ್ಲ. ಕೊನೆ ಕ್ಷಣದವರೆಗೂ ಕಾದು ನೋಡುತ್ತೇವೆ. ಯಾರೂ ಧ್ವನಿ ಎತ್ತದಿದ್ದರೆ ವಿಪಕ್ಷಗಳಿಗೂ ಉತ್ತರ ಕೊಡುತ್ತೇವೆ ಎಂದು ಎಚ್ಚರಿಸಿದರು.

ದಲ್ಲಾಳಿಗಳ ಮೂಲಕ ಬೆದರಿಕೆ: ರಸ್ತೆ ಸಂಪರ್ಕ ಇಲ್ಲದವರು, ಪಿ ನಂಬರ್ ಇರುವವರು ಹಾಗೂ ಹಣದ ಅವಶ್ಯಕತೆ ಇರುವವರು ಭೂ ಪರಿಹಾರ ಪಡೆಯುತ್ತಿದ್ದಾರೆ. ಈ ಯೋಜನೆ ಇಲ್ಲದಿದ್ದರೂ ಮಾರಾಟ ಪ್ರಕ್ರಿಯೆ ನಡೆಯುತ್ತಿತ್ತು. ಆದರೀಗ ರೈತರು ಜಿಬಿಡಿಎ ತಂತ್ರ ಕುತಂತ್ರಗಳಿಗೆ ಬಲಿಯಾಗುತ್ತಿದ್ದಾರೆ. ಭೂ ಸ್ವಾಧೀನದ ಭೂತ ಬಂದ ಮೇಲೆ ಬೈರಮಂಗಲ ಮತ್ತು ಕಂಚುಗಾರನಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಸೂತಕದ ಛಾಯೆ ಆವರಿಸಿದೆ. ರಕ್ತ ಸಂಬಂಧಗಳಿಗೆ ಬೆಲೆ ಇಲ್ಲದಂತಾಗಿದೆ. ಅವಿಭಕ್ತ ಕುಟುಂಬದ ಮಹಿಳೆಯರಿಂದ ಪರಿಹಾರದ ವಿಚಾರವಾಗಿ ತಕರಾರು ಅರ್ಜಿ ಹಾಕಿಸಿ ರೈತರನ್ನು ಬೆದರಿಸುತ್ತಿದ್ದಾರೆ. ಇದಕ್ಕಾಗಿಯೇ ಜಿಬಿಡಿಎ ದಲ್ಲಾಳಿಗಳನ್ನು ಬಿಟ್ಟಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಠಾಧೀಶರು ರಾಜಕೀಯಕ್ಕೆ ಸೀಮಿತಗೊಂಡಿದ್ದಾರೆ. ತಮ್ಮ ಸಮುದಾಯದ ನಾಯಕರಿಗೆ ಮಂತ್ರಿಗಿರಿ ಅಥವಾ ಮುಖ್ಯಮಂತ್ರಿ ಹುದ್ದೆ ಕೊಡಿಸಲು ಹಾಗೂ ಮೀಸಲಾತಿ ಬಗೆಗಿರುವ ಕಾಳಜಿ ರೈತರ ಮೇಲಿಲ್ಲ ಎಂದು ಕಿಡಿಕಾರಿದರು.

# ಸಹಬಾಳ್ವೆಯಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ



**ರಾಮನಗರ:** ಮನುಷ್ಯ ಒಳ್ಳೆಯ ಸದ್ಭಾವನೆ ಸದ್ವಿಚಾರ ಸನ್ನಡತೆಯನ್ನು ಬದುಕಿನಲ್ಲಿ ಅಳವಡಿಸಿಕೊಳ್ಳುವುದು ಬಹಳ ಮುಖ್ಯವಾಗಿದೆ ಎಂದು ಸುತ್ತೂರು ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ತಿಳಿಸಿದರು.

ಬೆಂಗಳೂರು ದಕ್ಷಿಣ ಜಿಲ್ಲೆ ವಿಶ್ವ ವೀರಶೈವ ಲಿಂಗಾಯಿತ ಒಕ್ಕೂಟ ವತಿಯಿಂದ ರಾಮನಗರದ ಅನ್ನಪೂರ್ಣೇಶ್ವರಿ ಬಡಾವಣೆಯ ಪೋಲೀಸ್ ರುದ್ರೇಶ್ ಅವರ ಮನೆ ಅಂಗಳದಲ್ಲಿ ಭಾನುವಾರ ನಡೆದ ಶಿವಾನುಭವಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶೀರ್ವಚನ ನೀಡಿ ಮಾತನಾಡಿದರು. ಮನುಷ್ಯನ ಸುಖ ಜೀವನಕ್ಕೆ ಧನ ಹೇಗೆ ಮುಖ್ಯವೋ ಹಾಗೇ ಅಧ್ಯಾತ್ಮಿಕ ಚಿಂತನೆಗಳು ಭಗವಂತನ ನಾಮ ಸ್ಮರಣೆಯೂ ಕೂಡ ಅಷ್ಟೇ ಮುಖ್ಯವಾಗಿವೆ. ಪ್ರೀತಿ, ಕರುಣೆ, ಸಹಬಾಳ್ವೆಯಿಂದ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಭಕ್ತ ಭಗವಂತನ ಕಡೆಗೆ ಅಭಿಮುಖವಾಗಿ ಪ್ರಾರ್ಥನೆ ಸಲ್ಲಿಸಿದಾಗ ಭಗವಂತನ ಕೃಪೆ ಸಿಗಲಿದೆ. ಇದಕ್ಕೆ ಉದಾಹರಣೆ ಎಂದರೆ ಪ್ರತೀ ಶಿವನ ದೇವಾಲಯದ ಶಿವಲಿಂಗದ ಮುಂದೆ ನಂದಿ ಪ್ರತಿಷ್ಠಾಪಿಸಿರುವುದೇ ಸಾಕ್ಷಿ. ಜಗತ್ತಿನ ಎಲ್ಲೆಡೆ ವ್ಯಾಪಿಸಿರುವ ಭಗವಂತನು ಪ್ರತಿಯೊಬ್ಬ ಮನುಷ್ಯನಲ್ಲೂ ನೆಲೆಸಿದ್ದಾನೆ. ಮನುಷ್ಯನ ಪಂಚೇಂದ್ರಿಯಗಳು ಕೆಲಸ ಮಾಡುತ್ತಿರುವುದೇ ದೈವಿಕ ಶಕ್ತಿಯ ಉಪಸ್ಥಿತಿಗೆ ಸಾಕ್ಷಿಯಾಗಿದೆ.

ಮನುಷ್ಯ ಜೀವಂತವಿರುವವರೆಗೆ ಮಾತ್ರ ದೇಹಕ್ಕೆ ಮತ್ತು ಹೆಸರಿಗೆ ಬೆಲೆ ಇರುತ್ತದೆ ಉಸಿರು ನಿಂತರೆ ಎಲ್ಲವೂ ನಿಶ್ಚೇಲವಾಗುತ್ತದೆ ಭಗವಂತ ಹೊರಗಿಲ್ಲ, ಪ್ರತಿಯೊಬ್ಬರ ಅಂತರಂಗದಲ್ಲಿದ್ದಾನೆ ಎಂಬ ಸತ್ಯವನ್ನು ಅರಿತು ಆಚರಣೆಗೆ ತರುವುದು ಜೀವನದಲ್ಲಿ ಅತ್ಯಂತ ಮುಖ್ಯವಾಗಿದೆ. ಭಗವಂತ ಇಡೀ ಜಗತ್ತನ್ನು ಆವರಿಸಿದ್ದಾನೆ. ಭಗವಂತನನ್ನು ಬಿಟ್ಟು ಜಗತ್ತಿನಲ್ಲಿ ಇರಲಿಕ್ಕೆ ಸಾಧ್ಯವಿಲ್ಲ. ಆದರೆ ಭಗವಂತನನ್ನು ಕಾಣುವುದು ಹೇಗೆಂದರೆ, ನಾವು ನಿರೀಕ್ಷೆ ಮಾಡುವ ಹಾಗೆ ಕಾಣಲಿಕ್ಕೆ ಸಾಧ್ಯವಿಲ್ಲ. ಭಗವಂತನನ್ನು ವಿವಿಧ ರೂಪಗಳಲ್ಲಿ ಪೂಜಿಸುತ್ತೇವೆ, ಆರಾಧನೆ ಮಾಡುತ್ತೇವೆ.

ಸದಾ ಭಗವಂತನ ಸ್ಮರಣೆ ಶಿವಪೂಜೆ ನಮ್ಮ ಕಾಯಕ ನಡೆಸುತ್ತಾ ಸತ್ಯ ಮಾರ್ಗದಲ್ಲಿ ನಡೆದರೆ ಭಗವಂತ ಎಲ್ಲಾ ರೂಪದಲ್ಲೂ ಕಣುತ್ತಾನೆ. ನಾವು ಭಗವಂತನನ್ನು ಕಾಣಬೇಕಾದರೆ ನಮ್ಮಲ್ಲಿ ಸತ್ಯ ನಿಷ್ಠೆ ಮೈಗೂಡಿಸಿಕೊಳ್ಳಬೇಕು. ಬಸವಣ್ಣನವರ ಸಪ್ತ ಸೂತ್ರಗಳ ವಚನದಂತೆ ನಾವು ಅವರ ದಾರಿಯಲ್ಲಿ ಸಾಗೋಣ ಎಂದು ತಿಳಿಸಿದರು. ವಿಶ್ವ ವೀರಶೈವ ಲಿಂಗಾಯಿತ ಒಕ್ಕೂಟ ಅಧ್ಯಕ್ಷ ಪೋಲೀಸ್ ರುದ್ರೇಶ್ ಮಾತನಾಡಿ ಶಿವಾನುಭಗೋಷ್ಠಿ ಕಾರ್ಯಕ್ರಮ ವೀರಶೈವ ಲಿಂಗಾಯಿತ ಜಾಗೃತ ಗೋಷ್ಠಿಯಾಗಿದ್ದು, ಧರ್ಮ ಆಚಾರ ಮತ್ತು ವಿಚಾರಗಳ ಕುರಿತು ಮಾಹಿತಿ ನೀಡುವ ಕೆಲಸ ಮಾಡುತ್ತಿದೆ. ಒಕ್ಕೂಟದ ವತಿಯಿಂದ ಕಳೆದ ತಿಂಗಳು ಜಿಲ್ಲಾ ಮಟ್ಟದ ಪ್ರತಿಭಾ ಪುರಸ್ಕಾರ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯ ಸುಮಾರು 120ಕ್ಕೂ ಹೆಚ್ಚು ವೀರಶೈವ ಸಮಾಜದ ನಡೆಸಲಾಗಿತ್ತು. ಸುತ್ತೂರು ಶ್ರೀಗಳನ್ನು ಕರೆಸಿ ಭಕ್ತರಿಗೆ ಆಶೀರ್ವಚನ ನೀಡಿಸಬೇಕು ಎಂಬ ನಮ್ಮ ಚಿಂತನೆ ಇಂದು ನೆರವೇರಿದೆ. ಶ್ರೀಗಳು ಶಿವಾನುಭವಗೋಷ್ಠಿಗೆ ಬಂದು ಆಶೀರ್ವಚನ ನೀಡಿದ್ದಾರೆ.

ಮುಂದಿನ ಮರ?ನಾಲ್ಕು ತಿಂಗಳಲ್ಲಿ ಮತ್ತೆ ಜಿಲ್ಲಾ ಮಟ್ಟದ ಬಹುದೊಡ್ಡ ಕಾರ್ಯಕ್ರಮವನ್ನು ಸುತ್ತೂರು ಶ್ರೀಗಳ ಸಾನ್ನಿಧ್ಯದಲ್ಲಿ ಮಾಡಲಾಗುತ್ತದೆ. ಶ್ರೀಗಳು ಶಿವಾನುಭವಗೋಷ್ಠಿ ಕಾರ್ಯಕ್ರಮವನ್ನು ಪ್ರತೀ ತಿಂಗಳು ನಡೆಸಲು ಆಶೀರ್ವಾದ ಮಾಡಿ ತಿಳಿಸಿದ್ದಾರೆ. ಅವರ ಆಣತಿಯಂತೆ ಜಿಲ್ಲೆಯ ಎಲ್ಲಾ ತಾಲ್ಲೂಕು, ಗ್ರಾಮ, ನಗರಗಳಲ್ಲಿ ಪ್ರತೀ ತಿಂಗಳು ಸಮಾಜದ ಸ್ವಾಮೀಜಿಗಳನ್ನು ಕರೆಸಿ ಕಾರ್ಯಕ್ರಮ ನಡೆಸಲಾಗುತ್ತದೆ ಎಂದು ತಿಳಿಸಿದರು.

ನಂಜನಗೂಡು ಹೊನ್ನಲಗೆರೆ ಮಠಾಧ್ಯಕ್ಷರಾದ ಶ್ರೀ ಶಿವಮೂರ್ತಿ ಶಿವಾಚಾರ್ಯ ಸ್ವಾಮೀಜಿ, ಬಿಡದಿ ಪುರಸಭಾ ಸದಸ್ಯ ಲೋಹಿತ್‌ಕುಮಾರ್, ವಿಶ್ವ ವೀರಶೈವ ಲಿಂಗಾಯಿತ ಒಕ್ಕೂಟ ಗೌರವಾಧ್ಯಕ್ಷ ಮಹದೇವಶಾಸ್ತ್ರಿ, ಪ್ರಧಾನ ಕಾರ್ಯದರ್ಶಿ ರಾಜಶೇಖರ್, ಮಾಗಡಿ ರೋಹಿತ್, ಮಂಜುನಾಥ್ ಮುಖಂಡರುಗಳಾದ ಅನಿತ ರುದ್ರೇಶ್, ಪರಪ್ಪ, ರೇವಣ್ಣ, ಸಿದ್ದಲಿಂಗಮೂರ್ತಿ, ವಿಜಯಕುಮಾರ್, ಜಗದೀಶ್, ನಂದೀಶ್‌ಕುಮಾರ್, ಶಿವಣ್ಣ, ರುದ್ರೇಶ್, ತೇಜಸ್, ಧನುಷ್, ಪ್ರಭುಲಿಂಗೇಶ್ವರ್, ಸೌಭಾಗ್ಯಮ್ಮ, ಮಂಜುನಾಥ್, ಸರ್ವಮಂಗಳಮ್ಮ, ಮಂಜುನಾಥ್, ಮುನಿವೈದ್ಯರಾಜು, ರಾಜೇಂದ್ರ, ಸರ್ವೇಶ್, ಶಿವರಾಜಮ್ಮ, ನೇತ್ರ, ವಿಜಯಕುಮಾರ್, ಸ್ವಾಮಿ, ಪ್ರಕಾಶ್ ಇದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKANAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. CONTACT : 9901010109 GMAIL: suryapragathi2021@gmail.com.

# ನ್ಯಾಟೋ ಮಾದರಿಯ ಮುಸ್ಲಿಂ ರಾಷ್ಟ್ರಗಳ ಮೆಕ್ಕಾ ರಕ್ಷಣಾ ಒಕ್ಕೂಟಕ್ಕೆ ಇರಾನ್‌ಗೆ ಆಹ್ವಾನ



**ಟೆಹ್ರಾನ್:** ಅಮೆರಿಕದೊಂದಿಗೆ ಉದ್ವಿಗ್ನತೆ ಮುಂದುವರಿದಿರುವ ನಡುವೆಯೇ ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ಟರ್ಕಿ ದೇಶಗಳು ಆ.7ರಂದು ಸಹಿ ಹಾಕಿರುವ ಮಹತ್ವದ ಮೆಕ್ಕಾ ಜಂಟಿ ರಕ್ಷಣಾ ಒಪ್ಪಂದಕ್ಕೆ ಸೇರ್ಪಡೆಗೊಳ್ಳುವಂತೆ ಇರಾನ್‌ಗೆ ಅಧಿಕೃತ ಆಹ್ವಾನ ನೀಡಲಾಗಿದೆ.ಟೆಹ್ರಾನ್‌ಗೆ ಈ ಆಹ್ವಾನ ಬಂದಿದ್ದು, ಪ್ರಸ್ತಾವನೆಯನ್ನು ಪರಿಶೀಲಿಸಲಾಗುತ್ತಿದೆ ಎಂದು ಇರಾನ್ ಸಂಸತ್ತಿನ ಸುದ್ದಿ ಸಂಸ್ಥೆಯ ಮುಖ್ಯಸ್ಥ ಮೆಹ್ದಿ ರಹೀಮಿ ತಿಳಿಸಿದ್ದಾರೆ ಎಂದು ಅಲ್ ಮಯಾದೀನ್ ವರದಿ ಮಾಡಿದೆ.

ಪಾಕಿಸ್ತಾನದ ಸೇನಾ ಮುಖ್ಯಸ್ಥ ಅಸಿಮ್ ಮುನೀರ್ ಅವರು ಶೀಘ್ರದಲ್ಲೇ ಟೆಹ್ರಾನ್‌ಗೆ ಭೇಟಿ ನೀಡಲಿರುವ ಬೆನ್ನಲ್ಲೇ ಈ ಬೆಳವಣಿಗೆ ನಡೆದಿದೆ. ಹೀಗಾಗಿ ರಕ್ಷಣಾ ಒಕ್ಕೂಟದ ವಿಸ್ತರಣೆಯ ಕುರಿತ ಚರ್ಚೆಗೆ ಹೆಚ್ಚಿನ ಮಹತ್ವ ಬಂದಿದೆ.

ಸೌದಿ ಅರೇಬಿಯಾ, ಪಾಕಿಸ್ತಾನ ಮತ್ತು ಟರ್ಕಿ ಸಹಿ ಹಾಕಿರುವ ಒಪ್ಪಂದದ ಪ್ರಕಾರ, ಮೂರು ದೇಶಗಳ ಪೈಕಿ ಯಾವುದೇ ಒಂದು ದೇಶದ ಮೇಲೆ ಸಶಸ್ತ್ರ ದಾಳಿ ನಡೆದರೂ ಅದನ್ನು ಮೂರೂ ದೇಶಗಳ ಮೇಲಿನ ದಾಳಿ ಎಂದು ಪರಿಗಣಿಸಲಾಗುತ್ತದೆ.ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಸಂದರ್ಭದಲ್ಲೇ ಈ ಬೆಳವಣಿಗೆ ನಡೆದಿದೆ. ಈ ಐತಿಹಾಸಿಕ ಹೆಜ್ಜೆಯನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸ್ವಾಗತಿಸಿದ್ದಾರೆ.ಏನಿದು ?ಮುಸ್ಲಿಂ ನ್ಯಾಟೋ ಸೌದಿ ಅರೇಬಿಯಾ, ಟರ್ಕಿ ಮತ್ತು ಪಾಕಿಸ್ತಾನ ದೇಶಗಳ ನಡುವೆ ಏರ್ಪಟ್ಟಿರುವುದು ತ್ರಿಪಕ್ಷೀಯ ಕಾರ್ಯತಂತ್ರದ ರಕ್ಷಣಾ ಮತ್ತು ಮಿಲಿಟರಿ ಸಹಕಾರ ಒಪ್ಪಂದ. ಆ.7ರಂದು ಸೌದಿ ಅರೇಬಿಯಾದ ಮೆಕ್ಕಾದ ಅಲ್–ಸಫಾ ಅರಮನೆಯಲ್ಲಿ ಈ ಒಪ್ಪಂದಕ್ಕೆ ಅಧಿಕೃತವಾಗಿ ಸಹಿ ಹಾಕಲಾಗಿದೆ.

ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಪ್ರಾದೇಶಿಕ ಉದ್ವಿಗ್ನತೆ ಹಾಗೂ ಯುದ್ಧದ ಸನ್ನಿವೇಶಗಳ ಹಿನ್ನೆಲೆಯಲ್ಲಿ ಈ ಮೂರು ಪ್ರಮುಖ ಮುಸ್ಲಿಂ ರಾಷ್ಟ್ರಗಳು ಒಟ್ಟಾಗಿ ಈ ನಿರ್ಧಾರ ಕೈಗೊಂಡಿವೆ.

ಒಪ್ಪಂದದ ಪ್ರಮುಖ ಅಂಶವೆಂದರೆ, ಮೈತ್ರಿಕೂಟದ ಯಾವುದೇ ಒಂದು ಸದಸ್ಯ ರಾಷ್ಟ್ರದ ಮೇಲೆ ಹೊರಗಿನಿಂದ ಸಶಸ್ತ್ರ ದಾಳಿ ನಡೆದರೆ, ಅದನ್ನು ಮೂರೂ ದೇಶಗಳ ಮೇಲಿನ ದಾಳಿ ಎಂದು ಪರಿಗಣಿಸುವುದು. ಈ ವ್ಯವಸ್ಥೆಯು ನ್ಯಾಟೋದ ಸಾಮೂಹಿಕ ರಕ್ಷಣಾ ತತ್ವವನ್ನು ಹೋಲುತ್ತದೆ. ಹೀಗಾಗಿ ಇದನ್ನು ಕೆಲವರು ?ಮುಸ್ಲಿಂ ನ್ಯಾಟೋ? ಅಥವಾ ?ಸುನ್ನಿ ಭದ್ರತಾ ಒಕ್ಕೂಟ? ಎಂದು ಕರೆಯುತ್ತಿದ್ದಾರೆ.

ಇತ್ತ ಬಾಂಗ್ಲಾದೇಶವೂ ಈ ಒಕ್ಕೂಟಕ್ಕೆ ಸೇರುವ ಬಗ್ಗೆ ಸಕಾರಾತ್ಮಕ ಒಲವು ತೋರಿದೆ ಎನ್ನಲಾಗಿದೆ. ಬಾಂಗ್ಲಾದೇಶದ ವಿದೇಶಾಂಗ ವ್ಯವಹಾರಗಳ ನೂತನ ರಾಜ್ಯ ಸಚಿವ ಹುಮಾಯೂನ್ ಕಬೀರ್ ಅವರು ಒಪ್ಪಂದದ ಭಾಗವಾಗುವ ಸಾಧ್ಯತೆಗಳ ಕುರಿತು ಮಾತನಾಡಿದ್ದು, ರಾಜತಾಂತ್ರಿಕ ಮಾತುಕತೆಗಳ ಮೂಲಕ ಪಾಕಿಸ್ತಾನದೊಂದಿಗಿನ ದ್ವಿಪಕ್ಷೀಯ ಸಂಬಂಧವನ್ನು ಬಲಪಡಿಸಲು ಬಯಸುವುದಾಗಿ ತಿಳಿಸಿದ್ದಾರೆ.

ಇರಾನ್ ಸೇರ್ಪಡೆಗೊಂಡರೆ ಒಕ್ಕೂಟದ ಭೌಗೋಳಿಕ ವ್ಯಾಪ್ತಿ ಮತ್ತು ಕಾರ್ಯತಂತ್ರದ ಮಹತ್ವ ಮತ್ತಷ್ಟು ಹೆಚ್ಚುವ ಸಾಧ್ಯತೆಯಿದೆ. ಇದೇ ವೇಳೆ, ಪಶ್ಚಿಮ ಏಷ್ಯಾದಲ್ಲಿ ಬದಲಾಗುತ್ತಿರುವ ಭದ್ರತಾ ಸಮೀಕರಣಗಳು ಹಾಗೂ ಭಾರತದ ಮೇಲೆ ಉಂಟಾಗಬಹುದಾದ ರಾಜತಾಂತ್ರಿಕ ಮತ್ತು ಕಾರ್ಯತಂತ್ರದ ಪರಿಣಾಮಗಳ ಬಗ್ಗೆಯೂ ಚರ್ಚೆ ಆರಂಭವಾಗಿದೆ.

# ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯದಿರಲಿ: ಶಾಸಕ ಚವ್ಹಾಣ



**ಔರಾದ್:** ಎಸ್‌ಐಆರ್ ಪ್ರಕ್ರಿಯೆಯ ಮೊದಲ ಹಂತ ಪೂರ್ಣಗೊಂಡಿದ್ದು,ಕರಡು ಮತದಾರರ ಪಟ್ಟಿ ಪ್ರಕಟಗೊಳ್ಳಲಿರುವ ಹಿನ್ನೆಲೆಯಲ್ಲಿ ಅರ್ಹ ನಾಗರಿಕರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ಕಾರ್ಯಕರ್ತರು ಎಚ್ಚರಿಕೆಯಿಂದ ಕಾರ್ಯನಿರ್ವಹಿಸಬೇಕು ಎಂದು ಶಾಸಕರು ಪ್ರಭು ಬಿ.ಚವ್ಹಾಣ ಅವರು ತಿಳಿಸಿದರು.

ಭಾರತೀಯ ಜನತಾ ಪಾರ್ಟಿ ಔರಾದ(ಬಿ) ಮಂಡಲದ ವತಿಯಿಂದ ಭಾನುವಾರ ಪಟ್ಟಣದ ಸಾಯಿ ಕಲ್ಯಾಣ ಮಂಟಪದಲ್ಲಿ ಆಯೋಜಿಸಿದ್ದ ಬಿಎಲ್‌ಎ–2 ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಎಸ್‌ಐಆರ್ ಮೊದಲನೇ ಹಂತ ಪೂರ್ಣಗೊಂಡಿದ್ದು, ಇದೀಗ ಕರಡು ಮತದಾರರ ಪಟ್ಟಿ ಪ್ರಕಟಗೊಳ್ಳಲಿದೆ. ಈ ಹಿನ್ನೆಲೆಯಲ್ಲಿ ತಮ್ಮ ವ್ಯಾಪ್ತಿಯಲ್ಲಿರುವ ಮತದಾರರ ಮಾಹಿತಿಯನ್ನು ಪರಿಶೀಲಿಸಿ, ಅರ್ಹ ಮತದಾರರ ಹೆಸರುಗಳು ಕರಡು ಪಟ್ಟಿಯಲ್ಲಿ ಇರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಬಿಎಲ್‌ಎ–2ಗಳಿಗೆ ಸೂಚಿಸಿದರು. ಉಜಅಂಡಿಚಿಳಿಖಿಳಿಖಜಜಿಜಡಿಜಟಿಳಿಜ

ಮತದಾನ ಕೇವಲ ಹಕ್ಕು ಮಾತ್ರವಲ್ಲ, ದೇಶದ ಭವಿಷ್ಯವನ್ನು ರೂಪಿಸುವ ಜವಾಬ್ದಾರಿಯೂ ಆಗಿದೆ. ಪ್ರತಿಯೊಂದು ಮತವೂ ಜನಪ್ರತಿನಿಧಿಗಳ ಆಯ್ಕೆಯಲ್ಲಿ ಮಹತ್ವದ ಪಾತ್ರ ವಹಿಸುತ್ತದೆ. ಮುಂದಿನ ದಿನಗಳಲ್ಲಿ ಮತದಾರರ ಗುರುತಿನ ಚೀಟಿ ಸರ್ಕಾರದ ಯೋಜನೆಗಳಿಗೆ ಜೋಡಣೆಯಾಗುವ ಸಾಧ್ಯತೆಗಳಿರುವ ಕಾರಣ ಅರ್ಹ ಪ್ರತಿಯೊಬ್ಬ ನಾಗರಿಕರು ಮತದಾರರ ಪಟ್ಟಿಯಲ್ಲಿ ಇರುವಂತೆ ಮತ್ತು ಮತದಾನದ ಹಕ್ಕನ್ನು ರಕ್ಷಿಸುವ ದಿಶೆಯಲ್ಲಿ ಜಾಗೃತಿ ಮೂಡಿಸುವುದು ಕಾರ್ಯಕರ್ತರ ಪ್ರಮುಖ ಕರ್ತವ್ಯವಾಗಿದೆ ಎಂದು ತಿಳಿಸಿದರು.

ಯಾವುದೇ ಅರ್ಹ ಮತದಾರರ ಹೆಸರು ಪಟ್ಟಿಯಿಂದ ಕೈಬಿಟ್ಟಿದ್ದರೆ, ನಿಯಮಾನುಸಾರ ಆಕ್ಷೇಪಣೆ ಅಥವಾ ಅಗತ್ಯ ಅರ್ಜಿ ಸಲ್ಲಿಸುವ ಮೂಲಕ ಹೆಸರು ಸೇರ್ಪಡೆಗೆ ಕ್ರಮ ಕೈಗೊಳ್ಳಲು ಸಹಕರಿಸಬೇಕು. ಮತದಾನದ ಹಕ್ಕು ಪ್ರತಿಯೊಬ್ಬ ನಾಗರಿಕನ ಪ್ರಜಾಪ್ರಭುತ್ವದ ಹಕ್ಕಾಗಿದ್ದು, ಯಾವುದೇ ಅರ್ಹ ಮತದಾರರು ಮತದಾನದ ಹಕ್ಕಿನಿಂದ ವಂಚಿತರಾಗದಂತೆ ನೋಡಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಎಸ್‌ಐಆರ್ ಭಾಗವಾಗಿ ಎನ್ಯೂಮರೇಷನ್ ಅರ್ಜಿಗಳನ್ನು ಮನೆ ಮನೆಗೆ ತಲುಪಿಸಿ ಸೂಕ್ತ ರೀತಿಯಲ್ಲಿ ಭರ್ತಿ ಮಾಡಿ ಸಲ್ಲಿಸಲು ಪಕ್ಷದ ಕಾರ್ಯಕರ್ತರು ಮಾಡಿರುವ ಸೇವೆ ಅನನ್ಯವಾದದ್ದು, ಅದರಂತೆ ಮುಂದಿನ ದಿನಗಳಲ್ಲಿಯೂ ಕಾರ್ಯಕರ್ತರು ಮನೆ ಮನೆಗೆ ತೆರಳಿ ಜನರಲ್ಲಿ ಜಾಗೃತಿ ಮೂಡಿಸಿ, ಮತದಾರರ ಪಟ್ಟಿಯ ಪರಿಶೀಲನೆ ಹಾಗೂ ಅಗತ್ಯ ತಿದ್ದುಪಡಿ ಪ್ರಕ್ರಿಯೆಯಲ್ಲಿ ಜನರಿಗೆ ಸಹಕಾರ ನೀಡಬೇಕು ಎಂದು ಶಾಸಕರು ಕರೆ ನೀಡಿದರು.

ನಮ್ಮಕ್ಷೇತ್ರದ ಅನೇಕರುಕೆಲಸಕ್ಕಾಗಿ ಮುಂಬೈ, ಪುಣೆ, ಉದಗೀರ, ಲಾತೂರ, ಹೈದ್ರಾಬಾದ ಸೇರಿದಂತೆ ಬೇರೆ ಬೇರೆ ಕಡೆ ಹೋಗಿದ್ದಾರೆ. ಎಸ್‌ಐಆರ್ ಬಗ್ಗೆ ಮಾಹಿತಿ ಇಲ್ಲದ ಕೆಲವರು ಮತದಾರರ ಪಟ್ಟಿಯಿಂದ ಹೊರಗುಳಿಯುವ ಸಾಧ್ಯತೆಯಿದೆ. ಅಂಥವರನ್ನು ಗುರುತಿಸಿ ಮತದಾರರ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲು ಸಹಕರಿಸಬೇಕು. ಸಾರ್ವಜನಿಕರು ಕೂಡ ಎಸ್‌ಐಆರನ್ನು ಗಂಭೀರವಾಗಿ ಪರಿಗಣಿಸಿ ಕರಡು ಮತದಾರರ ಪಟ್ಟಿಯಲ್ಲಿ ಹೆಸರು ಇಲ್ಲದಿದ್ದರೆ ಅವಶ್ಯಕತೆಗೆ ತಕ್ಕಂತೆ ಹೊಸ ಅರ್ಜಿ ಸಲ್ಲಿಸಲು ಫಾರ್ಮ್ 7, ಆಕ್ಷೇಪಣೆಗೆ ಫಾರ್ಮ್ 8 ಮತ್ತು ತಿದ್ದುಪಡಿ ಅಥವಾ ಸ್ಥಳಾಂತರಕ್ಕಾಗಿ ಫಾರ್ಮ್ 8 ಭರ್ತಿ ಸಲ್ಲಿಸಬೇಕು ಎಂದು ಸಾರ್ವಜನಿಕರಲ್ಲಿ ಮನವಿ ಮಾಡಿದರು.

ಈ ಸಂಧರ್ಭದಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ ಪಾಟೀಲ, ಮಂಡಲ ಅಧ್ಯಕ್ಷ ರಾಮಶೆಟ್ಟಿ ಪನ್ನಾಳೆ, ಪ್ರಶಿಕ್ಷಣ ಪ್ರಕೋಷ್ಠದ ರಾಜ್ಯ ಸಂಚಾಲಕ ರಾಜಶೇಖರ ನಾಗಮೂರ್ತಿ, ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪೀರಪ್ಪ ಔರಾದೆ, ಉಪಾಧ್ಯಕ್ಷ ಅರಹಂತ ಸಾವಳೆ, ಮುಖಂಡರಾದ ಬಾಬುರಾವ ಕಾರಬಾರಿ, ಚಂದ್ರಶೇಖರ ಪಾಟೀಲ, ವಸಂತ ಬಿರಾದಾರ, ಧೊಂಡಿಬಾ ನರೋಟೆ, ರಂಗರಾವ ಜಾಧವ, ಶಿವಾನಂದ ವಡ್ಡೆ, ನಿಲೇಶ ರಕ್ಷಾ ್ಯಳೆ, ಶಿವರಾಜ ಅಲ್ಮಾಜೆ, ಖಂಡೋಬಾ ಕಂಗಟೆ, ಪ್ರಕಾಶ ಅಲ್ಮಾಜೆ, ಬಾಬುರಾವ ವಾಡಿ, ಪ್ರವೀಣ ಕಾರಬಾರಿ, ಸಾಗರ ಪಾಟೀಲ, ಶಿವಕುಮಾರ ಪಾಂಚಾಳ, ರಾಜಶೇಖರ ಶೆಳ್ಕೆ, ಗಣೇಶ ಕಾರೆಗಾವೆ, ಮಲ್ಲಪ್ಪ ದಾನಾ, ಅಶೋಕ ಅಲ್ಮಾಜೆ, ಯೋಗೇಶ ಪಾಟೀಲ, ಬಂಟಿ ರಾಂಪೂರೆ, ಉದಯ ಸೋಲಾಪೂರೆ,

ಪ್ರಕಾಶ ಜೀರ್ಗೆ, ರಾಜಕುಮಾರ ಸೋರಾಳೆ, ಸಂಜು ಮುರ್ಕೆ, ಸಚಿನ ಬಿರಾದಾರ, ದಯಾನಂದ ಘೂಳೆ, ಶಕುಂತಲಾ ಮುತ್ತಂಗೆ, ಗೀತಾ ರೆಡ್ಡಿ ಸೇರಿದಂತೆ ಮಂಡಲದ ಪದಾಧಿಕಾರಿಗಳು, ಬಿಎಲ್‌ಎ–2, ವಿವಿಧ ಮೋರ್ಚಾ ಪದಾಧಿಕಾರಿಗಳು ಹಾಗೂ ಪಕ್ಷದ ಪ್ರಮುಖರು, ಕಾರ್ಯಕರ್ತರು ಉಪಸ್ಥಿತರಿದ್ದರು.

# ಲೋಕಾಯುಕ್ತ ಕ್ಲೀನ್‌ಚಿಟ್ ಕೊಟ್ಟಿದೆ, ನಾಗೇಂದ್ರ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡುವ ಪ್ರಶ್ನೆ ಇಲ್ಲ: ಸತೀಶ್ ಜಾರಕಿಹೊಳಿ



ಬೆಂಗಳೂರು: ಹಿಂದಿನ ಆರೋಪಗಳಿಗೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರಿಗೆ ಲೋಕಾಯುಕ್ತ ಹಾಗೂ ಎಸ್‌ಐಟಿ ಈಗಾಗಲೇ ಕ್ಲೀನ್‌ಚಿಟ್ ನೀಡಿವೆ. ಹೀಗಾಗಿ ಅವರು ರಾಜೀನಾಮೆ ನೀಡುವ ಅಗತ್ಯವಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ಕೈಬಿಡುವಂತೆ ಬಿಜೆಪಿ ನಡೆಸುತ್ತಿರುವ ಹೋರಾಟ ರಾಜಕೀಯ ಪ್ರೇರಿತವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರ ಜೊತೆ ಮಾತಾಡಿದ ಅವರು, ಧರ್ಮೇಂದ್ರ ಪ್ರಧಾನ್ ಅವರು ನೀಟ್ ಪರೀಕ್ಷೆ ಅಕ್ರಮ ಹಿನ್ನೆಲೆಯಲ್ಲಿ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕಾಗಿತ್ತು, ಅದು ಲಕ್ಷಾಂತರ ವಿದ್ಯಾರ್ಥಿಗಳ ಭವಿಷ್ಯದ ಪ್ರಶ್ನೆಯಾಗಿತ್ತು. ಆದರೆ ನಾಗೇಂದ್ರ ವಿಚಾರದಲ್ಲಿ ಹಾಗಲ್ಲ ಎಂದರು.

ಬಿಜೆಪಿ ಮತ್ತು ಜೆಡಿಎಸ್‌ನ ಶಾಸಕರು ಸಚಿವ ಬಿ. ನಾಗೇಂದ್ರ ಅವರನ್ನು ಸಚಿವ ಸಂಪುಟದಿಂದ ಕೈಬಿಡುವಂತೆ ಆಗ್ರಹಿಸಿ ಇಂದು ವಿಧಾನಸೌಧಕ್ಕೆ ಮುತ್ತಿಗೆ ಹಾಕಲು ಯತ್ನಿಸಿದಾಗ ಪೊಲೀಸರು ವಶಕ್ಕೆ ಪಡೆದ ಪ್ರಸಂಗ ನಡೆದಿದೆ.

89 ಕೋಟಿ ರೂಪಾಯಿ ಮೌಲ್ಯದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಹಗರಣದಲ್ಲಿ ನಾಗೇಂದ್ರ ಭಾಗಿಯಾಗಿದ್ದಾರೆ ಎಂಬ ಆರೋಪವಿದ್ದು, ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸಬೇಕು ಎಂದು ಪ್ರತಿಪಕ್ಷಗಳು ಆಗ್ರಹಿಸಿವೆ. 2024ರ ಮೇ–ಜೂನ್‌ನಲ್ಲಿ ವಾಲ್ಮೀಕಿ ನಿಗಮದ ಖಾತೆಗಳ ಅಧೀಕ್ಷಕ ಪಿ. ಚಂದ್ರಶೇಖರನ್ ಆತ್ಮಹತ್ಯೆ ಮಾಡಿಕೊಂಡು, ನಿಗಮದಲ್ಲಿ ಹಣಕಾಸಿನ ಅಕ್ರಮಗಳು ನಡೆದಿವೆ ಎಂದು ಆರೋಪಿಸಿ ಡೆತ್‌ನೋಟ್ ಬರೆದಿದ್ದ ಹಿನ್ನೆಲೆಯಲ್ಲಿ ವಾಲ್ಮೀಕಿ ನಿಗಮದ ವಿವಾದ ಭುಗಿಲೆದ್ದಿತ್ತು.

ಹಿಂದಿನ ಆರೋಪಗಳಿಗೆ ಸಂಬಂಧಿಸಿದಂತೆ ಸಚಿವ ಬಿ. ನಾಗೇಂದ್ರ ಅವರಿಗೆ ಲೋಕಾಯುಕ್ತ ಹಾಗೂ ಎಸ್‌ಐಟಿ ಈಗಾಗಲೇ ಕ್ಲೀನ್‌ಚಿಟ್ ನೀಡಿವೆ. ಹೀಗಾಗಿ ಅವರು ರಾಜೀನಾಮೆ ನೀಡುವ ಅಗತ್ಯವಿಲ್ಲ ಎಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಬಳಿಕ ನಡೆದ ತನಿಖೆಯಲ್ಲಿ ನಿಗಮದ ಯೂನಿಯನ್ ಬ್ಯಾಂಕ್ ಖಾತೆಯಿಂದ 89 ಕೋಟಿ ರೂಪಾಯಿಗಳನ್ನು ಅಕ್ರಮವಾಗಿ ವಿವಿಧ ಖಾತೆಗಳಿಗೆ ವರ್ಗಾವಣೆ ಮಾಡಿರುವುದು ಪತ್ತೆಯಾಗಿತ್ತು. ನಂತರ ಅಕ್ರಮವಾಗಿ ವರ್ಗಾಯಿಸಲಾದ ಒಟ್ಟು ಹಣದ ಮೊತ್ತ ಸುಮಾರು 187 ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿತ್ತು. ಆ ಸಂದರ್ಭದಲ್ಲಿ ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರಾಗಿದ್ದ ನಾಗೇಂದ್ರ ಅವರು 2024ರ ಜೂನ್ 6ರಂದು ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟಕ್ಕೆ ರಾಜೀನಾಮೆ ನೀಡಿದ್ದರು. 2026ರ ಆಗಸ್ಟ್ 3ರಂದು ಅವರನ್ನು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಸಚಿವ ಸಂಪುಟಕ್ಕೆ ಮರು ಸೇರ್ಪಡೆ ಮಾಡಲಾಗಿದ್ದು, 19 ಕಾಂಗ್ರೆಸ್ ಶಾಸಕರನ್ನು ಸಚಿವರನ್ನಾಗಿ ಸೇರ್ಪಡೆಗೊಳಿಸಿದ ಸಂಪುಟ ವಿಸ್ತರಣೆಯಲ್ಲಿ ಅವರಿಗೆ ಯೋಜನೆ ಮತ್ತು ಸಾಂಖ್ಯಿಕ ಖಾತೆ ನೀಡಲಾಗಿದೆ. ಅಂದಿನಿಂದ ಬಿಜೆಪಿ ಮತ್ತು ಜೆಡಿಎಸ್ ವಿಧಾನಸಭೆ ಹಾಗೂ ವಿಧಾನ ಪರಿಷತ್ತಿನ ಒಳಗೆ ಮತ್ತು ಹೊರಗೆ ಪ್ರತಿಭಟನೆಗಳನ್ನು ತೀವ್ರಗೊಳಿಸಿದ್ದು, ನಾಗೇಂದ್ರ ಅವರನ್ನು ಸಚಿವ ಸ್ಥಾನದಿಂದ ಕೈಬಿಡುವಂತೆ ಆಗ್ರಹಿಸುತ್ತಿವೆ.

# ವಾರ್ತಾ ಇಲಾಖೆ ತಾರತಮ್ಯ ಸರಿಪಡಿಸದಿದ್ದರೆ ಹಕ್ಕುಚ್ಯುತಿ ಮಂಡನೆ: ಆರ್.ಅಶೋಕ್ ಎಚ್ಚರಿಕೆ



**ಬೆಂಗಳೂರು:** ಪ್ರಸಕ್ತ ಅಧಿವೇಶನದ ಕಾರ್ಯಕಲಾಪಗಳಲ್ಲಿ ವಿರೋಧಪಕ್ಷದ ನಾಯಕರು ಹಾಗೂ ಶಾಸಕರ ಹೇಳಿಕೆಗಳು, ಛಾಯಾಚಿತ್ರಗಳು ಮತ್ತು ವಿಡಿಯೋಗಳನ್ನು ತಾರತಮ್ಯವಿಲ್ಲದೆ ಬಿಡುಗಡೆಗೊಳಿಸಲು ಸೂಚಿಸಬೇಕು ಎಂದು ವಿಧಾನಸಭೆಯ ವಿರೋಧಪಕ್ಷದ ನಾಯಕ ಆರ್. ಅಶೋಕ್ ಅವರು ವಿಧಾನಸಭಾಧ್ಯಕ್ಷರಿಗೆ ಪತ್ರ ಬರೆದಿದ್ದಾರೆ. ಈ ಸಂಬಂಧ ವಾರ್ತಾ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿ ತಾರತಮ್ಯವನ್ನು ಸರಿಪಡಿಸಬೇಕು. ಇಲ್ಲದಿದ್ದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಹಕ್ಕುಚ್ಯುತಿ ಮಂಡಿಸುವುದಾಗಿ ಅಶೋಕ್ ಅವರು ಪತ್ರದಲ್ಲಿ ಎಚ್ಚರಿಸಿದ್ದಾರೆ. ಆ.13ರಿಂದ ಮಳೆಗಾಲದ ಅಧಿವೇಶನ ನಡೆಯುತ್ತಿದ್ದು, ವಿಧಾನಸಭೆಯ ಕಾರ್ಯಕಲಾಪಗಳಲ್ಲಿ ವಿರೋಧಪಕ್ಷದ ನಾಯಕರು ಹಾಗೂ ಶಾಸಕರ ಹೇಳಿಕೆಗಳು, ಛಾಯಾಚಿತ್ರಗಳು ಮತ್ತು ವಿಡಿಯೋಗಳನ್ನು ಬಿಡುಗಡೆಗೊಳಿಸುತ್ತಿಲ್ಲ. ಇದರಿಂದ ವಿರೋಧಪಕ್ಷದ ಸದಸ್ಯರ ಛಾಯಾಚಿತ್ರಗಳು ಹಾಗೂ ವಿಡಿಯೋಗಳು ಮುದ್ರಣ ಮತ್ತು ದೃಶ್ಯ ಮಾಧ್ಯಮಗಳಲ್ಲಿ ಪ್ರಸಾರವಾಗುತ್ತಿಲ್ಲ ಎಂದು ಅವರು ಆರೋಪಿಸಿದ್ದಾರೆ.

ಮುಖ್ಯಮಂತ್ರಿ, ಸಚಿವರು ಹಾಗೂ ಆಡಳಿತ ಪಕ್ಷದ ಶಾಸಕರ ಎಲ್ಲ ಹೇಳಿಕೆಗಳು, ಛಾಯಾಚಿತ್ರಗಳು ಮತ್ತು ವಿಡಿಯೋಗಳನ್ನು ಬಿಡುಗಡೆ ಮಾಡಲಾಗುತ್ತಿದೆ. ವಿಧಾನಸಭೆಯ ಕಾರ್ಯಕಲಾಪಗಳಲ್ಲಿ ಈ ರೀತಿಯ ತಾರತಮ್ಯ ಹಿಂದೆಂದೂ ನಡೆದಿಲ್ಲ ಎಂದು ಅಶೋಕ್ ಬೇಸರ ವ್ಯಕ್ತಪಡಿಸಿದ್ದಾರೆ. ಈ ವಿಚಾರವನ್ನು ಇಂದು ಸದನದಲ್ಲಿ ಪ್ರತಿಭಟನೆಯ ಸಂದರ್ಭದಲ್ಲಿ ಶಾಸಕರೊಂದಿಗೆ ಪ್ರಸ್ತಾಪಿಸಿದ ಅಶೋಕ್, ಬಳಿಕ ತಮ್ಮ ಪತ್ರವನ್ನು ಸಭಾಧ್ಯಕ್ಷರಿಗೆ ತಲುಪಿಸಿದರು.

# ನಕಲಿ ಔಷಧಿ ರೂವಾರಿಗಳ ಬಂಧನ



**ಬೆಂಗಳೂರು:** ರಾಜ್ಯವನ್ನು ಬೆಚ್ಚಿಬೀಳಿಸಿ ದೇಶದ ಹಲವೆಡೆ ಹರಡಿದ್ದ ನಕಲಿ ಔಷಧ ಮಾರಾಟ ಜಾಲದ ಕಿಂಗ್ ಪಿನ್ ವಿದೇಶದಲ್ಲಿ ಅಡಗಿದ್ದ ನಾಗರಬಾವಿಯ ಪ್ರಶಾಂತ್ ಹಾಗೂ ಆತನ ಇಬ್ಬರು ಸಹಚರರು ಕಸ್ಟಮ್ಸ್ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ.

ನಕಲಿ ಔಷಧ ಮಾರಾಟ ಜಾಲದಲ್ಲಿ ಅಂತಾರಾಷ್ಟ್ರೀಯ ನಂಟು ಇರುವುದು ಬಯಲಾಗಿದ್ದು,ಪಶ್ಚಿಮ ಏಷ್ಯಾದ ದೇಶವೊಂದರ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳ ಬಲೆಗೆ ಬಿದ್ದಿರು ಜಾಲದ ರೂವಾರಿ ನಾಗರಬಾವಿಯ ಪ್ರಶಾಂತ್ ಹಾಗೂ ಆತನ ಇಬ್ಬರು ಸಹಚರರನ್ನು ತೀವ್ರ ವಿಚಾರಣೆ ನಡೆಸಲಾಗಿದೆ.

ಪಶ್ಚಿಮ ಏಷ್ಯಾದ ದೇಶದಲ್ಲಿ ಕ್ಯಾನ್ಸರ್ ಸೇರಿದಂತೆ ಗಂಭೀರ ಕಾಯಿಲೆಗಳ ಔಷಧಗಳು ಅತ್ಯಂತ ಕಡಿಮೆ ಬೆಲೆಗೆ ದೊರೆಯುತ್ತವೆ. ಈ ಹಿನ್ನೆಲೆಯಲ್ಲಿ ಕೋಟ್ಯಂತರ ರೂ ಮೌಲ್ಯದ ಔಷಧಗಳನ್ನು ಅಕ್ರಮವಾಗಿ ಭಾರತಕ್ಕೆ ಸಾಗಿಸಲು ಪ್ರಶಾಂತ್ ತನ್ನ ಇಬ್ಬರು ಸಹಚರರ ಮೂಲಕ ಸಂಚು ಹಾಕಿರುವುದು ವಿಚಾರಣೆಯಲ್ಲಿ ಬೆಳಕಿಗೆ ಬಂದಿದೆ. ವಿಮಾನ ನಿಲ್ದಾಣದಲ್ಲಿ ಭಾರೀ ಪ್ರಮಾಣದ ಔಷಧ ಸಾಗಣೆಯನ್ನು ಕಂಡು ಅನುಮಾನಗೊಂಡ ಅಲ್ಲಿನ ಕಸ್ಟಮ್ಸ್ ಅಧಿಕಾರಿಗಳು ಪರಿಶೀಲನೆ ನಡೆಸಿದಾಗ ಅಕ್ರಮ ಬಯಲಾಗಿದೆ. ವಿಚಾರಣೆ ವೇಳೆ ಸಹಚರರು ಕಿಂಗ್‌ಪಿನ್ ಪ್ರಶಾಂತ್ ಹೆಸರನ್ನು ಬಾಯಿಬಿಟ್ಟಿದ್ದು, ಅಧಿಕಾರಿಗಳು ತಕ್ಷಣವೇ ಆತನನ್ನೂ ವಶಕ್ಕೆ ಪಡೆದಿದ್ದಾರೆ. ಈ ಮಹತ್ವದ ಸಂಗತಿಯನ್ನು ಪ್ರಶಾಂತ್ ಪತ್ನಿ ಪೊಲೀಸರ ವಿಚಾರಣೆ ವೇಳೆ ಬಹಿರಂಗಪಡಿಸಿದ್ದಾರೆ.

ಕೆಲ ದಿನಗಳ ಹಿಂದೆ ತಾವರೆಕೆರೆ ಸಿ.ಕೆ. ತಾಂಡ್ಯಾದಲ್ಲಿದ್ದ ಫಾರ್ಮ್ ಹೌಸ್ ಮೇಲೆ ನಿಖರವಾದ ಮಾಹಿತಿಯನ್ನು ಆಧರಿಸಿ ಪೊಲೀಸರು ದಾಳಿ ನಡೆಸಿದಾಗ ಅಕ್ರಮ ಔಷಧ ಮರುಪ್ಯಾಕಿಂಗ್ ಘಟಕ ಬಯಲಿಗೆ ಬಂದಿತ್ತು.

ಚೆನ್ನೈ, ಹರ್ಯಾಣ, ಚಂಡೀಗಢ ಹಾಗೂ ವಿದೇಶಗಳಿಂದ ಕಡಿಮೆ ಬೆಲೆಗೆ ತರುತ್ತಿದ್ದ ಔಷಧಗಳಿಗೆ ಇಲ್ಲಿ ಪ್ರತಿಷ್ಠಿತ ಕಂಪನಿಗಳ ನಕಲಿ ಲೇಬಲ್ ಹಾಗೂ ದುಬಾರಿ ಬೆಲೆಯ ದರಪಟ್ಟಿ ಅಂಟಿಸಿ, ಮಾರುಕಟ್ಟೆಯಲ್ಲಿ ನಾಲ್ಕು ಪಟ್ಟು ಹೆಚ್ಚಿನ ಬೆಲೆಗೆ ಮಾರಾಟ ಮಾಡಲಾಗುತ್ತಿತ್ತು.

ಪೊಲೀಸರು ಈ ಅಡ್ಡೆಯ ಮೇಲೆ ದಾಳಿ ನಡೆಸುವ ಮುನ್ನವೇ ಆಗಸ್ಟ್ 8 ರಂದೇ ಪ್ರಶಾಂತ್ ವಿದೇಶಕ್ಕೆ ಹಾರಿ ತಲೆಮರೆಸಿಕೊಂಡಿದ್ದನು.

ನಕಲಿ ಔಷಧ ಅಡ್ಡೆ ಮೇಲೆ ದಾಳಿ ನಡೆದ ವಿಷಯ ತಿಳಿಯುತ್ತಿದ್ದಂತೆ, ಪ್ರಶಾಂತ್ ತನ್ನ ವ್ಯವಹಾರಿಕ ಪಾಲುದಾರ ವೆಂಕಟೇಶ್‌ನನ್ನು ವಿದೇಶಕ್ಕೆ ಕರೆಸಿಕೊಳ್ಳಲು ಏರ್‌ಟಿಕೆಟ್ ಬುಕ್ ಮಾಡಿದ್ದನು,ಆದರೆ ಅದರ ಖಚಿತ ಮಾಹಿತಿ ಕಲೆಹಾಕಿದ ಪೊಲೀಸರು, ವೆಂಕಟೇಶ್ ಏರ್‌ಪೋರ್ಟ್ ತಲುಪುವ ಮುನ್ನವೇ ಹೆಬ್ಬಾಳ ಸಮೀಪ ಆತನನ್ನು ಬಂಧಿಸಿ ವಿಚಾರಣೆ ಕೈಗೊಂಡಿದ್ದರು.

ಪ್ರಶಾಂತ್ ವಶದಲ್ಲಿರುವ ಬಗ್ಗೆ ತನಿಖಾಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದು, ಆತನನ್ನು ಭಾರತಕ್ಕೆ ಕರೆತರಲು ಜಂಟಿ ಪೊಲೀಸ್ ಆಯುಕ್ತ ವಂಶಿಕೃಷ್ಣ ನೇತೃತ್ವದ ವಿಶೇಷ ತನಿಖಾ ತಂಡ (ಎಸ್‌ಐಟಿ) ಇಂಟರ್‌ಪೋಲ್ ಮೂಲಕ ಪ್ರಕ್ರಿಯೆಗಳನ್ನು ಚುರುಕುಗೊಳಿಸಿದೆ.ನಾಲ್ವರು ಬಂಧನ:ತಾವರೆಕೆರೆ ಸಿ.ಕೆ.ತಾಂಡ್ಯಾದಲ್ಲಿ ಕಳೆದ ಆ.19 ರಂದು ರಾತ್ರಿ ದಾಳಿ ನಡೆಸಿ 5 ಕೋಟಿ ರೂ. ಮೊತ್ತದ ನಕಲಿ ಔಷಧಗಳನ್ನು ವಶಪಡಿಸಿಕೊಂಡು ಮರು ದಿನ ನಾಲ್ವರನ್ನು ಬಂಧಿಸಿದ್ದರು.ಆರೋಪಿಗಳು ಒಂದು ವರ್ಷದಿಂದ ನಕಲಿ ಔಷಧದ ದಂಧೆಯನ್ನು ನಡೆಸುತ್ತಿದ್ದರು. ಅಧಿಕೃತವಾಗಿ ಯಾವುದೇ ಪರವಾನಗಿ ಹೊಂದಿರದ ಔಷಧಗಳನ್ನು ಸಂಗ್ರಹಿಸಿದ್ದ ಇವರು, ಅವುಗಳ ಮೇಲಿನ ಲೇಬಲ್‌ಗಳನ್ನು ಬದಲಾಯಿಸಿ ಹೆಚ್ಚಿನ ಬೆಲೆಯ ಲೇಬಲ್‌ಗಳನ್ನು ಅಂಟಿಸುತ್ತಿದ್ದರು.ಸ್ಥಳದಲ್ಲೇ ತಯಾರಿ:ಕೆಲವೊಂದು ಹೆಸರಿನ ಔಷಧಗಳನ್ನು ಸ್ಥಳದಲ್ಲೇ ತಯಾರಿಸುತ್ತಿದ್ದರು. ಈ ಕುರಿತು ಸಿಕ್ಕ ಖಚಿತ ಮಾಹಿತಿ ಮೇರೆಗೆ ಆಹಾರ ಸುರಕ್ಷತೆ ಮತ್ತು ಔಷಧ ನಿಯಂತ್ರಣ ಮಂಡಳಿ ಅಧಿಕಾರಿಗಳೊಂದಿಗೆ ದಾಳಿ ಮಾಡಲಾಗಿತ್ತು. ಆರೋಪಿಗಳು ನಕಲಿ ಔಷಧಗಳನ್ನು ಬೆಂಗಳೂರು ಸೇರಿದಂತೆ ವಿವಿಧೆಡೆ ಮಾರಾಟ ಮಾಡಿ ಲಾಭ ಮಾಡಿಕೊಳ್ಳುತ್ತಿದ್ದರು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಆರೋಪಿಗಳ ವಿರುದ್ಧ ಬಿಎನ್‌ಎಸ್ ಕಲಂ 276 (ಔಷಧಗಳ ಕಲಬೆರಕೆ), 51 (ಕೃತ್ಯಕ್ಕೆ ಕುಮ್ಮಕ್ಕು) ಹಾಗೂ ಹಕ್ಕುಸ್ವಾಮ್ಯ ಕಾಯ್ದೆ ಉಲ್ಲಂಘನೆ ಆರೋಪದಡಿ ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

# ನೈಸ್ ರಸ್ತೆ ಟೋಲ್ ಸಂಗ್ರಹ ನಿಲ್ಲಿಸಲು ಎಚ್‌ಡಿಕೆ ಆಗ್ರಹ



**ರಾಮನಗರ:** ಅಭಿವೃದ್ಧಿ ಹೆಸರಲ್ಲಿ ರೈತರ ಭೂಮಿ ವಶಪಡಿಸಿಕೊಂಡು ಕಳೆದ 20 ವರ್ಷದಿಂದ ಅನಧಿಕೃತವಾಗಿ ನೈಸ್ ರಸ್ತೆಯಲ್ಲಿ ಟೋಲ್ ಸಂಗ್ರಹ ಮಾಡಲಾಗುತ್ತಿದೆ. ಕರ್ನಾಟಕದ ಇತಿಹಾಸದಲ್ಲೇ ಇಂತಹ ಕೆಟ್ಟ ಹಗರಣ ನೋಡಲು ಸಾಧ್ಯವಿಲ್ಲ ಕೇಂದ್ರದ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಆರೋಪಿಸಿದ್ದಾರೆ.

ತಾಲ್ಲೂಕಿನ ಅಕ್ಕೂರು ಗ್ರಾಮದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನೈಸ್ ರಸ್ತೆಗಾಗಿ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ರೈತರಿಗೆ ಪರಿಹಾರದ ಹಣ ಕೊಟ್ಟಿಲ್ಲ. ಈಗ ಕುಮಾರಸ್ವಾಮಿ ಕೇಂದ್ರದಲ್ಲಿ ಟೋಲ್ ನಿಲ್ಲಿಸಲಿ ಅಂತಾರೆ. ಅವರಿಗೆ ಓದೋಕೆ ಬರುತ್ತಾ? ವಿಷಯ ಗೊತ್ತಿದೆಯೇ? ಆ ರಸ್ತೆ ರಾಷ್ಟ್ರೀಯ ಹೆದ್ದಾರಿಗೆ ಸೇರಿದ್ದಲ್ಲ, ಅದು ಕರ್ನಾಟಕ ರಾಜ್ಯ ಸರ್ಕಾರಕ್ಕೆ ಸೇರಿದ್ದು. ಅಲ್ಲಿ ಟೋಲ್ ಸಂಗ್ರಹ ಮಾಡುತ್ತಿರುವುದೇ ದೊಡ್ಡ ಅಕ್ರಮ. ಸರ್ಕಾರ ತಕ್ಷಣ ಕ್ರಮವಹಿಸಿ ಟೋಲ್ ಸಂಗ್ರಹ ನಿಲ್ಲಿಸಬೇಕು ಎಂದು ಆಗ್ರಹಿಸಿದರು.

ಇದು ಕೇವಲ ಜೆಡಿಎಸ್ ಕಾರ್ಯಕರ್ತರನ್ನ ಎತ್ತಿಕಟ್ಟುವ ವಿಚಾರವಲ್ಲ, ಇಡೀ ರಾಜ್ಯದ ಜನರೇ ಎದ್ದು ನಿಲ್ಲಬೇಕಾಗಿದೆ. ಅಂತಹ ದೊಡ್ಡ ಹಗರಣವಾಗಿದೆ. ರೈತರ ಭೂಮಿ ಲಪಟಾಯಿಸುವ ಕೆಲಸದ ವಿರುದ್ಧ ಧ್ವನಿ ಎತ್ತಲು ಜನ ನಮಗೆ ಶಕ್ತಿ ಕೊಟ್ಟಿದ್ದಾರೆ ಎಂದು ಅವರು ಹೇಳಿದರು. ಮಾಜಿ ಸಂಸದ ಡಿ.ಕೆ.ಸುರೇಶ್, ಮಾಗಡಿ ಶಾಸಕ ಮತ್ತು ಸಚಿವ ಹೆಚ್.ಸಿ.ಬಾಲಕೃಷ್ಣ ಮಾಡಿರುವ ಟೀಕೆಗಳಿಗೆ ತೀವ್ರ ತಿರುಗೇಟು ನೀಡಿದ ಅವರು, ನಿನ್ನೆ ಇಬ್ಬರು ಮಹಾನ್ ನಾಯಕರು, ಅಭಿವೃದ್ಧಿಯ ಹರಿಕಾರರು ಹೇಳಿಕೆ ಕೊಟ್ಟಿದ್ದಾರೆ. ನಾವು ಮಾಡೋದೆಲ್ಲ ಅನಾಚಾರ, ಮನೆ ಮುಂದೆ ಬೃಂದಾವನ ಅಂತಾರೆ. ಹೌದು ನಾವು ಕೈಮುಗಿಯೋದು ಸಂಸ್ಕೃತಿಯ ಬೃಂದಾವನಕ್ಕೆ, ಆದರೆ ಅವರದ್ದು ಸೂಟ್‌ಕೇಸ್ ಬೃಂದಾವನ ಎಂದು ಲೇವಡಿ ಮಾಡಿದರು. ಬಿಡದಿ ಟೌನ್‌ಶಿಪ್‌ಗಾಗಿ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸಿದ್ದೀರಿ. ಈ ಹಿಂದೆ ಅವರೇ ಬಿಡದಿಯ ಈಗಲ್ಟನ್ ವಿಚಾರದಲ್ಲಿ ಎಕರೆಗೆ 12 ಕೋಟಿ ರೂ. ಪರಿಹಾರ ಕೊಡಬೇಕು ಎಂದು ತೀರ್ಪು ನೀಡಿದ್ದರು. 10 ವರ್ಷದ ಹಿಂದೆಯೇ 12 ಕೋಟಿ ರೂ. ಎಂದು ತೀರ್ಪು ಕೊಟ್ಟಿದ್ದಾರೆ. ಈಗ ಬಿಡದಿಯ ರೈತರ ಜಮೀನಿಗೆ ಎಷ್ಟು ಹಣ ಕೊಡಬೇಕು ಎಂದು ನಾನು ನಿವೃತ್ತ ನ್ಯಾಯಾಧೀಶರನ್ನು ಪ್ರಶ್ನಿಸುತ್ತೇನೆ. ಈ ಬಗ್ಗೆ ಸ್ಪಷ್ಟಪಡಿಸಿ ವರದಿ ಕೊಡಿ ಎಂದು ಸರ್ಕಾರವನ್ನು ಒತ್ತಾಯಿಸಿದರು.

4,000 ಕುಟುಂಬಗಳಿಗೆ ನಿವೇಶನ ಕೊಡುತ್ತೇವೆ ಎಂದು ಹೇಳಿ ಕೊಡಲಿಲ್ಲ. ಭೂಮಿ ಕೊಟ್ಟ ರೈತರಿಗೆ ಇನ್ನೂ ದುಡ್ಡು ಕೊಟ್ಟಿಲ್ಲ. ಇದನ್ನು ನೋಡಿ ನಾನು ಧ್ವನಿ ಎತ್ತಿದ್ದೇನೆ ಹೊರತು ಅಭಿವೃದ್ಧಿಗೆ ಅಡ್ಡಿ ಮಾಡಲು ಅಲ್ಲ. ರೈತರು ಇನ್ನೂ ಎಷ್ಟು ವರ್ಷ ಕಾಯಬೇಕು? ನೈಸ್ ರಸ್ತೆ ಮಾಡಲು ಎಷ್ಟು ವರ್ಷ ಬೇಕು? ಈಗಾಗಲೇ ಬೆಂಗಳೂರು–ಮೈಸೂರು ಎಕ್?ಸ್ಪ್ರೆಸ್ ಹೈವೇ ಆಗಿದೆ ಎಂದು ಅವರು ಹೇಳಿದರು.

# ಸುರಂಗ ರಸ್ತೆ ನಿರ್ಮಾಣ: ಡಿಕೆಶಿ–ಅದಾನಿ ಮಹತ್ವದ ಚರ್ಚೆ



**ಬೆಂಗಳೂರು:** ಅದಾನಿ ಎಂಟರ್‌ಪ್ರೈಸಸ್ ಛೇರ್ಮನ್ ಗೌತಮ್ ಅದಾನಿ ಬೆಂಗಳೂರಿನಲ್ಲಿಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಮಹತ್ವದ ಚರ್ಚೆ ನಡೆಸಿದ್ದಾರೆ

ಕನಕಪುರದಲ್ಲಿರುವ ಶ್ರೀ ರವಿಶಂಕರ್ ಗುರೂಜಿ ಅವರ ಆಶ್ರಮಕ್ಕೆ ಆಗಮಿಸಿದ್ದ ಅದಾನಿ, ವಾಪಸ್ ತೆರಳುವಾಗ ಸದಾಶಿವನಗರದಲ್ಲಿರುವ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಿವಾಸಕ್ಕೆ ಭೇಟಿ ನೀಡಿದರು. ಈ ವೇಳೆ ಸುಮಾರು 20 ನಿಮಿಷಗಳ ಕಾಲ ಸಿಎಂ ಡಿಕೆ ಶಿವಕುಮಾರ್ ಜೊತೆ ಅದಾನಿ ಮಾತುಕತೆ ನಡೆಸಿದ್ದಾರೆ. ಆದರ ಏನು ಮಾತುಕತೆ ನಡೆಯಿತು ಎಂಬ ಮಾಹಿತಿ ಹೊರಬೀಳದಿದ್ದರೂ ರಾಜ್ಯದಲ್ಲಿ ಉದ್ದಿಮೆ ಅವಕಾಶಗಳ ಜತೆಗೆ, ಬಹುನಿರೀಕ್ಷಿತ ಬೆಂಗಳೂರು ಸುರಂಗ ರಸ್ತೆ ಯೋಜನೆ ಗುತ್ತಿಗೆ ಹಂಚಿಕೆಗೆ ಸಂಬಂಧಿಸಿದಂತೆ ಇಬ್ಬರ ನಡುವೆ ಮಾತುಕತೆ ನಡೆದಿದೆ ಎಂದು ತಿಳಿದು ಬಂದಿದೆ.

ಸಿಲಿಕಾನ್ ಸಿಟಿ ಬೆಂಗಳೂರಿನ ಟ್ರಾಫಿಕ್ ಸಮಸ್ಯೆಗೆ ಶಾಶ್ವತ ಮುಕ್ತಿ ನೀಡಲು ರಾಜ್ಯ ಸರ್ಕಾರ ರೂಪಿಸಿರುವ ಮಹತ್ವಾಕಾಂಕ್ಷೆಯ ಬೆಂಗಳೂರು ಸುರಂಗ ರಸ್ತೆ ಯೋಜನೆ ಈಗ ಹೊಸ ತಿರುವು ಪಡೆದುಕೊಂಡಿದೆ.

ಈ ಬೃಹತ್ ಯೋಜನೆಗೆ ಖ್ಯಾತ ಉದ್ಯಮಿ ಗೌತಮ್ ಅದಾನಿ ನೇತೃತ್ವದ ಅದಾನಿ ಎಂಟರ್‌ಪ್ರೈಸಸ್ ಅತ್ಯಂತ ಕಡಿಮೆ ಮೊತ್ತದ ಬಿಡ್ ಸಲ್ಲಿಸಿ ಮುಂಚೂಣಿಯಲ್ಲಿದೆ.ಆದರೆ, ರಾಜ್ಯ ಸರ್ಕಾರದ ಅಂದಾಜು ವೆಚ್ಚಕ್ಕಿಂತ ಬಿಡ್ ಮೊತ್ತ ಹೆಚ್ಚಿರುವ ಕಾರಣ ಟೆಂಡರ್ ಅಂತಿಮಗೊಳಿಸುವುದು ತಡವಾಗುತ್ತಿದೆ. ಹೀಗಾಗಿ ಸ್ವತಃ ಗೌತಮ್ ಅದಾನಿ ಅವರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿರುವುದು ತೀವ್ರ ರಾಜಕೀಯ ಹಾಗೂ ವಾಣಿಜ್ಯ ಕುತೂಹಲಕ್ಕೆ ಕಾರಣವಾಗಿದೆ.

# ರಾಮನಗರದಲ್ಲಿ ಡಿಕೆ ಬ್ರದರ್ಸ್ ವಿರುದ್ಧ ಹೆಚ್.ಡಿ. ಕುಮಾರಸ್ವಾಮಿ ವಾಗ್ದಾಳಿ



**ರಾಮನಗರ:** ಮಾಜಿ ಮುಖ್ಯಮಂತ್ರಿ ಎಚ್.ಡಿ.ಕುಮಾರಸ್ವಾಮಿ ಬಗ್ಗೆ ಮಾಜಿ ಸಂಸದ ಡಿ.ಕೆ.ಸುರೇಶ್ ಹಾಗೂ ಮಾಗಡಿ ಶಾಸಕ ಹೆಚ್.ಸಿ.ಬಾಲಕೃಷ್ಣ ಮಾಡಿರುವ ಟೀಕೆಗಳಿಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ತಾಲೂಕಿನ ಅಕ್ಕೂರು ಗ್ರಾಮದಲ್ಲಿ ತೀವ್ರ ತಿರುಗೇಟು ನೀಡಿದ್ದಾರೆ.ನಿನ್ನೆ ಇಬ್ಬರು ಮಹಾನ್ ನಾಯಕರು, ಅಭಿವೃದ್ಧಿಯ ಹರಿಕಾರರು ಹೇಳಿಕೆ ಕೊಟ್ಟಿದ್ದಾರೆ. ನಾವು ಮಾಡೋದೆಲ್ಲ ಅನಾಚಾರ, ಮನೆ ಮುಂದೆ ಬೃಂದಾವನ ಅಂತಾರೆ. ಹೌದು ನಾವು ಕೈಮುಗಿಯೋದು ಸಂಸ್ಕೃತಿಯ ಬೃಂದಾವನಕ್ಕೆ, ಆದರೆ ಅವರದ್ದು ಸೂಟ್‌ಕೇಸ್ ಬೃಂದಾವನ ಎಂದು ಲೇವಡಿ ಮಾಡಿದರು.

ನೈಸ್ ರಸ್ತೆ ಬೃಹತ್ ಹಗರಣ:ನೈಸ್ ರಸ್ತೆಗಾಗಿ 20 ವರ್ಷದಿಂದ ರೈತರ ಭೂಮಿಯನ್ನು ಸ್ವಾಧೀನಪಡಿಸಿಕೊಂಡು ಪರಿಹಾರದ ಹಣ ಕೊಟ್ಟಿಲ್ಲ. ಟೇಪ್ ಹಿಡಿದುಕೊಂಡು ಭೂಮಿ ದೋಖಾ ಮಾಡುವವರು ಅವರು. ಅಭಿವೃದ್ಧಿ ಹೆಸರಲ್ಲಿ ರೈತರ ಭೂಮಿ ವಶಪಡಿಸಿಕೊಂಡು ಕಳೆದ 20 ವರ್ಷದಿಂದ ಅನಧಿಕೃತವಾಗಿ ಟೋಲ್ ಸಂಗ್ರಹ ಮಾಡಲಾಗುತ್ತಿದೆ. ಕರ್ನಾಟಕದ ಇತಿಹಾಸದಲ್ಲೇ ಇಂತಹ ಕೆಟ್ಟ ಹಗರಣ ನೋಡಲು ಸಾಧ್ಯವಿಲ್ಲ. ಈಗ ಕುಮಾರಸ್ವಾಮಿ ಕೇಂದ್ರದಲ್ಲಿ ಟೋಲ್ ನಿಲ್ಲಿಸಲಿ ಅಂತಾರೆ.

ಅವರಿಗೆ ಓದೋಕೆ ಬರುತ್ತಾ? ಸಬ್ಜೆಕ್ಟ್ ಗೊತ್ತಿದೆಯಾ? ಆ ರಸ್ತೆ ನ್ಯಾಷನಲ್ ಹೈವೇಗೆ ಸೇರಿದ್ದಲ್ಲ, ಅದು ಕರ್ನಾಟಕ ರಾಜ್ಯ ಸರ್ಕಾರಕ್ಕೆ ಸೇರಿದ್ದು. ಅಲ್ಲಿ ಟೋಲ್ ಕಲೆಕ್ಟ್ ಮಾಡುತ್ತಿರುವುದೇ ದೊಡ್ಡ ಅಕ್ರಮ. ಸರ್ಕಾರ ತಕ್ಷಣ ಕ್ರಮವಹಿಸಿ ಟೋಲ್ ಸಂಗ್ರಹ ನಿಲ್ಲಿಸಬೇಕು ಎಂದು ಆಗ್ರಹಿಸಿದರು. ಬಿಡದಿ ಟೌನ್‌ಶಿಪ್ ಸಮಿತಿ ರಚನೆಗೆ ಆಕ್ಷೇಪ:ಬಿಡದಿ ಟೌನ್‌ಶಿಪ್‌ಗಾಗಿ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಸಮಿತಿ ರಚಿಸಿದ್ದೀರಿ. ಈ ಹಿಂದೆ ಅವರೇ ಬಿಡದಿಯ ಈಗಲ್ಟನ್ ವಿಚಾರದಲ್ಲಿ ಎಕರೆಗೆ 12 ಕೋಟಿ ಪರಿಹಾರ ಕೊಡಬೇಕು ಎಂದು ತೀರ್ಪು ನೀಡಿದ್ದರು. 10 ವರ್ಷದ ಹಿಂದೆಯೇ 12 ಕೋಟಿ ಎಂದು ತೀರ್ಪು ಕೊಟ್ಟಿದ್ದಾರೆ. ಈಗ ಬಿಡದಿಯ ರೈತರ ಜಮೀನಿಗೆ ಎಷ್ಟು ಹಣ ಕೊಡಬೇಕು ಎಂದು ನಾನು ನಿವೃತ್ತ ನ್ಯಾಯಾಧೀಶರನ್ನು ಪ್ರಶ್ನಿಸುತ್ತೇನೆ. ಈ ಬಗ್ಗೆ ಸ್ಪಷ್ಟಪಡಿಸಿ ವರದಿ ಕೊಡಿ ಎಂದು ಸರ್ಕಾರವನ್ನು ಒತ್ತಾಯಿಸಿದರು. 20 ವರ್ಷದಿಂದ ರೈತರಿಗೆ ಅನ್ಯಾಯ: 4,000 ಕುಟುಂಬಗಳಿಗೆ ನಿವೇಶನ ಕೊಡುತ್ತೇವೆ ಎಂದು ಹೇಳಿ ಕೊಡಲಿಲ್ಲ. ಭೂಮಿ ಕೊಟ್ಟ ರೈತರಿಗೆ ಇನ್ನೂ ದುಡ್ಡು ಕೊಟ್ಟಿಲ್ಲ. ಇದನ್ನು ನೋಡಿ ನಾನು ಧ್ವನಿ ಎತ್ತಿದ್ದೇನೆ ಹೊರತು ಅಭಿವೃದ್ಧಿಗೆ ಅಡ್ಡಿ ಮಾಡಲು ಅಲ್ಲ. ರೈತರು ಇನ್ನೂ ಎಷ್ಟು ವರ್ಷ ಕಾಯಬೇಕು? ನೈಸ್ ರಸ್ತೆ ಮಾಡಲು ಎಷ್ಟು ವರ್ಷ ಬೇಕು? ಈಗಾಗಲೇ ಬೆಂಗಳೂರು–ಮೈಸೂರು ಎಕ್ಸ್‌ಪ್ರೆಸ್ ಹೈವೆ ಆಗಿದೆ. ಹಿಂದೆ ಮಾಯಗನಹಳ್ಳಿ ಬಳಿ ಶಾಲಾ ಬಸ್ ಅಪಘಾತದಲ್ಲಿ 8 ಮಕ್ಕಳು ಸತ್ತಾಗ, ಬೆಂಗಳೂರು–ಮೈಸೂರು ನಡುವೆ ದೊಡ್ಡ ರಸ್ತೆ ಮಾಡಬೇಕು ಎಂದು ದೇವೇಗೌಡರು ತೀರ್ಮಾನ ಮಾಡಿದ್ದರು. ಜನರಿಗೆ ಒಳ್ಳೆಯದು ಮಾಡಬೇಕೆಂದು ಕೆಲಸ ಮಾಡಿದವರು ನಾವು ಎಂದು ಹೇಳಿದರು. ಕುಮಾರಸ್ವಾಮಿ ಪಾಪದ ಕೊಳೆಯನ್ನು ನಾವು ತೊಳೆಯುತ್ತಿದ್ದೇವೆ ಎಂಬ ಕಾಂಗ್ರೆಸ್ ನಾಯಕರ ಹೇಳಿಕೆಗೆ ಕಿಡಿಕಾರಿದ ಅವರು, ಕೊಳೆ ನಾ? ಎಲ್ಲಿದೆ ಕೊಳೆ? ನಾವು ರಾಮನಗರಕ್ಕೆ ಬಂದಾಗ ಕನಕಪುರ ಹೇಗಿತ್ತು? ಕನಕಪುರದಲ್ಲಿ ಬೀದಿ ಲೈಟ್ ಕಂಬ ಕೂಡ ಇರಲಿಲ್ಲ. ಕನಕಪುರಕ್ಕೆ ದೇವೇಗೌಡರು ವಿದ್ಯುತ್ ಕನೆಕ್ಷನ್ ಕೊಡಿಸುವಾಗ ಇವರು ಎಲ್ಲಿದ್ದರು? ಕೊತವಾಲನಿಗೆ ಎಂಡ ಕೊಡಲು ಬಾರ್‌ನಲ್ಲಿ ಕೂತಿದ್ದರು ಎಂದು ಡಿಕೆ ಬ್ರದರ್ಸ್ ವಿರುದ್ಧ ವಾಗ್ದಾಳಿ ನಡೆಸಿದರು. ಇದು ಕೇವಲ ಜೆಡಿಎಸ್ ಕಾರ್ಯಕರ್ತರನ್ನ ಎತ್ತಿಕಟ್ಟುವ ವಿಚಾರವಲ್ಲ, ಇಡೀ ರಾಜ್ಯದ ಜನರೇ ಎದ್ದು ನಿಲ್ಲಬೇಕಾಗಿದೆ. ಅಂತಹ ದೊಡ್ಡ ಹಗರಣವಾಗಿದೆ. ರೈತರ ಭೂಮಿ ಲಪಟಾಯಿಸುವ ಕೆಲಸದ ವಿರುದ್ಧ ಧ್ವನಿ ಎತ್ತಲು ಜನ ನಮಗೆ ಶಕ್ತಿ ಕೊಟ್ಟಿದ್ದಾರೆ ಎಂದು ಹೇಳಿದರು.ಪಾಪ ಈಗಿನ ಇಲ್ಲಿಯ ಶಾಸಕ ಒಂದು ಬಾರಿ ನನ್ನ ಜೊತೆಯಲ್ಲೇ ಇದ್ದ. ಆ ಟೈಮಲ್ಲಿ ಕಾಂಟ್ರಾಕ್ಟರ್ 600 ಕೋಟಿ ಕೆಲಸ ಮಾಡಿದ್ದು ದುಡ್ಡು ಹೊಡೆದಾಗ, ಅಯ್ಯಯ್ಯೋ ಅಣ್ಣ ಆ ವಿಷಯ ಎತ್ತಬೇಡಣ್ಣ ಅಂತ ಕಾಲು ಹಿಡಿದುಕೊಳ್ಳಲು ಬಂದಿದ್ದ. ಅದನ್ನು ಅವರು ನೆನಸಿಕೊಳ್ಳಬೇಕು. ಇವನಿಂದ ನಾನು ಕಲಿಯಬೇಕಾ ಎಂದು ಸಚಿವ ಹೆಚ್.ಸಿ.ಬಾಲಕೃಷ್ಣ ವಿರುದ್ಧ ತೀವ್ರವಾಗ್ದಾಳಿ ನಡೆಸಿದರು.